ಸಂಪುಟ: 03 | ಸಂಚಿಕೆ: 253 | ದಿನಾಂಕ: 23-08-2026 | ಭಾನುವಾರ | ಪುಟ: 4 | ಬೆಲೆ: 2.00ರೂ.

ಸಂಪಾದಕರು, ಮಾಲೀಕರು: ರಾಧಿಕಾ ಎ.ಆರ್.

RNI:KARKAN/2023/88508, Postal Reg No:L2/RNP-1287/TMR/2025-27

# ಕರ್ನಾಟಕ ಸಕ್ಸಸ್ ನಂ 1

KARNATAKA SUCCESS NO1 Kannada Daily

Email: radhikaarno1@gmail.com Ph: 9380988530

ಕನ್ನಡ ದಿನಪತ್ರಿಕೆ

ಇದು ಸ್ವಾಭಿಮಾನಿಗಳ ಧ್ವನಿ

## ವಿದ್ಯಾರ್ಥಿಗಳೊಂದಿಗೆ ಜಿಲ್ಲಾಧಿಕಾರಿ ಸಂವಾದ




**ತುಮಕೂರು:** ವಿದ್ಯಾರ್ಥಿಗಳಲ್ಲಿ ಸಾಧನೆಯ ಕನಸು, ಸವಾಲುಗಳನ್ನು ಎದುರಿಸುವ ಧೈರ್ಯ ಹಾಗೂ ನಾಯಕತ್ವದ ಗುಣಗಳನ್ನು ಬೆಳೆಸುವ ಉದ್ದೇಶದಿಂದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತುಮಕೂರು ಜಿಲ್ಲಾ ಘಟಕ ತುಮಕೂರು ವಿಶ್ವವಿದ್ಯಾಲಯ, ವಿವಿ ಕಲಾ ಕಾಲೇಜು, ವಿವಿ ಮಹಿಳಾ ಅಧ್ಯಯನ ಕೇಂದ್ರ ,ಪ್ರೆಸ್ ಕ್ಲಬ್ ಸಹಯೋಗದಲ್ಲಿ ?ಯುವ ಸಂವಾದ ಸಾಧನೆ, ಸವಾಲು, ನಾಯಕತ್ವ ನೇರ ಸಂವಾದ ಹಮ್ಮಿಕೊಂಡಿದೆ. ಆ. 24ರಂದು ಬೆಳಗ್ಗೆ 11 ಗಂಟೆಗೆ ತುಮಕೂರು ವಿಶ್ವವಿದ್ಯಾಲಯದ ಸರ್ ಎಂ. ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ಕಾರ್ಯಕ್ರಮ ನಡೆಯಲಿದೆ. ತುಮಕೂರು ಜಿಲ್ಲಾಧಿಕಾರಿ ಶುಭಾ ಕಲ್ಯಾಣ್ ಅವರು ವಿದ್ಯಾರ್ಥಿಗಳೊಂದಿಗೆ ನೇರವಾಗಿ ಸಂವಾದ ನಡೆಸಲಿದ್ದು, ತಮ್ಮ ಅನುಭವ, ವೃತ್ತಿ ಪಯಣ ಹಾಗೂ ಸಾಧನೆಯ ಹಾದಿಯ ಕುರಿತು ಹಂಚಿಕೊಳ್ಳುವ ಮೂಲಕ ವಿದ್ಯಾರ್ಥಿಗಳಿಗೆ ಸ್ಫೂರ್ತಿ ತುಂಬಲಿದ್ದಾರೆ.

# ಗ್ರಾಮೀಣ ವಿದ್ಯಾರ್ಥಿಗಳಿಗೆ ಉಚಿತ ಬಿಸಿಯೂಟ: ಪೂರ್ವ ಸಿದ್ಧತೆಗಳ ಪರಿಶೀಲನೆ





**ಮಧುಗಿರಿ:** ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಗ್ರಾಮೀಣ ಭಾಗಗಳಿಂದ ಆಗಮಿಸುವ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಶೀಘ್ರದಲ್ಲೇ ಆರಂಭಗೊಳ್ಳಲಿರುವ ಮಧ್ಯಾಹ್ನದ ಉಚಿತ ಬಿಸಿಯೂಟ ಯೋಜನೆಯ ಪೂರ್ವ ಸಿದ್ಧತೆಗಳನ್ನು ವಿಧಾನ ಪರಿಷತ್ ಸದಸ್ಯರಾದ ರಾಜೇಂದ್ರ ರಾಜಣ್ಣ ಅವರು ಪರಿಶೀಲಿಸಿದರು.

ಶಾಸಕ ಕೆ.ಎನ್. ರಾಜಣ್ಣ ಅವರ ಮಹತ್ವಾಕಾಂಕ್ಷಿ ಯೋಜನೆಯ ಭಾಗವಾಗಿ ಕಾಲೇಜಿನಲ್ಲಿ ಬಿಸಿಯೂಟ ವ್ಯವಸ್ಥೆ ಕಲ್ಪಿಸಲಾಗುತ್ತಿದ್ದು, ಇದರ ಅಂಗವಾಗಿ ಅಡುಗೆ ಕೋಣೆ, ಸುರಕ್ಷಿತ ಅನಿಲ ವ್ಯವಸ್ಥೆ, ಭೋಜನ ಶಾಲೆ, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಶುಚಿತ್ವ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಪರಿಶೀಲಿಸಿ ಅಧಿಕಾರಿಗಳು ಹಾಗೂ ಕಾಲೇಜು ಸಿಬ್ಬಂದಿಯಿಂದ ಮಾಹಿತಿ ಪಡೆದರು.

ಈ ಸಂದರ್ಭದಲ್ಲಿ ಕಾಲೇಜಿನ ಸಿಬ್ಬಂದಿ ವರ್ಗದವರು ಹಾಗೂ ಬಿಸಿಯೂಟ ವ್ಯವಸ್ಥೆಯ ಮೇಲ್ವಿಚಾರಕರಿಗೆ ಆಹಾರದ ಗುಣಮಟ್ಟ, ಅಡುಗೆ ಪರಿಸರದ ಸ್ವಚ್ಛತೆ ಹಾಗೂ ವಿದ್ಯಾರ್ಥಿಗಳಿಗೆ ಗುಣಮಟ್ಟದ ಆಹಾರ ಒದಗಿಸುವ ಬಗ್ಗೆ ಹೆಚ್ಚಿನ ಗಮನಹರಿಸುವಂತೆ ಸೂಚಿಸಿದರು.

ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಡಾ.ಕುಮಾರ್, ಪ್ರಾಧ್ಯಾಪಕರಾದ ಮಂಜುನಾಥ್, ಮುರಳೀಧರ್, ಡಾ.ರಂಜಿತಾ, ನಟರಾಜ್, ಯೋಗೇಶ್, ಮಾಜಿ ಪುರಸಭಾ ಅಧ್ಯಕ್ಷರಾದ ಎಂ.ಕೆ.ನಂಜುಂಡ ರಾಜು, ಲಾಲಾಪೇಟೆ ಮಂಜುನಾಥ್, ಮುಖಂಡರಾದ ರಘು ಯಾದವ್, ಅಲೀಮ್, ಮುನ್ನು ಸೇರಿದಂತೆ ಕಾಲೇಜಿನ ಸಿಬ್ಬಂದಿ ವರ್ಗದವರು ಹಾಗೂ ಮುಖಂಡರು ಉಪಸ್ಥಿತರಿದ್ದರು.

## ಡಿ ದೇವರಾಜ್ ಅರಸು 111ನೇ ಜನ್ಮದಿನಾಚರಣೆ

**ತುಮಕೂರು:** ಅಖಿಲ ಭಾರತ ಡಾ. ಅಂಬೇಡ್ಕರ್ ಪ್ರಚಾರ ಸಮಿತಿ ಹಾಗೂ ಅಖಿಲ ಭಾರತ ದಲಿತ ಕ್ರಿಯಾ ಸಮಿತಿ ಕೇಂದ್ರ ಕಚೇರಿಯಲ್ಲಿ ಡಿ ದೇವರಾಜ್ ಅರಸು ರವರ 111ನೇ ಜನ್ಮದಿನಾಚರಣೆ ಹಾಗೂ ವಿಶ್ವ ಛಾಯಾಗ್ರಹಣ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಹಾಗೂ ಸರಳವಾಗಿ ಆಚರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ಹಾಗೂ ಉಸ್ತುವಾರಿ ವಹಿಸಿದ್ದ ಅಖಿಲ ಭಾರತ ಡಾ. ಅಂಬೇಡ್ಕರ್ ಪ್ರಚಾರ ಸಮಿತಿ ಹಾಗೂ ಅಖಿಲ ಭಾರತ ದಲಿತ ಕ್ರಿಯಾ ಸಮಿತಿ ಜಿಲ್ಲಾಧ್ಯಕ್ಷರಾದ ಎನ್. ಕೆ. ನಿಧಿಕುಮಾರ್ ಮಾತನಾಡಿ ನಮ್ಮ ರಾಜ್ಯದಲ್ಲಿ ಹಲವಾರು ಮುಖ್ಯಮಂತ್ರಿಗಳು ಆಡಳಿತ ನಡೆಸಿದ್ದಾರೆ. ಆದರೆ ಅವರಲ್ಲಿ ಕೆಲವರನ್ನು ಮಾತ್ರ ನಾವು ಪದೇ ಪದೇ ನೆನಪು ಮಾಡಿಕೊಳ್ಳುತ್ತೇವೆ,

ಕಾರಣ ಅವರಿಂದ ನಮ್ಮ ರಾಜ್ಯಕ್ಕೆ ಹಾಗೂ ರಾಜ್ಯದ ಜನತೆಗೆ ಆಗಿರುವ ಶಶ್ವಾತ ಅನುಕೂಲ ಹಾಗೂ ನೆನಪಿಸಿಕೊಳ್ಳುವಂತಹ ಕಾರ್ಯಗಳು ಅದರಲ್ಲಿ ಪ್ರಪ್ರಥಮವಾಗಿ ನಿಂತುಕೊಳ್ಳುವವರು ಎಂದರೇ ದಿವಂಗತ ಡಿ.ದೇವರಾಜ ಅರಸು ರವರು, ಏಕೆಂದರೆ ಅವರಲ್ಲಿದ್ದ ಜನಪರ ಕಾಳಜಿ ಸಾಮಾಜಿಕ ನ್ಯಾಯದ ಮೇಲಿನ ಬದ್ಧತೆ ಮತ್ತು ರಾಜಕೀಯ ಮುನ್ನೋಟಗಳ ಕಾರಣವೇ ಇಂದು ಮೊದಲಿಗರಾಗಿದ್ದಾರೆ. ರಾಜಕೀಯ, ಅಧಿಕಾರ ಅರಸು ಅವರಿಗೆ ಗುರಿಯಾಗಿರಲಿಲ್ಲ ತಮ್ಮ ಯೋಚನೆ-ಯೋಜನೆಗಳನ್ನು ಅನುಷ್ಠಾನಗೊಳಿಸುವ ಮಾರ್ಗವಾಗಿತ್ತು ಭೂ ಸುಧಾರಣೆ ಮೀಸಲಾತಿ ಮಲಹೊರುವ ಪದ್ಧತಿಯ ನಿಷೇಧ ಸೇರಿದಂತೆ ಯಾವ ಯೋಜನೆಗಳಿಗಾಗಿಯೂ ರಾಜ್ಯದ ಜನತೆ ಚಳುವಳಿ-ಹೋರಾಟಗಳನ್ನು ನಡೆಸಿರಲಿಲ್ಲ ಇವುಗಳನ್ನೆಲ್ಲ ಅರಸು ಅವರು ಜನ ಕೇಳದೆಯೇ ಅವರ ಹಿತವನ್ನು ಗಮನದಲ್ಲಿಟ್ಟುಕೊಂಡು ಜಾರಿಗೆ ತಂದಿದ್ದರು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಅಖಿಲ ಭಾರತ ಡಾ. ಅಂಬೇಡ್ಕರ್ ಪ್ರಚಾರ ಸಮಿತಿ ಹಾಗೂ ಅಖಿಲ ಭಾರತ ದಲಿತ ಕ್ರಿಯಾ ಸಮಿತಿ ಜಿಲ್ಲಾಧ್ಯಕ್ಷ ಎನ್. ಕೆ ನಿಧಿಕುಮಾರ್, ರಾಜ್ಯ ಉಪಾಧ್ಯಕ್ಷರಾದ ಇಂದ್ರಕುಮಾರ್ ಡಿ.ಕೆ, ಅಖಿಲ ಕರ್ನಾಟಕ ಶ್ರೀ ಮಹರ್ಷಿ ವಾಲ್ಮೀಕಿ ನಾಯಕ ಮಹಾಸಭಾ ಜಿಲ್ಲಾಧ್ಯಕ್ಷರು ಹಾಗೂ ಉಪ ವಿಭಾಗದ ಜಾಗೃತಿ ಉಸ್ತುವಾರಿ ಸಮಿತಿ ಸದಸ್ಯರಾದ ರಾಮಾಂಜನೇಯ ಆರ್. ಮುಖಂಡರುಗಳಾದ ಇಲ್ಲಾಸ್ ಅಹ್ಮದ್, ಮೋಯಿನ್ ಅಹ್ಮದ್, ಚಿಕ್ಕ ಮಂಜಣ್ಣ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.



## ಆಂಜನೇಯ ದೇಗುಲ ಅಪವಿತ್ರ: ಕಠಿಣ ಕಾನೂನು ಕ್ರಮಕ್ಕೆ ಆಗ್ರಹ



**ಮಧುಗಿರಿ:** ಹಾವೇರಿ ಜಿಲ್ಲೆಯ ಶಿಗ್ಗಾವಿ ಪಟ್ಟಣದ ಆಂಜನೇಯ ಸ್ವಾಮಿ ದೇವಸ್ಥಾನದ ಆವರಣದಲ್ಲಿ ಅನ್ಯ ಕೋಮಿನ ಯುವಕ ಮೂತ್ರ ವಿಸರ್ಜನೆ ಮಾಡಿ ಪುಣ್ಯಕ್ಷೇತ್ರವನ್ನು ಅಪವಿತ್ರಗೊಳಿಸಿರುವ ಹೇಯ ಕೃತ್ಯವನ್ನು ಮಧುಗಿರಿ ಆರ್ಯವೈಶ್ಯ ಶ್ರೀರಾಮ ಸೇವಾ ಸಮಿತಿಯ ಅಧ್ಯಕ್ಷರಾದ ರಘುನಾಥ್ ಮಧುಗಿರಿ ಅವರು ಅತ್ಯಂತ ತೀವ್ರವಾಗಿ ಖಂಡಿಸಿದ್ದಾರೆ.

ಇಂತಹ ದುಷ್ಕೃತ್ಯಗಳು ಸಮಾಜದ ಶಾಂತಿ, ಸೌಹಾರ್ದತೆ ಮತ್ತು ಧಾರ್ಮಿಕ ಸಾಮರಸ್ಯವನ್ನು ಹಾಳುಮಾಡುವ ದುರುದ್ದೇಶಪೂರಿತ ಷಡ್ಯಂತ್ರವಾಗಿದ್ದು, ಆರೋಪಿಯ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕೆಂದು ಅವರು ಆಗ್ರಹಿಸಿದ್ದಾರೆ. ಆಗಸ್ಟ್ 20ರ ರಾತ್ರಿ ಸುಮಾರು 9:30 ರಿಂದ 10:00 ಗಂಟೆಯ ಸುಮಾರಿಗೆ ಶಿಗ್ಗಾವಿ ಪಟ್ಟಣದ ಟೆಂಪೋ ನಿಲ್ದಾಣದ ಸಮೀಪವಿರುವ ಐತಿಹಾಸಿಕ ಆಂಜನೇಯ ಸ್ವಾಮಿ ದೇವಸ್ಥಾನದಲ್ಲಿ ಪವಿತ್ರ ಶ್ರಾವಣ ಮಾಸದ ವಿಶೇಷ ಪೂಜಾ ಕೈಂಕರ್ಯಗಳು ಹಾಗೂ ಧಾರ್ಮಿಕ ವಿಧಿವಿಧಾನಗಳು ನಡೆಯುತ್ತಿದ್ದವು. ಈ ಪವಿತ್ರ ಸಂದರ್ಭದಲ್ಲಿ ಅಕ್ರಮವಾಗಿ ಯುವಕನೊಬ್ಬ ದೇವಾಲಯದ ಆವರಣಕ್ಕೆ ಪ್ರವೇಶಿಸಿ ಮೂತ್ರ ವಿಸರ್ಜನೆ ಮಾಡುವ ಮೂಲಕ ಸನ್ನಿಧಾನವನ್ನು ಅಪವಿತ್ರಗೊಳಿಸಿದ್ದಾನೆ ಎನ್ನಲಾಗಿದೆ.

"ಶ್ರಾವಣ ಮಾಸದಂತಹ ಅತ್ಯಂತ ಪಾವಿತ್ರ್ಯತೆಯ ದಿನಗಳಲ್ಲಿ ಭಕ್ತರು ಅಪಾರ ಭಕ್ತಿ-ಶ್ರದ್ಧೆಯಿಂದ ಆರಾಧಿಸುವ ಪುಣ್ಯಕ್ಷೇತ್ರಕ್ಕೆ ನುಗ್ಗಿ ಮೊಹಮ್ಮದ್ ಜಾಫರ್ ಎಸಗಿರುವ ಈ ವಿಕೃತ ಕೃತ್ಯ ಸಮಸ್ತ ಹಿಂದೂ ಸಮಾಜದ ಧಾರ್ಮಿಕ ಭಾವನೆಗಳಿಗೆ ಬಗೆದ ಘೋರ ಅಪಚಾರವಾಗಿದೆ. ಸಮಾಜದಲ್ಲಿ ಉದ್ದೇಶಪೂರ್ವಕವಾಗಿ ಪ್ರಕ್ಷುಬ್ಧ ವಾತಾವರಣ ಸೃಷ್ಟಿಸಿ, ಶಾಂತಿ ಮತ್ತು ಸೌಹಾರ್ದತೆಗೆ ಧಕ್ಕೆ ತರುವ ಇಂತಹ ಕೃತ್ಯಗಳನ್ನು ನಾಗರಿಕ ಸಮಾಜದಲ್ಲಿ ಯಾವುದೇ ಕಾರಣಕ್ಕೂ ಸಹಿಸಲು ಸಾಧ್ಯವಿಲ್ಲ," ಎಂದು ಕಿಡಿಕಾರಿದರು.

"ಪೊಲೀಸ್ ಇಲಾಖೆ ಹಾಗೂ ರಾಜ್ಯ ಸರ್ಕಾರವು ಈ ಪ್ರಕರಣವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಬೇಕು. ಬಂಧಿತ ಆರೋಪಿ ವಿರುದ್ಧ ಯಾವುದೇ ಮುಲಾಜಿಲ್ಲದೆ ಕಠಿಣ ಸೆಕ್ಷನ್‌ಗಳ ಅಡಿಯಲ್ಲಿ ಕಾನೂನು ಕ್ರಮ ಜರುಗಿಸಬೇಕು. ಇಂತಹ ಕೃತ್ಯಗಳು ಭವಿಷ್ಯದಲ್ಲಿ ಮರುಕಳಿಸದಂತೆ ಸಮಾಜದ್ರೋಹಿಗಳಿಗೆ ಕಠಿಣ ಶಿಕ್ಷೆಯ ಮೂಲಕ ಎಚ್ಚರಿಕೆಯ ಸಂದೇಶ ರವಾನಿಸಬೇಕು ಹಾಗೂ ಧಾರ್ಮಿಕ ಕ್ಷೇತ್ರಗಳಿಗೆ ಸೂಕ್ತ ರಕ್ಷಣೆ ಕಲ್ಪಿಸಬೇಕು," ಎಂದು ಪತ್ರಿಕಾ ಪ್ರಕಟಣೆಯಲ್ಲಿ ರಘುನಾಥ್ ಮಧುಗಿರಿ ಅವರು ಒತ್ತಾಯಿಸಿದ್ದಾರೆ.

## ಸುರಿಗೇನಹಳ್ಳಿ ಗುಡ್ಡದ ರಂಗನಾಥ ಸ್ವಾಮಿಗೆ ವಿಶೇಷ ಪೂಜೆ ಮಹಾದಾಸೋಹ



**ಗುಬ್ಬಿ:** ತಾಲ್ಲೂಕಿನ ಸುರಿಗೇನಹಳ್ಳಿ ಗ್ರಾಮದ ಶ್ರೀ ಗುಡ್ಡದ ರಂಗನಾಥಸ್ವಾಮಿ ದೇವಸ್ಥಾನದಲ್ಲಿ ಶ್ರಾವಣ ಮಾಸದ ಶನಿವಾರದ ಪ್ರಯುಕ್ತ ವಿಶೇಷ ಪೂಜಾ ಕಾರ್ಯಕ್ರಮ ಹಾಗೂ ಮಹಾದಾಸೋಹವನ್ನು ಭಕ್ತಿಭಾವದಿಂದ ನೆರವೇರಿಸಲಾಯಿತು.

ಶ್ರಾವಣ ಶನಿವಾರದ ಅಂಗವಾಗಿ ಬೆಳಗ್ಗೆಯಿಂದಲೇ ಶ್ರೀ ರಂಗನಾಥ ಸ್ವಾಮಿಯವರಿಗೆ ಅಭಿಷೇಕಾದಿಯಾಗಿ, ವಿಶೇಷ ಪೂಜೆ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ನೆರವೇರಿಸಲಾಯಿತು. ದೇವಸ್ಥಾನವನ್ನು ವಿಶಿಷ್ಟವಾಗಿ ಅಲಂಕರಿಸಲಾಗಿತ್ತು. ಬೆಳಗ್ಗೆ 11 ಗಂಟೆ ನಂತರ ಅಕ್ಕ ಪಕ್ಕದ ಗ್ರಾಮಸ್ಥರಿಂದ ಶ್ರೀ ಸ್ವಾಮಿಯವರಿಗೆ ವಿಶೇಷ ಆರತಿ ಸೇವೆ ಸಲ್ಲಿಸಲಾಯಿತು.

ಮಹಿಳೆಯರು ಮೆರವಣಿಗೆಯಲ್ಲಿ ಆರತಿ ಹೊತ್ತು ಬಂದು ಶ್ರೀ ಸ್ವಾಮಿಯವರಿಗೆ ತಮ್ಮ ಭಕ್ತಿ ಸಮರ್ಪಿಸಿದರು. ನಂತರ ಮಹಾಮಂಗಳಾರತಿಯನ್ನು ನೆರವೇರಿಸಲಾಯಿತು. ನಂತರ ಸುರಿಗೇನಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರ ಸಹಕಾರದಲ್ಲಿ ಭಕ್ತಾದಿಗಳಿಗೆ ಮಹಾದಾಸೋಹದ ವ್ಯವಸ್ಥೆ ಮಾಡಲಾಗಿತ್ತು. ಸಾವಿರಾರು ಭಕ್ತರು ದೇವಸ್ಥಾನಕ್ಕೆ ಆಗಮಿಸಿ ಶ್ರೀ ಸ್ವಾಮಿಯವರ ದರ್ಶನ ಪಡೆದು ದಾಸೋಹವನ್ನು ಸ್ವೀಕರಿಸಿದರು.

ಈ ಸಂದರ್ಭದಲ್ಲಿ ದೇವಸ್ಥಾನದ ಆಡಳಿತ ಮಂಡಳಿ ಸದಸ್ಯರು, ಪ್ರಧಾನ ಅರ್ಚಕರು, ಗ್ರಾಮಸ್ಥರು ಹಾಗೂ ಸುತ್ತಮುತ್ತಲಿನ ಗ್ರಾಮಗಳ ಪ್ರಮುಖರು ಸೇರಿದಂತೆ ಅಪಾರ ಸಂಖ್ಯೆಯ ಭಕ್ತಾದಿಗಳು ಉಪಸ್ಥಿತರಿದ್ದರು.

### ಎಸ್‌ಎಸ್‌ಎಲ್‌ಸಿ-ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

## 'ಅಗತ್ಯವಿರುವವರಿಗೆ ಸಹಾಯ ಮಾಡುವುದು ಪ್ರತಿಯೊಬ್ಬರ ಕರ್ತವ್ಯ'





**ಶಿರಾ:** ನಗರದ ಜಾಮಿಯಾ ಶಾದಿಮಹಲ್‌ನಲ್ಲಿ ದಿವಂಗತ ಅಲ್ಲಬಕಶ್ ಕೆ. ಪ್ಯಾರುಸಾಬ್ ಹಾಗೂ ತಯ್ಯಬಾ ಅಫ್ಸರಿ ಖಾನಂ ಅವರ ಸ್ಮರಣಾರ್ಥವಾಗಿ ಜಃಖ ಗ್ರೂಪ್ ವತಿಯಿಂದ ಶಿರಾ ನಗರದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ 3ನೇ ವರ್ಷದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಬುರಾನ್ ಮಹಮ್ಮದ್ ಹಾಗೂ ಸಲ್ಮಾನ್ ಮಹಮ್ಮದ್ ಅವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಶಿರಾ ನಗರಸಭೆ ಅಧ್ಯಕ್ಷ ಜೀಷನ್ ಮಹಾಮುಧ್ ಅವರು ಭಾಗವಹಿಸಿ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಅಭಿನಂದಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ನಗರಸಭೆ ಅಧ್ಯಕ್ಷ ಜೀಷನ್ ಮಹಾಮುಧ್ , ಕಳೆದ ಮೂರು ವರ್ಷಗಳಿಂದ ನಿರಂತರವಾಗಿ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ. ದೇವರು ನಮಗೆ ನೀಡಿರುವುದರಲ್ಲಿ ಅಲ್ಪಸ್ವಲ್ಪವನ್ನಾದರೂ ಬಡವರು ಹಾಗೂ ಅಗತ್ಯವಿರುವವರಿಗೆ ಸಹಾಯ ಮಾಡುವ ಮನೋಭಾವ ಪ್ರತಿಯೊಬ್ಬರಲ್ಲೂ ಇರಬೇಕು. ಮನುಷ್ಯ ಎಷ್ಟೇ ದೊಡ್ಡ ವ್ಯಕ್ತಿಯಾಗಿದ್ದರೂ ಕೊನೆಗೆ ದೇವರ ಬಳಿಗೆ ಹೋಗುವಾಗ ಯಾವುದೇ ಸಂಪತ್ತನ್ನು ಕೊಂಡೊಯ್ಯಲು ಸಾಧ್ಯವಿಲ್ಲ. ಆದ್ದರಿಂದ ಸಮಾಜದ ಬಡವರು ಮತ್ತು ಅಗತ್ಯವಿರುವವರಿಗೆ ಸಹಾಯ ಮಾಡುವುದು ಪ್ರತಿಯೊಬ್ಬರ ಕರ್ತವ್ಯ ಎಂದರು.

ಈ ವರ್ಷ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿರುವ ವಿದ್ಯಾರ್ಥಿಗಳಿಗೆ ಹೃತ್ಪೂರ್ವಕ ಅಭಿನಂದನೆ ಸಲ್ಲಿಸಿದ ಅವರು, ವಿದ್ಯಾರ್ಥಿಗಳು ಇದೇ ರೀತಿಯಲ್ಲಿ ಉತ್ತಮ ಸಾಧನೆ ಮಾಡಿ ಮುಂದಿನ ದಿನಗಳಲ್ಲಿ ಸಮಾಜಕ್ಕೆ ಕೊಡುಗೆ ನೀಡಬೇಕು ಎಂದು ಶುಭ ಹಾರೈಸಿದರು.

ನೀರನ್ನು ಮಿತವಾಗಿ ಬಳಸಿ: ನಗರದ ನಾಗರಿಕರಿಗೆ ಕಿವಿಮಾತು ಹೇಳಿದ ಜೀಷನ್ ಮಹಾಮುಧ್, ನೀರನ್ನು ಮಿತವಾಗಿ ಬಳಸಿ, ಯಾವುದೇ ಕಾರಣಕ್ಕೂ ನೀರನ್ನು ವ್ಯರ್ಥ ಮಾಡಬಾರದು. ಪ್ರಸ್ತುತ ನೀರಿನ ಸಮಸ್ಯೆ ಗಂಭೀರವಾಗಿದ್ದು, ನಾಗರಿಕರು ನೀರಿನ ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದರು.

ಅಮೃತ್ 2.0 ಮನೆ ಮನೆ ಗಂಗೆ ಯೋಜನೆಯಡಿ ಸುಮಾರು ?75 ಕೋಟಿ ವೆಚ್ಚದಲ್ಲಿ ಕಾಮಗಾರಿ ನಡೆಯುತ್ತಿದ್ದು, ಈಗಾಗಲೇ 1ರಿಂದ 10ನೇ ವಾರ್ಡ್‌ಗಳವರೆಗೆ ನೀರು ಪೂರೈಕೆ ಕಾರ್ಯ ನಡೆಯುತ್ತಿದೆ. ನಗರಸಭೆಯ 31 ಸದಸ್ಯರ ಸಹಕಾರದೊಂದಿಗೆ ಉಳಿದ ಕಾಮಗಾರಿಗಳನ್ನು ಶೀಘ್ರವಾಗಿ ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದರು. ಅದೇ ರೀತಿ ಆರ್‌ಎಂಸಿ ಮಾರುಕಟ್ಟೆಯಿಂದ ಕೆಎಸ್‌ಆರ್‌ಟಿಸಿ ಸರ್ಕಾರಿ ಬಸ್ ನಿಲ್ದಾಣ, ದೊಡ್ಡಕೆರೆ ಮೂಲಕ ಚಂಗಾವರ ಸರ್ಕಲ್‌ವರೆಗೆ ಮೀಡಿಯನ್ ಲೈಟ್ (ವಿದ್ಯುತ್ ದೀಪ) ಅಳವಡಿಸುವ ಕಾಮಗಾರಿಯನ್ನು ಸುಮಾರು 5, 5 ಕೋಟಿ ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿದ್ದು, ನಗರಸಭೆಯ 31 ಸದಸ್ಯರ ಸಹಕಾರದೊಂದಿಗೆ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಿರಾ ನಗರಸಭೆ ಉಪಾಧ್ಯಕ್ಷ ಲಕ್ಷ್ಮಿಕಾಂತ್, ಸದಸ್ಯರಾದ ಬುರಾನ್ ಮಹಮ್ಮದ್, ಅಜಯ್ ಕುಮಾರ್ ಎಸ್.ಎಸ್., ಆರ್. ರಾಮು, ಫರ್ಮಾನ್ ಖಾನ್, ಸಫೀರ್ (ಝೂಂಕು), ಬಾನು, ಪ್ರಕಾಶ್, ಗೌಸ್ ಮೊಹಿದ್ದೀನ್, ಕೆಪಿಸಿಸಿ ಲೋಕಣ್ಣ, ಮಾಜಿ ಸದಸ್ಯರಾದ ಹಬೀಬ್ ಖಾನ್, ರಾಘಣ್ಣ, ಇರ್ಷಾದ್ ಅಹಮದ್, ಜೀವನ್, ರಹಮತ್ ಉಲ್ಲಾ, ಕೆ. ನಜೀರ್ ಅಹಮದ್ ಖಾನ್, ಮುಬಾರಕ್, ಧ್ರುವಕುಮಾರ್, ಧರಣೀಶ್, ನವಾಜ್ ಖಾನ್, ಅಜರ್ ಖಾನ್ ಸೇರಿದಂತೆ ZBS ಅಭಿಮಾನಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.

## 'ಈದ್ ಮಿಲಾದ್ ಹಬ್ಬವನ್ನು ಸೌಹಾರ್ದತೆಯಿಂದ ಆಚರಣೆ ಮಾಡಿ'

**ಪಟ್ಟನಾಯಕನಹಳ್ಳಿ:** ಸ್ನೇಹ, ಪ್ರೀತಿ ವಿಶ್ವಾಸದಿಂದ ಎಲ್ಲರೂ ಒಗ್ಗೂಡಿಸಿ ಹಬ್ಬ ಆಚರಣೆ ಮಾಡಿದಾಗ ಸಮಾಜದಲ್ಲಿ ಸಾಮರಸ್ಯ ಮೂಡಲು ಸಾಧ್ಯ. ನಾವೆಲ್ಲರೂ ಒಂದೇ ಎಂಬ ಭಾವನೆ ಎಲ್ಲರಲ್ಲೂ ಮೂಡಿದಾಗ ಸಮಾಜದ ನೆಮ್ಮದಿ ಬದುಕಿಗೆ ಭದ್ರಾ ಬುನಾದಿಯಾಗಲಿದೆ ಎಂದು ಪಟ್ಟನಾಯಕನಹಳ್ಳಿ ಪೊಲೀಸ್ ಠಾಣಾ ಪಿಎಸ್‌ಐ ಹರೀಶ್ ಹೇಳಿದರು.

ಶಿರಾ ತಾಲೂಕಿನ ಪಟ್ಟನಾಯಕನಹಳ್ಳಿ ಪೊಲೀಸ್ ಠಾಣಾ ಆವರಣದಲ್ಲಿ ಶನಿವಾರ ನಡೆದ ಈದ್ ಮಿಲಾದ್ ಹಬ್ಬದ ಶಾಂತಿ ಸಭೆಯಲ್ಲಿ ಮುಸ್ಲಿಂ ಬಾಂಧವರಿಗೆ ಈದ್ ಮಿಲಾದ್ ಹಬ್ಬವನ್ನು ಸೌಹಾರ್ದತೆಯಿಂದ ಆಚರಣೆ ಮಾಡಿ ಎಂದು ಸಲಹೆ ನೀಡಿ ಮಾತನಾಡಿದರು.

ಎಲ್ಲರನ್ನೂ ಪ್ರೀತಿಸುವ ಗುಣ ಪ್ರತಿಯೊಬ್ಬ ವ್ಯಕ್ತಿಯಲ್ಲಿ ಬಂದಾಗ ಯಾವುದೇ ಕಾನೂನುಬಾಹಿರ ಚಟುವಟಿಕೆಗಳು ನಡೆಯಲು ಸಾಧ್ಯವಿಲ್ಲ. ಜನಸ್ನೇಹಿ ಪೊಲೀಸ್ ಆಡಳಿತಕ್ಕೆ ಸಾರ್ವಜನಿಕರ ಸಹಕಾರ ಅಗತ್ಯ ಎಂದರು.

ಪಿ ಎಸ್ ಐ ಸುಹೇಲ್ ಅಹಮದ್, ನೂರಾನಿ ಮಸೀದಿ ಅಧ್ಯಕ್ಷ ಬಾಬಾಜಾನ್, ಉಪಾಧ್ಯಕ್ಷ ಫಕ್ರುದ್ದೀನ್ ಬಾಬು, ಕಾರ್ಯದರ್ಶಿ ಅಫ್ರೋಜ್ ಶೇಕ್, ಖಜಾಂಚಿ ನಿಸಾರ್ ಅಹಮದ್, ಸದಸ್ಯ ಮಜೀದ್, ಮುಖಂಡರಾದ ಅಲ್ತಾಫ್, ಪ್ಯಾರಜಾನ್ ಸೇರಿದಂತೆ ಬ್ರಹ್ಮಸಂದ್ರ ಗ್ರಾಮದ ಮುಸ್ಲಿಂ ಮುಖಂಡರು ಉಪಸ್ಥಿತರಿದ್ದರು.



# ವಿಶ್ವದ ಅತಿದೊಡ್ಡ ಸಕ್ಕರೆ ಉತ್ಪಾದಕ ದೇಶವೇ ರಫ್ತು ಮಾಡಿಕೊಳ್ಳುತ್ತಿರುವುದೇಕೆ: ಮಲ್ಲಿಕಾರ್ಜುನ ಖರ್ಗೆ

**ನವದೆಹಲಿ:** ಸಕ್ಕರೆ ಬೆಲೆ ಏರಿಕೆ ಮತ್ತು ಸಕ್ಕರೆಯ ಕಡಿಮೆ ದಾಸ್ತಾನು ವಿಷಯವಾಗಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಶನಿವಾರ ಕೇಂದ್ರ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದು, 'ಮೋದಿ ಸರ್ಕಾರದ ನೀತಿಗಳ ಕಹಿ ಭಾವನೆಯು ಸಕ್ಕರೆಯ ಸಿಹಿಯಲ್ಲಿಯೂ ಬೆರೆತಿದೆ' ಎಂದು ಆರೋಪಿಸಿದ್ದಾರೆ.

'ಎಕ್ಸ್'ನಲ್ಲಿನ ಪೋಸ್ಟ್ ಒಂದರಲ್ಲಿ, ಖರ್ಗೆ ಅವರು ಪ್ರಧಾನಿ ಮೋದಿ ಸರ್ಕಾರಕ್ಕೆ ಮೂರು ನೇರ ಪ್ರಶ್ನೆಗಳನ್ನು ಕೇಳಿದ್ದು, ಸರ್ಕಾರದ 'ಆತ್ಮನಿರ್ಭರ ಭಾರತ'ದ ಘೋಷಣೆಯ ಬಗ್ಗೆಯೂ ಪ್ರಶ್ನಿಸಿದ್ದಾರೆ.

ಹಬ್ಬಗಳಿಗೂ ಮುನ್ನವೇ, ಮೋದಿ ಸರ್ಕಾರದ ನೀತಿಗಳ ಕಹಿ ಅಂಶಗಳು ಸಕ್ಕರೆಯ ಸಿಹಿಯಲ್ಲಿ ಬೆರೆತುಹೋಗಿವೆ. ಮೋದಿ ಸರ್ಕಾರಕ್ಕೆ ಮೂರು ನೇರ ಪ್ರಶ್ನೆಗಳು: 1. ವಿಶ್ವದ ಅತಿದೊಡ್ಡ ಸಕ್ಕರೆ ಉತ್ಪಾದಕ ಮತ್ತು ರಫ್ತುದಾರ ದೇಶವಾದ ಭಾರತದಲ್ಲಿ, ಸಕ್ಕರೆ ದಾಸ್ತಾನು ಇಂದು ಕಳೆದ 9 ವರ್ಷಗಳಲ್ಲೇ ಅತ್ಯಂತ ಕಡಿಮೆ ಮಟ್ಟಕ್ಕೆ ಕುಸಿದಿರುವುದೇಕೆ? ರಫ್ತನ್ನು ನಿಲ್ಲಿಸುವ ಮತ್ತು 1 ದಶಲಕ್ಷ ಟನ್ ಸಕ್ಕರೆಯನ್ನು ಸುಂಕ-ಮುಕ್ತವಾಗಿ ಆಮದು ಮಾಡಿಕೊಳ್ಳುವ ಪರಿಸ್ಥಿತಿಗೆ ನಾವು ಹೇಗೆ ತಲುಪಿದೆವು? 2. ಮೂರು ತಿಂಗಳುಗಳಲ್ಲಿ ಸಕ್ಕರೆ ಬೆಲೆ ಸುಮಾರು ಶೇ 40ರಷ್ಟು ಏರಿಕೆಯಾಗಿದೆ; ಹಬ್ಬಗಳ ಹೊತ್ತಲ್ಲೇ ಸಾರ್ವಜನಿಕರ ಮೇಲೆ ಹೊರೆಯಾಗಿರುವ ಈ ಬೆಲೆ ಏರಿಕೆಗೆ ಯಾರು ಹೊಣೆ?



3. ದೇಶದಲ್ಲಿ ಸಕ್ಕರೆ ಕೊರತೆಯಿರುವಾಗ ಮತ್ತು ಸರ್ಕಾರವು ವಿದೇಶದಿಂದ ಸಕ್ಕರೆಯನ್ನು ಆಮದು ಮಾಡಿಕೊಳ್ಳುತ್ತಿರುವಾಗ, 'ಇ20' ಇಂಧನಕ್ಕಾಗಿ ಎಥೆನಾಲ್ ಉತ್ಪಾದಿಸಲು ಕಬ್ಬು ಮತ್ತು ಧಾನ್ಯಗಳನ್ನು ಬಳಸುವ ನೀತಿಯನ್ನು ಏಕೆ ಪರಿಶೀಲಿಸಲಾಗುತ್ತಿಲ್ಲ? ಇದೇನಾ 'ಸ್ವಾವಲಂಬಿ ಭಾರತ'?' ಎಂದು ಖರ್ಗೆ ಬರೆದಿದ್ದಾರೆ. ಕೇಂದ್ರದ ಎಥೆನಾಲ್ ಮಿಶ್ರಣ ನೀತಿಯನ್ನು ಟೀಕಿಸಿದ ಕಾಂಗ್ರೆಸ್ ಮುಖ್ಯಸ್ಥರು, 'ಮೊದಲು ಸಕ್ಕರೆ ಉತ್ಪಾದನೆ ಕುಸಿಯಿತು, ನಂತರ ದಾಸ್ತಾನು ಕಳೆದ 9 ವರ್ಷಗಳಲ್ಲೇ ಅತ್ಯಂತ ಕಡಿಮೆ ಮಟ್ಟಕ್ಕೆ ತಲುಪಿತು, ಈಗ ನಾವು ವಿದೇಶದಿಂದ ಸಕ್ಕರೆಯನ್ನು ಆಮದು ಮಾಡಿಕೊಳ್ಳುತ್ತಿದ್ದೇವೆ; ಆದರೆ ಮತ್ತೊಂದೆಡೆ, ಪೆಟ್ರೋಲ್‌ನೊಂದಿಗೆ ಬೆರೆಸಲು ನಾವು ಕಬ್ಬನ್ನು ಎಥೆನಾಲ್ ತಯಾರಿಕೆಗೆ ಬಳಸುತ್ತಿದ್ದೇವೆ!' ಎಂದು ಹೇಳಿದರು.ಜುಲೈ 20 ರಂದು ಪ್ರತಿ ಕೆಜಿಗೆ ?48.18 ಇದ್ದ ಸಕ್ಕರೆಯ ಚಿಲ್ಲರೆ ಮಾರಾಟ ದರವು ಆಗಸ್ಟ್ 20ರ ವೇಳೆಗೆ ಪ್ರತಿ ಕೆಜಿಗೆ ?55.70ಕ್ಕೆ ಏರಿಕೆಯಾಗಿರುವುದಕ್ಕೆ ಎಥೆನಾಲ್ ಉತ್ಪಾದನೆಗೆ ಕಬ್ಬನ್ನು ಬಳಸುತ್ತಿರುವುದು ಕಾರಣವಲ್ಲ, ಬದಲಾಗಿ ಇದು ವಿವಿಧ ಅಂಶಗಳ ಸಂಯೋಜನೆಯ ಪರಿಣಾಮ ಎಂದು ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವಾಲಯ ಶುಕ್ರವಾರ ತಿಳಿಸಿದೆ.

'ಎಥೆನಾಲ್ ತಯಾರಿಕೆಗೆ ಬಳಸಲಾದ ಕಬ್ಬಿನ ಪ್ರಮಾಣವು 2022-23ರಲ್ಲಿದ್ದ ಸುಮಾರು ಶೇ 12ರಿಂದ 2025-26ರ ವೇಳೆಗೆ ಸುಮಾರು ಶೇ 9ಕ್ಕೆ ಇಳಿಕೆಯಾಗಿದೆ; ಅದೇ ಸಮಯದಲ್ಲಿ, ದೇಶದ ಒಟ್ಟು ಎಥೆನಾಲ್ ಉತ್ಪಾದನೆಯಲ್ಲಿ ಸುಮಾರು ಮೂರನೇ ನಾಲ್ಕು ಭಾಗದಷ್ಟು ಈಗ ಧಾನ್ಯಗಳಿಂದ, ಅದರಲ್ಲೂ ವಿಶೇಷವಾಗಿ ಜೋಳದಿಂದ (ಮೈಸ್) ಉತ್ಪಾದನೆಯಾಗುತ್ತಿದೆ ಎಂದು ಸಚಿವಾಲಯ ವಿವರಿಸಿದೆ. ದೇಶೀಯ ಉತ್ಪಾದನೆ ನಿರೀಕ್ಷೆಗಿಂತ ಕಡಿಮೆಯಾಗಿದೆ, ಹಬ್ಬದ ಋತುವಿಗೆ ಆವೃತ್ತಿಗೆ ಮುಂಚಿತವಾಗಿ ಬೇಡಿಕೆ ಹೆಚ್ಚಳ, ಕಬ್ಬು ಬೆಳೆಗೆ ಹವಾಮಾನ ಸಂಬಂಧಿತ ಹಾನಿ, ಜಾಗತಿಕ ಪೂರೈಕೆ ಬಿಗಿಗೊಳಿಸುವುದು ಮತ್ತು ಊಹಾಪೋಹ ಮತ್ತು ಸಂಗ್ರಹಣೆಯಿಂದಾಗಿ ಬೆಲೆ ಏರಿಕೆ ಸಂಭವಿಸಿದೆ ಎಂದು ಸರ್ಕಾರ ಹೇಳಿದೆ.

# ತುಮಕೂರಿನಲ್ಲಿ 2ನೇ ವಿಮಾನ ನಿಲ್ದಾಣ ಮಾಡುವ ಪ್ರಸ್ತಾಪ ಇಲ್ಲಾ, ಸರ್ಕಾರ ಸ್ಪಷ್ಟನೆ



**ತುಮಕೂರು:** ಎರಡನೇ ವಿಮಾನ ನಿಲ್ದಾಣಕ್ಕೆ ಮೂರು ಸ್ಥಳಗಳನ್ನು ಶಾರ್ಟ್ ಲಿಸ್ಟ್ ಮಾಡಲಾಗಿದ್ದು ಅದರಲ್ಲಿ ತುಮಕೂರು ಜಿಲ್ಲೆಯಲ್ಲಿ ನಿಲ್ದಾಣ ಮಾಡುವ ಪ್ರಸ್ತಾಪ ಇಲ್ಲ ಅಂತ ಸರ್ಕಾರ ಸ್ಪಷ್ಟಪಡಿಸಿದೆ. ಅಧಿವೇಶನದಲ್ಲಿ ತುಮಕೂರಿನ ನಗರ ಶಾಸಕ ಜ್ಯೋತಿ ಗಣೇಶ್ ಕೇಳಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆಗೆ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ. ಬಿ. ಪಾಟೀಲ ರವರು ಉತ್ತರಿಸಿದರು.

ಎರಡನೇ ವಿಮಾನ ನಿಲ್ದಾಣಕ್ಕೆ ಸೋಮನಹಳ್ಳಿ ಕನಕಪುರ ರಸ್ತೆ ರಾಮನಗರ, ಚೂಡಹಳ್ಳಿ ಕನಕಪುರ ರಸ್ತೆ ರಾಮನಗರ, ಗುಡೇಮಾರನಹಳ್ಳಿ ನೆಲಮಂಗಲ ಮೂರು ಸ್ಥಳಗಳು ಶಾರ್ಟ್ ಲಿಸ್ಟ್ ಆಗಿದೆ ಎಂದು ಸದನಕ್ಕೆ ಮಾಹಿತಿ ನೀಡಿದ್ದಾರೆ. ಜೊತೆಗೆ ಹಾರೋಹಳ್ಳಿ ಕೂಡ ಅಂತಿಮ ಪರಿಶೀಲನೆಯ ಹಂತದಲ್ಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಇದೇ ವೇಳೆ ತುಮಕೂರಿನಲ್ಲಿ ಎರಡನೇ ವಿಮಾನ ನಿಲ್ದಾಣ ಬೇಕು ಎಂದು ಡಿ.ಸಿ.ಎಂ.ಡಾ. ಜಿ ಪರಮೇಶ್ವರ ಹಾಗು ಸಂಸದ ವಿ.ಸೋಮಣ್ಣ ನವರು ಆಗ್ರಹಿಸಿದ್ದರು.

ಇದಕ್ಕೆ ಪ್ರತಿಕ್ರಿಯೆ ನೀಡಿ ಕೇಂದ್ರ ಸರ್ಕಾರದ ಗ್ರೀನ್ ಫೀಲ್ಡ್ ವಿಮಾನ ನಿಲ್ದಾಣ ನೀತಿಯ ಪ್ರಕಾರ, ಹಾಲಿ ಇರುವ ನಾಗರಿಕ ವಿಮಾನ ನಿಲ್ದಾಣದಿಂದ 150 ಕಿಲೋ ಮೀಟರ್ ವ್ಯಾಪ್ತಿಯಲ್ಲಿ ಇನ್ನೊಂದು ಹೊಸ ವಿಮಾನ ನಿಲ್ದಾಣಕ್ಕೆ ಸಾಮಾನ್ಯವಾಗಿ ಅನುಮತಿ ನೀಡಲಾಗುವುದಿಲ್ಲ. ಒಂದು ವೇಳೆ ಈ ವ್ಯಾಪ್ತಿಯಲ್ಲಿ ವಿಮಾನ ನಿಲ್ದಾಣ ನಿರ್ಮಿಸಬೇಕಾದರೆ ಹಾಲಿ ಇರುವ ವಿಮಾನ ನಿಲ್ದಾಣದ ಮೇಲಾಗುವ ಪ್ರಭಾವವನ್ನು ಆಧರಿಸಿ ಪ್ರತ್ಯೇಕವಾಗಿ ಪರಿಶೀಲಿಸಿ ಕೇಂದ್ರ ಸರ್ಕಾರ ಅಂತಿಮ ನಿರ್ಧಾರ ಕೈಗೊಳ್ಳಬೇಕಾಗುತ್ತದೆ ಎಂದಿದ್ದಾರೆ.

# ಶಿಕ್ಷಕರ ನೇಮಕಾತಿಯಲ್ಲಿ ವಯೋಮಿತಿ ಸಡಿಲಿಕೆಗೆ ಮನವಿ



**ಮಧುಗಿರಿ:** ರಾಜ್ಯ ಸರ್ಕಾರವು ನಡೆಸುತ್ತಿರುವ ಶಿಕ್ಷಕರ ನೇಮಕಾತಿಯಲ್ಲಿ ವಯೋಮಿತಿಯನ್ನು ಸಲ್ಲಿಕೆ ಮಾಡಬೇಕೆಂದು ಕೋರಿ ಆಚಲ ಕಲ್ಚರಲ್ ಫೌಂಡೇಶನ್ ಮಧುಗಿರಿ ಇವರ ವತಿಯಿಂದ ಉಪವಿಭಾಗಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಪಟ್ಟಣದ ಎಸಿ ಕಚೇರಿಯಲ್ಲಿ ಮನವಿ ನೀಡಿದ್ದು, ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರವು 2026ರ ಜನವರಿ 29ರಂದು ಹೊರಡಿಸಿದ ಆದೇಶದಲ್ಲಿ 2027ರ ಡಿಸೆಂಬರ್ ಅಂತ್ಯದವರೆಗೂ ನಡೆಯಲ್ಪಡುವ ನೇರ ನೇಮಕಾತಿಗಳಿಗೆ ಒಮ್ಮೆ ಅನ್ವಯವಾಗುವಂತೆ ಎಲ್ಲ ಪ್ರವರ್ಗದ ಅಭ್ಯರ್ಥಿಗಳಿಗೆ 5 ವರ್ಷಗಳ ವಯೋಮಿತಿ ಸಡಿಲಿಕೆಗೆ ಅವಕಾಶ ಕಲ್ಪಿಸಲಾಗಿದೆ. ಈ ಆದೇಶವನ್ನು ವಿವಿಧ ಇಲಾಖೆಗಳ ನೇರ ನೇಮಕಾತಿಯಲ್ಲಿ ಅನುಸರಿಸಲಾಗುತ್ತಿದೆ. ಇತ್ತೀಚೆಗೆ ಅಧಿಸೂಚನೆ ಹೊರಡಿಸಿರುವ ವಸತಿ ಶಾಲಾ ಶಿಕ್ಷಕರ ನೇಮಕಾತಿಯ ಪ್ರಕ್ರಿಯೆಯಲ್ಲಿ ಈ ಅವಕಾಶದ ಉಲ್ಲೇಖ ನಿರಾಕರಿಸಲಾಗಿದೆ. ಈಗಾಗಲೇ ಅಳಿವಿನ ಅಂಚಿನಲ್ಲಿರುವ ಸರ್ಕಾರಿ ಶಾಲೆಗಳು ಸಕ್ರಿಯವಾಗಿ ಕಾರ್ಯನಿರ್ವಹಿಸಲು ಹಾಗೂ ಗುಣಮಟ್ಟದ ಶಿಕ್ಷಣವನ್ನ ಕಾಯ್ದುಕೊಳ್ಳಲು ಹೆಣಗಾಡುತ್ತಿರುವ ಈ ಸಂದರ್ಭದಲ್ಲಿ ವಯೋಮಿತಿ ಹಂಚಿನಲ್ಲಿರುವ ಉದ್ಯೋಗಾಕಾಂಕ್ಷಿಗಳಿಗೆ ನ್ಯಾಯ ದೊರಕುತ್ತಿಲ್ಲ. ಸರ್ಕಾರಿ ಹುದ್ದೆಗಳು ಇಂತವರ ಪಾಲಿಗೆ ಗಗನ ಕುಸುಮವಾಗಿರುವ ಸಂದರ್ಭದಲ್ಲಿ ಸರ್ಕಾರಿ ಶಿಕ್ಷಕರಾಗಲು ಎಲ್ಲಾ ವಿದ್ಯಾರ್ಹತೆಯನ್ನು ಹೊಂದಿರುವ,

ವಯೋಮಿತಿ ಮೀರುತ್ತಿರುವ ಅಭ್ಯರ್ಥಿಗಳಿಗೆ ಸರ್ಕಾರ ನಿಯಮಾನುಸಾರವಾಗಿ ಅವಕಾಶ ಕಲ್ಪಿಸಿ ಕೊಡಬೇಕೆಂದು ಈ ಸಂದರ್ಭದಲ್ಲಿ ಮನವಿ ಮಾಡಿಕೊಂಡಿದ್ದಾರೆ.

ಈ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಗೊಟೂರು ಶಿವಪ್ಪ, ಫೌಂಡೇಶನ್ ಅಧ್ಯಕ್ಷರು ಆದ ಡಾ.ಡಿ.ಎಸ್. ಮುನೀಂದ್ರ ಕುಮಾರ್, ರೋಟರಿ ಸಂಸ್ಥೆಯ ಮಾಜಿ ಅಧ್ಯಕ್ಷರಾದ ಕರಿಯಣ್ಣ, ಹಿರಿಯ ಸಾಹಿತಿ ಮಲನ ಮೂರ್ತಿ, ಸರ್ವಜ್ಞ ವೇದಿಕೆಯ ತಾಲೂಕು ಅಧ್ಯಕ್ಷ ವೆಂಕಟರಮಣಪ್ಪ, ಹಾಗೂ ಇತರರು ಜೊತೆಗಿದ್ದರು.

# ನಕಲಿ ದಾಖಲೆ ಸೃಷ್ಟಿಸಿ ಜಮೀನು ನೋಂದಣಿ: ಎಫ್.ಡಿ.ಎ.ವಿರುದ್ಧ ಐದು ಪ್ರಕರಣ ದಾಖಲು

**ತುಮಕೂರು:** ನಕಲಿ ದಾಖಲೆ ಸೃಷ್ಟಿಸಿ, ಅಕ್ರಮವಾಗಿ ಜಮೀನು ನೋಂದಣಿ ಮಾಡಿದ ಆರೋಪದ ಮೇಲೆ ಹುಲಿಯೂರು ದುರ್ಗ ಉಪ ನೋಂದಣಾಧಿಕಾರಿ ಕಚೇರಿಯ ಪ್ರಥಮ ದರ್ಜೆ ಸಹಾಯಕ ಕೆ.ರಾಜೇಶ್ ಒಳಗೊಂಡಂತೆ ಎಂಟು ಮಂದಿಯ ವಿರುದ್ಧ ಗುಬ್ಬಿ ತಾಲೂಕಿನ ಸಿ.ಎಸ್.ಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ರಾಜೇಶ್ ವಿರುದ್ಧ ಇದು 5ನೇ ಪ್ರಕರಣವಾಗಿದ್ದು, ಏಪ್ರಿಲ್‌ನಲ್ಲಿ ಚೇಳೂರು ಮತ್ತು ಶಿರಾ ಪೊಲೀಸ್ ಠಾಣೆ, ಆ.12 ರಂದು ಹುಲಿಯೂರುದುರ್ಗ ಠಾಣೆಯಲ್ಲಿ ಇದೇ ರೀತಿಯ ಪ್ರಕರಣಗಳು ದಾಖಲಾಗಿವೆ. ಹತ್ತಾರು ಜನ ರೈತರಿಗೆ ವಂಚಿಸಿದ ಆರೋಪ ಈತನ ವಿರುದ್ಧ ಕೇಳಿಬಂದಿದೆ.

ಉಪ ನೋಂದಣಾಧಿಕಾರಿ ರಜೆಯ ಮೇಲೆ ತೆರಳಿದಾಗ ರಾಜೇಶ್ ಉಸ್ತುವಾರಿ ನೋಡಿಕೊಳ್ಳುತ್ತಿದ್ದರು. ಈ ಸಮಯದಲ್ಲಿ ಒಬ್ಬರ ಹೆಸರಿನಲ್ಲಿ ಜಮೀನನ್ನು ಮತ್ತೊಬ್ಬರ ಹೆಸರಿಗೆ ನೋಂದಣಿ ಮಾಡಿಕೊಡುತ್ತಿದ್ದರು. ಇದಕ್ಕಾಗಿ ಹಣ ಪಡೆಯುತ್ತಿದ್ದರು ಎಂದು ದೂರಿನಲ್ಲಿ ಆರೋಪಿಸಲಾಗಿದೆ.

ಗುಬ್ಬಿ ತಾಲೂಕಿನ ಕುನ್ನಾಲ ಗ್ರಾಮದ ಅಲ್ತಾಫ್ ಉಸೇನ್ ಎಂಬುವರು ಕೆ.ರಾಜೇಶ್ ಅವರ ಕುಮ್ಮಕ್ಕಿನಿಂದ ತಾಂತ್ರಿಕ ಸಹಾಯ ಪಡೆದು ನಮಗೆ ಪಿತ್ರಾರ್ಜಿತವಾಗಿ ಬಂದಿದ್ದ ಜಮೀನನ್ನು ಬೇರೆಯವರ ಹೆಸರಿಗೆ ಖಾತೆ ಮಾಡಿಸಿಕೊಂಡಿದ್ದಾರೆ. ಹುಲಿಯೂರುದುರ್ಗ ಉಪ ನೋಂದಣಾಧಿಕಾರಿ ಕಚೇರಿಯಲ್ಲಿ ಕೆಲಸ ಮಾಡುವ ಮಹಾಂತೇಶ್ ಕಾವೇರಿ ತಂತ್ರಾಂಶದಲ್ಲಿ ನಕಲಿ ದಾಖಲೆ ಅಪ್ ಲೋಡ್ ಮಾಡಿ, ಕಾನೂನು ಬಾಹಿರವಾಗಿ ಖಾತೆ, ಪಹಣಿ ಮಾಡಿಕೊಟ್ಟಿದ್ದಾರೆಂದು ಕುನ್ನಾಲದ ಮೊಹಮ್ಮದ್ ಅಜರುದ್ದೀನ್ ಎಂಬುವರು ಸಿ.ಎಸ್.ಪುರ ಪೊಲೀಸರಿಗೆ ದೂರು ನೀಡಿದ್ದಾರೆ.

ಜಮೀನಿಗೂ, ಕ್ರಯಪತ್ರದಲ್ಲಿರುವ ಖರೀದಿದಾರರಿಗೂ, ಮಾರಾಟಗಾರರಿಗೂ ಸಂಬಂಧವೇ ಇಲ್ಲ. ನಕಲಿ ದಾಖಲೆ, ಗುರುತಿನ ಚೀಟಿ ಸೃಷ್ಟಿಸಿ, ಕ್ರಯಪತ್ರ ನೋಂದಣಿ ಮಾಡಿಸಿದವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದ್ದಾರೆ. ಅಜರುದ್ದೀನ್ ದೂರು ಆಧರಿಸಿ ಅಲ್ತಾಫ್, ರಾಜೇಶ್, ರಂಗಸ್ವಾಮಿ, ಜಾವಿದ್ ಖಾನ್, ವಹೀದ್ ಉಲ್ಲಾಖಾನ್, ಅಬ್ದುಲ್ ಮೀರ್, ಖಬೀರ್, ಮಹಾಂತೇಶ್ ಎಂಬುವರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ರಾಜೇಶ್ ವಿರುದ್ಧ ಜಿಲ್ಲೆಯ ವಿವಿಧ ಪೊಲೀಸ್ ಠಾಣೆಗಳಲ್ಲಿ ದೂರು ದಾಖಲಿಸಲಾಗಿದೆ. ಎಲ್ಲಾ ಕಡೆಗಳಲ್ಲಿ ನಕಲಿ ದಾಖಲೆ ಸೃಷ್ಟಿಸಿ ವಂಚಿಸಿರುವ ಬಗ್ಗೆ ಅನ್ಯಾಯಕ್ಕೆ ಒಳಗಾದವರು ದೂರು ನೀಡಿದ್ದಾರೆ. ತನಿಖೆಯ ನಂತರ ಮತ್ತಷ್ಟು ವಿವರಗಳು ಲಭ್ಯವಾಗಲಿವೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

# ಉಳುವವನೇ ಭೂಮಿ ಒಡೆಯ ಖಾಯ್ದೆ ಜಾರಿಗೆ ತಂದ ಧೀಮಂತ ನಾಯಕ ದೇವರಾಜು ಅರಸು: ತಹಸೀಲ್ದಾರ್ ಕೆ.ಮಂಜುನಾಥ್



**ಕೊರಟಗೆರೆ:** ಭೂ ಸುಧಾರಣೆ ಖಾಯ್ದೆ ಜಾರಿ ತಂದ ದೀಮಂತ ನಾಯಕ ದೇವರಾಜು ಅರಸು ಅವರು ತಮ್ಮ ಹೊಲದಲ್ಲಿ ಕೆಲಸ ಮಾಡುತ್ತಿದ್ದವರಿಗೆ ಸ್ವಂತ ಭೂಮಿಯನ್ನ ಬಿಟ್ಟುಕೊಟ್ಟು ರಾಜ್ಯದ್ಯಂತ ಉಳುವವನೇ ಭೂಮಿ ಒಡೆಯ ಖಾಯ್ದೆ ಜಾರಿಗೆ ತಂದರು. ಎಂದು ತಹಸೀಲ್ದಾರ್ ಕೆ.ಮಂಜುನಾಥ್ ತಿಳಿಸಿದರು.

ಪಟ್ಟಣದ ತಹಸೀಲ್ದಾರ್ ಸಭಾಂಗಣದಲ್ಲಿ ತಾಲೂಕು ಆಡಳಿತ, ತಾಪಂ, ಪುರಸಭೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಏರ್ಪಡಿಸಲಾಗಿದ್ದ ಮಾಜಿ ಮುಖ್ಯಮಂತ್ರಿ ಹಾಗೂ ಹಿಂದುಳಿದ ವರ್ಗಗಳ ಪರಿವರ್ತನೆಯ ಹರಿಕಾರ ಡಿ.ದೇವರಾಜು ಅರಸು ಅವರ 111 ಜನ್ಮ ದಿನಾಚರಣೆ ಅಂಗವಾಗಿ ಬಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು.

ದೇವರಾಜು ಅರಸು ಅವರು ಮೈಸೂರು ರಾಜ್ಯವನ್ನ ಕರ್ನಾಟಕ ರಾಜ್ಯವನ್ನಾಗಿಸಿದ ದೀಮಂತ ನಾಯಕ, ಇದರ ಜೊತೆಗೆ ಸಾಕಷ್ಟು ಅನಿಷ್ಠ ಪದ್ದತಿ ನಿರ್ಮೂಲನೆ ಮಾಡಲು ಅನೇಕ ಯೋಜನೆಗಳನ್ನ ಜಾರಿಗೆ ತಂದರು. ಹಿಂದುಳಿದ ವರ್ಗಗಳ ಕಲ್ಯಾಣ, ಸಾಮಾಜಿಕ ಸಮಾನತೆ, ಸಂದಾಯ ಪದ್ದತಿ ರದ್ದತಿ ಸೇರಿದಂತೆ ಹಿಂದುಳಿದ, ಎಸ್ಸಿ,ಎಸ್ಟಿ ಸಮುದಾಯಗಳಿಗೆ ಈ ನಾಡಿಗೆ ಅನೇಕ ಕೊಡುಗೆಗಳನ್ನ ನೀಡಿದ್ದಾರೆ.

ಪುರಸಭೆ ಮುಖ್ಯಾಧಿಕಾರಿ ಉಮೇಶ್ ಮಾತನಾಡಿ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸುರವರ ನಾಡಿನ ಅಭಿವೃದ್ಧಿ ಮತ್ತು ಸಾಮಾಜಿಕ ಸುಧಾರಣೆಗೆ ಮಾಜಿ ಮುಖ್ಯಮಂತ್ರಿ ದಿ. ದೇವರಾಜ ಅರಸು ಅವರ ಕೊಡುಗೆ ಅಪಾರ ಅಂದಿನ ಮೈಸೂರು ರಾಜ್ಯವನ್ನು 1973 ರ ನವೆಂಬರ್ 1 ರಂದು ಕರ್ನಾಟಕ ಎಂದು ಮರುನಾಮಕರಣ ಮಾಡಿದ ಹಗ್ಗಳಿಕೆ ದೇವರಾಜು ಅರಸು ಅವರಿಗೆ ಸಲ್ಲುತ್ತದೆ, ಕನ್ನಡ ನಾಡಿನ ಏಕೀರಣ,

ಸಮಾಜಿಕ ಕ್ರಾಂತಿ ಮತ್ತು ನಾಡಿನ ಆಸ್ಮಿತೆಗೆ ಅವರು ನೀಡಿದ ಕೊಡುಗೆ ಚಿರಸ್ಮರಣೀಯವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ 25-26 ನೇ ಸಾಲಿನ ಎಸ್.ಎಲ್.ಸಿ ಮತ್ತು ಪಿಯುಸಿ ಪರಿಕ್ಷೇಯಲ್ಲಿ ಅತಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ದೇವರಾಜ ಅರಸು ರವರ 111ನೇ ಜನ್ಮ ದಿನಾಚರಣೆ ಅಂಗವಾಗಿ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ವಿವಿಧ ಸ್ಪರ್ಧೆಗಳ ವಿಜೇತರಿಗೆ ಸನ್ಮಾನಿಸಿದರು ಇದೆ ಸಂದರ್ಭದಲ್ಲಿ ಕೆಲ ವಿದ್ಯಾರ್ಥಿಗಳಿಗೆ ಶಾಲುಗಳನ್ನ ಹಾಕಿ ಕೆಲವು ವಿದ್ಯಾರ್ಥಿಗಳಿಗೆ ಹಾಗೆ ಗೌರವಿಸಿದರು.

ವೇದಿಕೆಯಲ್ಲಿ ತಾ.ಪಂ. ಕಾರ್ಯನಿರ್ವಹಣಾಧಿಕಾರಿ ಅಪೂರ್ವ, ಸಮಾಜ ಕಲ್ಯಾಣಾಧಿಕಾರಿ ಅನಂತರಾಜು, ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಈರಪ್ಪನಾಯಕ್, ಬಿ.ಇ.ಓ ಪೈರೋಜ್ ಬೇಗಂ, ತಾಲೂಕು ವೈದ್ಯಾಧಿಕಾರಿ ಡಾ.ಜೋಸ್ನಾರೆಡ್ಡಿ, ಉಪನ್ಯಾಸಕ ಹನುಮಂತ ನಾಯಕ್ ಅಧಿಕಾರಿಗಳಾದ ಸುಧಾಕರ್, ರುದ್ರೇಶ್ ತಾ.ಪಂ.ಮಧು ಸೂಧನ್, ದಾಡಿ ವೆಂಕಟೇಶ್ ಸೇರಿದಂತೆ ಇನ್ನಿತರ ಇಲಾಖಾ ಆದಿಕಾರಿಗಳು, ವಿವಿಧ ಸಂಘ ಸಂಸ್ಥೆಯ ಪದಾಧಿಕಾರಿಗಳು ಮುಖಂಡರು ಹಾಜರಿದ್ದರು.

# ಚನ್ನರಾಯಪಟ್ಟಣದಿಂದ ಬೆಂಗಳೂರಿಗೆ ಸಾಗಿಸುತ್ತಿದ್ದ 500 ಕೆ.ಜಿ ಗೋಮಾಂಸ ವಶ: ಇಬ್ಬರ ಬಂಧನ



**ಕುಣಿಗಲ್:** ಕುಣಿಗಲ್ ಪೊಲೀಸರು ಕಾರ್ಯಚರಣೆ ನಡೆಸಿ ಹಾಸನ ಜಿಲ್ಲೆ ಚನ್ನರಾಯನಪಟ್ಟದಿಂದ ಅಕ್ರಮವಾಗಿ ತುಂಡರಿಸಿದ ಗೋಮಾಂಸವನ್ನು ಬೆಂಗಳೂರಿಗೆ ಸಾಗಿಸುತ್ತಿದ್ದ ಇಬ್ಬರನ್ನು ಬಂಧಿಸಿ 500 ಕೆ.ಜಿ. ಗೋಮಾಂಸವನ್ನು ವಶ ಪಡಿಸಿಕೊಂಡಿರುವ ಘಟನೆ ಶುಕ್ರವಾರ ನಡೆದಿದೆ.

ಪಟ್ಟಣದ ಹೊರ ವಲಯದ ರಾಷ್ಟ್ರೀಯ ಹೆದ್ದಾರಿ 75 ರ ಅಂಚೇಪಾಳ್ಯ ತಾಜ್ ಹೋಟೆಲ್ ಬಳಿ ಗೋಮಾಂಸ ತುಂಬಿದ ಕಾರು ನಿಂತಿರುವ ಬಗ್ಗೆ ವಿಶ್ವ ಹಿಂದು ಪರಿಷತ್, ಬಜರಂಗದಳ ಕಾರ್ಯಕರ್ತರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ ತಕ್ಷಣ ಕಾರ್ಯ ಪ್ರವೃತ್ತರಾದ ಪೊಲೀಸರು ಕಾರನ್ನು ವಶಕ್ಕೆ ಪಡೆದು ಪರಿಶೀಲಿಸಲಾಗಿ ತುಂಡರಿಸಿದ ಗೋಮಾಂಸ ಇರುವುದು ಪತ್ತೆಯಾಗಿದೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾರು ಚಾಲಕ ಅಕೀಬ್ ಮತ್ತು ಸಖಿ ಅಬ್ಬಾಸ್ ನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ,

ಘಟನೆ ವಿವರ : ಚನ್ನರಾಯಪಟ್ಟಣದ ಬಾಗೂರು ರಸ್ತೆಯಲ್ಲಿ ಬಾಬು ಎಂಬ ವ್ಯಕ್ತಿಯು ಹಸುಗಳು ಮತ್ತು ಸಣ್ಣ ಕರುಗಳನ್ನು ಸಂಘಟಿತವಾಗಿ ಅಕ್ರಮವಾಗಿ ವಧೆ ಮಾಡಿ ತುಂಡರಿಸಿ, ಸ್ಯಾಂಟ್ರೋ ಕಾರಿನಲ್ಲಿ ತುಂಬಿಕೊಂಡು ಅಕ್ರಮವಾಗಿ ಮಾರಾಟ ಮತ್ತು ವಿತರಣೆಗೆಂದು ಬೆಂಗಳೂರು ಶಿವಾಜಿ ನಗರ ಕಡೆ ಸಾಗಿಸುತ್ತಿರುವ ಬಗ್ಗೆ ಖಚಿತ ಮಾಹಿತಿ ಪಡೆದ ಕುಣಿಗಲ್ನ ಬಜರಂಗದಳದ ಗಿರೀಶ್, ರವೀಶ್ ಅವರು ಶುಕ್ರವಾರ ಬೆಳಗಿನ ಜಾವ ಸುಮಾರು 4 ಗಂಟೆ ಸಮಯದಲ್ಲಿ 112 ಪೊಲೀಸರಿಗೆ ಈ ಸಂಬಂಧ ಮಾಹಿತಿ ನೀಡಿದ್ದಾರೆ, ಮಾಹಿತಿ ಆಧಾರದ ಮೇಲೆ ಕುಣಿಗಲ್ ಪೊಲೀಸರು ಅಂಚೇಪಾಳ್ಯ ತಾಜ್ ಹೋಟೆಲ್ ಸಮೀಪ ವಾಹನ ಹಾಗೂ ಗೋಮಾಂಸವನ್ನು ವಶಕ್ಕೆ ಪಡೆದಿದ್ದಾರೆ.

ವಶ ಪಡಿಸಿಕೊಂಡ ಗೋಮಾಂಸವನ್ನು ಕಂದಾಯ ಇಲಾಖೆ ಅಧಿಕಾರಿಗಳ ಸಮ್ಮುಖದಲ್ಲಿ ಪಶು ವೈದ್ಯಾಧಿಕಾರಿ ಡಾ.ನವೀನ್ ಪರಿಶೀಲಿಸಿದ ಬಳಿಕ ಇಲ್ಲಿನ ಸ್ಮಶಾಣದಲ್ಲಿ ಗುಂಡಿ ತೆಗೆದು ಗೋಮಾಂಸವನ್ನು ಮುಚ್ಚಲಾಯಿತು.

## ಶ್ರೀ ನಲ್ಲರಲ ಗಂಗಮ್ಮ ಮತ್ತು ಏಳು ಅಕ್ಕಮ್ಮ ಗಾರ್ಲ ದೇವಸ್ಥಾನದಲ್ಲಿ ವರಮಹಾಲಕ್ಷ್ಮಿ ಹಬ್ಬದ ವಿಶೇಷ ಅಲಂಕಾರ ಪೂಜೆ



**ಪಾವಗಡ:** ಪಟ್ಟಣದ ಪ್ರಸಿದ್ಧ ಶ್ರೀ ನಲ್ಲರಲ ಗಂಗಮ್ಮ ಮತ್ತು ಏಳು ಅಕ್ಕಮ್ಮಗಾರ್ಲ ದೇವಸ್ಥಾನದಲ್ಲಿ ವರಮಹಾಲಕ್ಷ್ಮಿ ಹಬ್ಬದ ಪ್ರಯುಕ್ತ ಶುಕ್ರವಾರ ವಿಶೇಷ ಅಲಂಕಾರ ಪೂಜೆ ವಿಜೃಂಭಣೆಯಿಂದ ನಡೆಯಿತು. ಬೆಳಿಗ್ಗೆಯಿಂದಲೇ ದೇವಸ್ಥಾನದಲ್ಲಿ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ, ದೇವಿಗೆ ವರಮಹಾಲಕ್ಷ್ಮಿ ವ್ರತವನ್ನು ಆಚರಿಸಿದರು. ದೇವಿಗೆ ವಿಶೇಷ ಹೂವಿನ ಅಲಂಕಾರ ಮಾಡಿ, ಕುಂಕುಮಾರ್ಚನೆ, ಮಂಗಳಾರತಿ ಮಾಡಲಾಯಿತು. ಅರ್ಚಕರು ಮಾತನಾಡಿ, ವರಮಹಾಲಕ್ಷ್ಮಿ ವ್ರತವನ್ನು ಶ್ರದ್ಧಾ ಭಕ್ತಿಯಿಂದ ಆಚರಿಸುವುದರಿಂದ ಅಷ್ಟೈಶ್ವರ್ಯ, ಸುಖ, ಶಾಂತಿ, ಸಮೃದ್ಧಿ ಲಭಿಸುತ್ತದೆ. ಮುತ್ತೈದೆಯರಿಗೆ ಸೌಭಾಗ್ಯ ವೃದ್ಧಿಯಾಗುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ದೇವಸ್ಥಾನ ಸಮಿತಿ ಪದಾಧಿಕಾರಿಗಳು, ಸ್ಥಳೀಯ ಮಹಿಳಾ ಮಂಡಳಿ ಸದಸ್ಯರು ಹಾಗೂ ನೂರಾರು ಭಕ್ತಾದಿಗಳು ಉಪಸ್ಥಿತರಿದ್ದರು. ಭಕ್ತಾದಿಗಳಿಗೆ ಪ್ರಸಾದ ವಿನಿಯೋಗ ಮಾಡಲಾಯಿತು.

# ಎಚ್‌ಡಿಕೆ ವಿರುದ್ಧ ಕಾಂಗ್ರೆಸ್ ಪ್ರತಿಭಟನೆ



**ಬೆಂಗಳೂರು:** ಕರ್ನಾಟಕದಲ್ಲಿ ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರ ಜನಪರ ಹಾಗೂ ಅಭಿವೃದ್ಧಿಪರ ಆಡಳಿತ ನೀಡುತ್ತಿರುವುದನ್ನು ಸಹಿಸದೆ, ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ರಾಜ್ಯ ಸರ್ಕಾರದ ವಿರುದ್ಧ ನಿರಂತರವಾಗಿ ಆಧಾರರಹಿತ ಆರೋಪಗಳನ್ನು ಮಾಡುತ್ತಿರುವುದನ್ನು ಖಂಡಿಸಿ, ಕಾಂಗ್ರೆಸ್ ಕಾರ್ಯಕರ್ತರು ಇಂದು ಕಾಂಗ್ರೆಸ್ ಭವನದ ಬಳಿ ಅಣಕು ಪ್ರತಿಭಟನೆ ನಡೆಸಿದರು.

ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ಮೈಸೂರು ಎಲೆಕ್ಟ್ರಿಕಲ್ ಇಂಡಸ್ಟ್ರೀಸ್ ಲಿಮಿಟೆಡ್ ಅಧ್ಯಕ್ಷರಾದ ಶ್ರೀ ಎಸ್. ಮನೋಹರ್ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ, ಬಿಜೆಪಿ ಆಡಳಿತದ ಅವಧಿಯಲ್ಲಿ ಕೇಳಿಬಂದಿರುವ ಬಗರ್ ಹುಕುಂ, ಲಂಚ, ಹೌಸಿಂಗ್ ಬೋರ್ಡ್ ಅಕ್ರಮಗಳು, ಕೋವಿಡ್ ಸಂದರ್ಭದಲ್ಲಿ 40% ಕಮಿಷನ್ ಹಾಗೂ ಬೆಡ್ ಬ್ಲಾಕಿಂಗ್ ಸೇರಿದಂತೆ ವಿವಿಧ ಭ್ರಷ್ಟಾಚಾರ ಮತ್ತು ಅಕ್ರಮಗಳ ಆರೋಪಗಳ ಕುರಿತು ಕಾಂಗ್ರೆಸ್ ಕಾರ್ಯಕರ್ತರು ಪ್ರಶ್ನೆಗಳನ್ನು ಎತ್ತಿದರು.

ಬಿಜೆಪಿ ಆಡಳಿತದ ಅವಧಿಯಲ್ಲಿ ನಡೆದಿದೆ ಎನ್ನಲಾದ ಭ್ರಷ್ಟಾಚಾರದ ಹಣದಲ್ಲಿ ಎಷ್ಟು ಹಣ ಪಿಎಂ ಕೇರ್ಸ್ ನಿಧಿಗೆ ಅಥವಾ ಬಿಜೆಪಿ ಕೇಂದ್ರ ಕಚೇರಿಗೆ ತಲುಪಿದೆ ಎಂಬುದರ ಕುರಿತು ಪಾರದರ್ಶಕವಾಗಿ ಉತ್ತರಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು. ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಜನಪರ ಕಾರ್ಯಕ್ರಮಗಳನ್ನು ಜಾರಿಗೊಳಿಸುತ್ತಾ, ಅಭಿವೃದ್ಧಿ ಮತ್ತು ಸಾಮಾಜಿಕ ನ್ಯಾಯಕ್ಕೆ ಆದ್ಯತೆ ನೀಡುತ್ತಿರುವ ಸಂದರ್ಭದಲ್ಲಿ, ಯಾವುದೇ ಆಧಾರವಿಲ್ಲದೆ ರಾಜ್ಯ ಸರ್ಕಾರದ ವಿರುದ್ಧ ಆರೋಪ ಮಾಡುತ್ತಿರುವುದು ರಾಜಕೀಯ ಅಸೂಯೆಯ ಪ್ರತೀಕವಾಗಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಭ್ರಷ್ಟಾಚಾರದ ಆರೋಪಗಳನ್ನು ಹೊತ್ತಿರುವವರೊಂದಿಗೆ ರಾಜಕೀಯವಾಗಿ ಕೈಜೋಡಿಸಿಕೊಂಡು, ಕಾಂಗ್ರೆಸ್ ಸರ್ಕಾರದ ವಿರುದ್ಧ ಟೀಕೆ ಮಾಡುತ್ತಿರುವುದು ವಿಪರ್ಯಾಸ ಎಂದು ಕಾಂಗ್ರೆಸ್ ಮುಖಂಡರು ಟೀಕಿಸಿದರು. ರಾಜ್ಯದ ಜನತೆ ಕಾಂಗ್ರೆಸ್ ಸರ್ಕಾರದ ಆಡಳಿತವನ್ನು ಗಮನಿಸುತ್ತಿದ್ದು, ಆಧಾರರಹಿತ ಆರೋಪಗಳಿಗೆ ಜನರು ಸೂಕ್ತ ಉತ್ತರ ನೀಡಲಿದ್ದಾರೆ ಎಂದು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಸ್. ಮನೋಹರ್ ಹೇಳಿದರು. ಪ್ರತಿಭಟನೆಯಲ್ಲಿ ಕಾಂಗ್ರೆಸ್ ವಕ್ತಾರ ಆನಂದ್ ಕುಮಾರ್ ಎಂ.ಎಸ್., ಬೆಂಗಳೂರು ಕೇಂದ್ರ ಪ್ರಚಾರ ಸಮಿತಿ ಅಧ್ಯಕ್ಷ ಪ್ರಕಾಶ್, ಪುಟ್ಟರಾಜು, ಲಕ್ಷ್ಮೀನಾರಾಯಣ, ನವೀನ್, ಬಳೇಶ್, ಪವನ್ ಸೇರಿದಂತೆ ಹಲವಾರು ಕಾಂಗ್ರೆಸ್ ಮುಖಂಡರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

# ಕಾಂಗ್ರೆಸ್‌ನ ವಂದೇ ಮಾತರಂ ವಿರೋಧಿ ನಡೆ ಖಂಡಿಸಿ ನಿರ್ಣಯ ಅಂಗೀಕರಿಸಿದ ಬಿಜೆಪಿ



**ನವದೆಹಲಿ:** ದೇಶದ ಅಧಿಕೃತ ಕಾರ್ಯಕ್ರಮಗಳಲ್ಲಿ ರಾಷ್ಟ್ರೀಯ ಗೀತೆ 'ವಂದೇ ಮಾತರಂ' ಹಾಡುವಿಕೆಯನ್ನು ಮೊದಲ ಎರಡು ಚರಣಗಳಿಗೆ ಸೀಮಿತಗೊಳಿಸಿದ ಕಾಂಗ್ರೆಸ್ ಕಾರ್ಯಕಾರಿ ಸಮಿತಿಯ ನಿರ್ಧಾರವನ್ನು ಖಂಡಿಸಿ ಭಾರತೀಯ ಜನತಾ ಪಕ್ಷ(ಬಿಜೆಪಿ) ಶನಿವಾರ ನಿರ್ಣಯ ಅಂಗೀಕರಿಸಿದೆ.

ಇಂದು ಕೇಸರಿ ಪಕ್ಷದ ಪ್ರಧಾನ ಕಚೇರಿಯಲ್ಲಿ ನಡೆದ ಬಿಜೆಪಿ ಸಭೆಗೂ ಮುನ್ನ ಪಕ್ಷದ ಎಲ್ಲಾ ನಾಯಕರು ರಾಷ್ಟ್ರೀಯ ಗೀತೆ 'ವಂದೇ ಮಾತರಂ'ನ ಎಲ್ಲಾ ಆರು ಚರಣಗಳನ್ನು ಹಾಡಿದರು.

ನಂತರ ಕಾಂಗ್ರೆಸ್‌ನ 'ವಂದೇ ಮಾತರಂ' ವಿರೋಧಿ ನಡೆ ಖಂಡಿಸಿ ನಿರ್ಣಯ ಅಂಗೀಕರಿಸಲಾಯಿತು.

ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ಅವರು ವಂದೇ ಮಾತರಂ ಗೀತೆಗೆ ಅವಮಾನ ಮಾಡಿದ್ದಾರೆ ಎಂದು ಆರೋಪಿಸಿದ್ದ ಬಿಜೆಪಿ,

ಇದೀಗ ವಿರೋಧ ಪಕ್ಷವನ್ನು "ಹೊಸ ಮುಸ್ಲಿಂ ಲೀಗ್" ಎಂದು ಟೀಕಿಸಿದೆ.

ಕಾಂಗ್ರೆಸ್‌ಗೆ ರಾಷ್ಟ್ರಗೀತೆ 'ವಂದೇ ಮಾತರಂ' ಬಗ್ಗೆ ತೀವ್ರ ಅಸಹನೆ, ಅಗೌರವ: ಒಚಿಟಿಂರಿ ಖಿತಿಚಿಡು

ಕಾಂಗ್ರೆಸ್ ಪಕ್ಷದ ಕಾರ್ಯಕ್ರಮಗಳಲ್ಲಿ ಕೇವಲ ಮೊದಲ ಎರಡು ಚರಣಗಳನ್ನು ಮಾತ್ರ ಹಾಡಬೇಕು ಎಂಬ 1937ರ ನಿರ್ಣಯವನ್ನೇ ಮುಂದುವರಿಸಲು ಇಂದು ಗುರುವಾರ ನಿರ್ಧರಿಸಿದೆ.

# KPSC ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಅಮಾನತಿಗೆ ರಾಜ್ಯ ಸರ್ಕಾರ ಒಪ್ಪಿಗೆ

**ಬೆಂಗಳೂರು:** ಕರ್ನಾಟಕ ಸಾರ್ವಜನಿಕ ಸೇವಾ ಆಯೋಗದ (ಏಕಖಅ) ಅಧ್ಯಕ್ಷ ಶಿವಶಂಕರಪ್ಪ ಎಸ್. ಸಾಹುಕಾರ್ ಅವರನ್ನು ಹುದ್ದೆಯಿಂದ ಅಮಾನತುಗೊಳಿಸಲು ರಾಜ್ಯ ಸರ್ಕಾರ ಒಪ್ಪಿಗೆ ನೀಡಿದೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ.

ಈ ಹಿಂದೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಸಾಹುಕಾರ್ ಅವರನ್ನು ಅಮಾನತುಗೊಳಿಸಲು ಆದೇಶಿಸಿದ್ದರು. ಆದರೆ, ಕರ್ನಾಟಕ ಹೈಕೋರ್ಟ್ ಅವರನ್ನು ಮರುನೇಮಕ ಮಾಡುವಂತೆ ಆದೇಶಿಸಿತ್ತು. ತಮ್ಮ ಪುತ್ರಿಗೆ ಸರ್ಕಾರಿ ಉದ್ಯೋಗ ಪಡೆಯಲು ನಕಲಿ ಆದಾಯ ಪ್ರಮಾಣಪತ್ರ ಬಳಸಿದ್ದಾರೆ ಎಂಬ ಆರೋಪ ಸಾಹುಕಾರ್ ವಿರುದ್ಧ ಕೇಳಿಬಂದಿತ್ತು. ಈ ಆರೋಪಗಳಿಗೆ ಸಂಬಂಧಿಸಿದ ತನಿಖೆಯ ಭಾಗವಾಗಿ ಜಾರಿ ನಿರ್ದೇಶನಾಲಯದ (ಇಡಿ) ಅಧಿಕಾರಿಗಳು ಇತ್ತೀಚೆಗೆ ಸಾಹುಕಾರ್ ಅವರಿಗೆ ಸಂಬಂಧಿಸಿದ ಹಲವು ಸ್ಥಳಗಳಲ್ಲಿ ಶೋಧ ನಡೆಸಿದ್ದರು. ಅವರ ನಿವಾಸ ಮತ್ತು ಕಚೇರಿಯಲ್ಲೂ ಶೋಧ ಕಾರ್ಯಾಚರಣೆ ನಡೆಸಲಾಗಿತ್ತು. ಏತನ್ಮಧ್ಯೆ ರಾಜ್ಯದ ಕಾರಾಗೃಹ ಇಲಾಖೆಯನ್ನು ಆಧುನಿಕ ತಂತ್ರಜ್ಞಾನದ ಮೂಲಕ ಮತ್ತಷ್ಟು ಬಲಪಡಿಸಲು ಹಲವು ಅತ್ಯಾಧುನಿಕ ಉಪಕರಣಗಳನ್ನು ಖರೀದಿಸಿ ಅಳವಡಿಸುವ ಪ್ರಸ್ತಾವನೆಗೂ ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಶಿಕ್ಷೆಗೆ ಗುರಿಯಾಗಿರುವ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರ ಜೈಲು ಕೊಠಡಿಯಲ್ಲಿ ಮೊಬೈಲ್ ಫೋನ್ ಪತ್ತೆಯಾದ ಹಿನ್ನೆಲೆಯಲ್ಲಿ ಕಾರಾಗೃಹಗಳ ಭದ್ರತೆಯನ್ನು ಬಲಪಡಿಸುವ ಕ್ರಮಕ್ಕೆ ಸರ್ಕಾರ ಮುಂದಾಗಿದೆ.

# ಭಾರತ್ ಜೋಡೋ ಯುವ ಸಂಘಗಳ ವೆಚ್ಚದ ಹೊರೆ ಜಿಬಿಎ ಹೆಗಲಿಗೆ

**ಬೆಂಗಳೂರು:** ಯುವಜನರಲ್ಲಿ ಕ್ರೀಡೆ, ಸಂಸ್ಕೃತಿ, ವೈಜ್ಞಾನಿಕ ಮನೋಭಾವ ಹಾಗೂ ಸಾಮುದಾಯಿಕ ಸಾಮಾಜಿಕ ಸಾಮರಸ್ಯವನ್ನು ಉತ್ತೇಜಿಸುವ ಉದ್ದೇಶದಿಂದ ರಾಜ್ಯಾದ್ಯಂತ 10 ಸಾವಿರ ಭಾರತ್ ಜೋಡೋ ಯುವ ಸಂಘಗಳನ್ನು ಸ್ಥಾಪಿಸಲು ರಾಜ್ಯ ಸರ್ಕಾರ ಮಹತ್ವದ ನಿರ್ಧಾರ ಕೈಗೊಂಡಿದೆ.

ಈ ಯೋಜನೆಯಡಿ ನಗರದಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿರುವ ಭಾರತ್ ಜೋಡೋ ಯುವ ಸಂಘಗಳಿಗೆ ತಗಲುವ ವೆಚ್ಚವನ್ನು ಗ್ರೇಟರ್ ಬೆಂಗಳೂರು ಪ್ರಾಧಿಕಾರವೇ ಭರಿಸಬೇಕಿದೆ. ಯೋಜನೆಯಡಿ ಪ್ರತಿಯೊಂದು ಸಂಘಕ್ಕೆ ವಾರ್ಷಿಕ ತಲಾ 10 ಲಕ್ಷ ರೂಪಾಯಿ ಅನುದಾನ ನೀಡಲಾಗುತ್ತಿದ್ದು, ಒಟ್ಟು 1,000 ಕೋಟಿ ರೂಪಾಯಿ ವೆಚ್ಚವಾಗಲಿದೆ. ಆಡಳಿತ ಮತ್ತು ಪ್ರಾಜೆಕ್ಟ್ ಮ್ಯಾನೇಜ್‌ಮೆಂಟ್ ಯುನಿಟ್ ವೆಚ್ಚ ಸೇರಿದಂತೆ ಯೋಜನೆಯ ಒಟ್ಟು ವಾರ್ಷಿಕ ವೆಚ್ಚ 1,010 ಕೋಟಿ ರೂಪಾಯಿಯಾಗಲಿದೆ.

ಸರ್ಕಾರದ ಮಾರ್ಗಸೂಚಿಯಂತೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಒಂದು ಸಂಘ, ಪಟ್ಟಣ ಪಂಚಾಯಿತಿಯಲ್ಲಿ ಸರಾಸರಿ 4 ಸಾವಿರ ಜನಸಂಖ್ಯೆಗೆ ಒಂದು ಸಂಘ, ಪುರಸಭೆಯಲ್ಲಿ 6 ಸಾವಿರ ಜನಸಂಖ್ಯೆಗೆ ಒಂದು ಸಂಘ ಹಾಗೂ ನಗರಸಭೆಯಲ್ಲಿ 8 ಸಾವಿರ ಜನಸಂಖ್ಯೆಗೆ ಒಂದು ಸಂಘ ಸ್ಥಾಪಿಸಲಾಗುತ್ತದೆ.ಅದೇ ರೀತಿ ಮಹಾನಗರ ಪಾಲಿಕೆ ಹಾಗೂ ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯಲ್ಲಿ ಸರಾಸರಿ 10 ಸಾವಿರ ಜನಸಂಖ್ಯೆಗೆ ಒಂದು ಭಾರತ್ ಜೋಡೋ ಯುವ ಸಂಘ ಸ್ಥಾಪಿಸಲು ಸರ್ಕಾರ ಸೂಚಿಸಿದೆ.

ವಿಶೇಷವೆಂದರೆ, ಜಿಬಿಎ ವ್ಯಾಪ್ತಿಯಲ್ಲಿ ಈ ಯೋಜನೆಯ ಅನುಷ್ಠಾನಕ್ಕೆ ಬೇಕಾಗುವ ವೆಚ್ಚವನ್ನು ಜಿಬಿಎ ಹಾಗೂ ಅದರ ವ್ಯಾಪ್ತಿಯ ಐದು ನಗರ ಪಾಲಿಕೆಗಳು ತಮ್ಮ ಸ್ವಂತ ಆಯವ್ಯಯದಿಂದಲೇ ಭರಿಸಬೇಕು ಎಂದು ಸರ್ಕಾರದ ಮಾರ್ಗಸೂಚಿಯಲ್ಲಿ ಸೂಚಿಸಲಾಗಿದೆ.

ಇದರಿಂದ ನಗರದ ಐದು ನಗರ ಪಾಲಿಕೆಗಳ ಮೇಲೆ ಹೆಚ್ಚುವರಿ ಆರ್ಥಿಕ ಹೊರೆ ಬೀಳುವ ಸಾಧ್ಯತೆ ಇದೆ. ಜಿಬಿಎ ವ್ಯಾಪ್ತಿಯಲ್ಲಿನ ಸಂಘಗಳ ಸಂಖ್ಯೆ, ಅವುಗಳಿಗೆ ಬೇಕಾಗುವ ಅನುದಾನ ಹಾಗೂ ಐದು ನಗರ ಪಾಲಿಕೆಗಳು ಭರಿಸಬೇಕಾದ ವೆಚ್ಚದ ಪ್ರಮಾಣವನ್ನು ಜನಸಂಖ್ಯೆಯ ಆಧಾರದ ಮೇಲೆ ನಿಗದಿಪಡಿಸಲಾಗುತ್ತದೆ.

ಯೋಜನೆಯಡಿ ಒಟ್ಟು 10 ಸಾವಿರ ಸಂಘಗಳಿಗೆ ನೀಡಲಾಗುವ 1,000 ಕೋಟಿ ರೂಪಾಯಿ ಅನುದಾನದಲ್ಲೇ ಪ್ರತಿ ಸಂಘದಲ್ಲಿನ ಒಬ್ಬ ತರಬೇತುದಾರರಿಗೆ ವಾರ್ಷಿಕ 24 ಸಾವಿರ ರೂಪಾಯಿ ಗೌರವಧನ ನೀಡಲು 24 ಕೋಟಿ ರೂಪಾಯಿ ಮೀಸಲಿಡಲಾಗಿದೆ.

ಸಚಿವ ಸಂಪುಟದ ಉಪಸಮಿತಿ ಶಿಫಾರಸುಭಾರತ್ ಜೋಡೋ ಯುವ ಸಂಘಗಳ ಸ್ಥಾಪನೆ ಕುರಿತು ಸಚಿವ ಸಂಪುಟದಲ್ಲಿ ಚರ್ಚೆ ನಡೆದ ಬಳಿಕ ಸೂಕ್ತ ಶಿಫಾರಸುಗಳಿಗಾಗಿ ಸಚಿವ ಸಂಪುಟ ಉಪಸಮಿತಿಯನ್ನು ರಚಿಸಲಾಗಿತ್ತು. ಮುಖ್ಯಮಂತ್ರಿ ಅಧ್ಯಕ್ಷತೆಯಲ್ಲಿದ್ದ ಉಪಸಮಿತಿಯ ಶಿಫಾರಸುಗಳ ಆಧಾರದ ಮೇಲೆ ಯೋಜನೆಯ ಮಾರ್ಗಸೂಚಿ ಸಿದ್ಧಪಡಿಸಲಾಗಿದ್ದು, ಕೆಲ ಮಾರ್ಪಾಡುಗಳೊಂದಿಗೆ ಸಚಿವ ಸಂಪುಟ ಅನುಮೋದನೆ ನೀಡಿದೆ. ಯೋಜನೆಯನ್ನು ಯುವಸಬಲೀಕರಣಮತ್ತುಕ್ರೀಡಾಇಲಾಖೆಯ ಮೂಲಕ ಅನುಷ್ಠಾನಗೊಳಿಸಲಾಗುತ್ತದೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ನಗರಾಭಿವೃದ್ಧಿ, ಕಂದಾಯ ಹಾಗೂ ಶಿಕ್ಷಣ ಇಲಾಖೆಗಳ ಸಹಯೋಗದೊಂದಿಗೆ ಸಂಘಗಳ ಚಟುವಟಿಕೆಗಳನ್ನು ನಡೆಸಲು ಸರ್ಕಾರ ಸೂಚಿಸಿದೆ.

# ಸಾಮಾಜಿಕ ನ್ಯಾಯದ ಹಾದಿಯಲ್ಲಿ ಅರಸು ಆಡಳಿತದ ಹೆಜ್ಜೆಗುರುತು: ಲಕ್ಷ್ಮೀಕಾಂತ್



**ಪಿರಿಯಾಪಟ್ಟಣ:** ಮಾಜಿ ಮುಖ್ಯಮಂತ್ರಿ ದಿ. ಡಿ. ದೇವರಾಜ ಅರಸು ಅವರು ಹಿಂದುಳಿದ, ಶೋಷಿತ ಹಾಗೂ ದುರ್ಬಲ ವರ್ಗಗಳ ಅಭಿವೃದ್ಧಿಗೆ ಹಲವು ಜನಪರ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ಸಾಮಾಜಿಕ ನ್ಯಾಯದ ಪರಿಕಲ್ಪನೆಯನ್ನು ಸಾಕಾರಗೊಳಿಸಿದ ಧೀಮಂತ ನಾಯಕರು ಎಂದು ರಾವಂದೂರು ಸರ್ಕಾರಿ ಪದವಿ ಪೂರ್ವ ಕಾಲೇಜಿನ ಇಂಗ್ಲಿಷ್ ಉಪನ್ಯಾಸಕ ಲಕ್ಷ್ಮೀಕಾಂತ್ ಹೇಳಿದರು.

ಪಟ್ಟಣದ ಡಿ. ದೇವರಾಜ ಅರಸು ಕಲಾಭವನದಲ್ಲಿ ತಾಲೂಕು ಆಡಳಿತ, ಪುರಸಭೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಿದ್ದ ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರ 111ನೇ ಜನ್ಮದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಭೂ ಸುಧಾರಣಾ ಕಾಯ್ದೆ ಜಾರಿಗೊಳಿಸುವ ಮೂಲಕ ಭೂಹೀನ ರೈತರಿಗೆ ಭೂಮಿಯ ಹಕ್ಕು ದೊರಕುವಂತೆ ಮಾಡಿದ ಅರಸು ಅವರು ದೂರದೃಷ್ಟಿಯ ಆಡಳಿತಗಾರರಾಗಿದ್ದರು. ಇನಾಮ್ದಾರಿ ಪದ್ಧತಿ ನಿರ್ಮೂಲನೆ, ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ ಹಾವನೂರು ಆಯೋಗದ ಶಿಫಾರಸುಗಳ ಜಾರಿ ಹಾಗೂ ಮೀಸಲಾತಿ ವ್ಯವಸ್ಥೆಗೆ ಬಲ ನೀಡುವ ಮೂಲಕ ಸಾಮಾಜಿಕ ನ್ಯಾಯಕ್ಕೆ ಹೊಸ ಆಯಾಮ ಕಲ್ಪಿಸಿದರು.ಮೈಸೂರು ರಾಜ್ಯವನ್ನು 1973ರಲ್ಲಿ ಕರ್ನಾಟಕ ಎಂದು ಮರುನಾಮಕರಣ ಮಾಡುವ ಐತಿಹಾಸಿಕ ನಿರ್ಧಾರ ಕೈಗೊಂಡ ಅರಸು ಅವರು ರಾಜ್ಯದ ಸಾಂಸ್ಕೃತಿಕ ಮತ್ತು ಸಾಮಾಜಿಕ ಏಕತೆಗೆ ಮಹತ್ವದ ಕೊಡುಗೆ ನೀಡಿದರು. ಬಡವರು, ದಲಿತರು, ಅಲ್ಪಸಂಖ್ಯಾತರು ಹಾಗೂ ಶೋಷಿತ ವರ್ಗಗಳ ಪರವಾಗಿ ಧ್ವನಿ ಎತ್ತಿದ ಅವರು, ರಾಜಕಾರಣವನ್ನು ಜನಸೇವೆಯ ಮಾರ್ಗವನ್ನಾಗಿ ರೂಪಿಸಿದ ಅಪರೂಪದ ನಾಯಕ ಅರಸು.ಕರ್ನಾಟಕದ ಸಾಮಾಜಿಕ ಪರಿವರ್ತನೆಯ ಹರಿಕಾರರಾಗಿದ್ದ ಅರಸು ರವರು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನ್ಯಾಯ, ಸಮಾನತೆ ಹಾಗೂ ಅವಕಾಶ ದೊರಕಬೇಕು ಎಂಬ ಆಶಯದೊಂದಿಗೆ ಆಡಳಿತ ನಡೆಸಿದರು. ಹಿಂದುಳಿದ ವರ್ಗಗಳು ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕವಾಗಿ ಸಬಲಗೊಳ್ಳಲು ಹಲವು ಮಹತ್ವದ ಕ್ರಮಗಳನ್ನು ಕೈಗೊಂಡರು. ಸಮಾನತೆಯ ಸಮಾಜ ನಿರ್ಮಾಣಕ್ಕೆ ಅವರು ಹಾಕಿದ ಅಡಿಪಾಯ ಇಂದಿಗೂ ಪ್ರಸ್ತುತವಾಗಿದ್ದು, ಅವರ ಜನಪರ ನೀತಿಗಳು ಇಂದಿನ ಪೀಳಿಗೆಗೂ ಮಾರ್ಗದರ್ಶಕವಾಗಿವೆ ಎಂದರು.

ಶಿಕ್ಷಣ, ಸಾಮಾಜಿಕ ಸಮಾನತೆ ಹಾಗೂ ಜನಕಲ್ಯಾಣಕ್ಕೆ ಆದ್ಯತೆ ನೀಡಿದ ಅರಸು ಅವರು ಹಲವು ಜನಪರ ಯೋಜನೆಗಳನ್ನು ಜಾರಿಗೆ ತಂದರು. ವೃದ್ಧರು, ಅಂಗವಿಕಲರು ಹಾಗೂ ನಿರ್ಗತಿಕರ ಕಲ್ಯಾಣಕ್ಕೂ ವಿಶೇಷ ಒತ್ತು ನೀಡುವ ಮೂಲಕ ಜನಸಾಮಾನ್ಯರ ಬದುಕಿನ ಮಟ್ಟ ಸುಧಾರಿಸಲು ಶ್ರಮಿಸಿದ ಅವರು 1972ರಿಂದ 1980ರವರೆಗಿನ ಆಡಳಿತ ಅವಧಿ ಕರ್ನಾಟಕದ ಸಾಮಾಜಿಕ ಪರಿವರ್ತನೆಯ ಸುವರ್ಣ ಯುಗವಾಗಿತ್ತೆಂದು ಬಣ್ಣಿಸಲಾಗಿದೆ ಎಂದು ಅಭಿಪ್ರಾಯಪಟ್ಟರು.

ತಾಲೂಕು ಆಶ್ರಯ ಸಮಿತಿ ಹಾಗೂ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ನಿತಿನ್ ವೆಂಕಟೇಶ್ ಮಾತನಾಡಿ, ದೇವರಾಜ ಅರಸು ಅವರ ಅಚ್ಚಳಿಯದ ಹೆಜ್ಜೆ ಗುರುತುಗಳು ಸಮಾಜದ ಸುಧಾರಣೆಯ ದಾರಿಯನ್ನು ಇಂದಿಗೂ ತೋರಿಸುತ್ತಿವೆ. ಅವರ ಜಯಂತಿ ಕೇವಲ ಅರಸು ಮನೆತನಕ್ಕೆ ಸೀಮಿತವಾದ ಕಾರ್ಯಕ್ರಮವಲ್ಲ. ಅವರ ಜನಪರ ಆಡಳಿತ ಹಾಗೂ ಅಭಿವೃದ್ಧಿ ಯೋಜನೆಗಳ ಫಲವನ್ನು ರಾಜ್ಯದ ಜನತೆ ಇಂದಿಗೂ ಅನುಭವಿಸುತ್ತಿದ್ದಾರೆ. ಬಡತನ ನಿರ್ಮೂಲನೆಗೆ ಆದ್ಯತೆ ನೀಡಿ ಸಾಮಾಜಿಕ ಪರಿವರ್ತನೆಗೆ ಅವರು ಕಾರಣಕರ್ತರಾಗಿದ್ದರು ಎಂದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಹೊಸಳ್ಳಿ ಕೃಷ್ಣೇಗೌಡ, ಅರಸು ವಂಶಸ್ಥ ಹಾಗೂ ವಕೀಲ ದೇವರಾಜ ಅರಸು, ಸಣ್ಣಸ್ವಾಮಿ ಮಾತನಾಡಿದರು.

ಕಳೆದ ಸಾಲಿನ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ, ವಿವಿಧ ಆಟೋಟ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಉತ್ತಮ ಸೇವೆ ಸಲ್ಲಿಸಿದ ಅಡುಗೆ ಸಿಬ್ಬಂದಿ ಹಾಗೂ ಸಹಾಯಕರನ್ನು ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು. ವಿವಿಧ ನಿಲಯಗಳ ವಿದ್ಯಾರ್ಥಿ, ವಿದ್ಯಾರ್ಥಿನಿಯರು ನೃತ್ಯ ಹಾಗೂ ಗಾಯನ ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು.

ಎಂ.ಡಿ.ಸಿ.ಸಿ. ನಿರ್ದೇಶಕ ಈ.ಪಿ. ಲೋಕೇಶ್, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ರಾಜಣ್ಣ, ಉಪ ತಹಸೀಲ್ದಾರ್ ಶ್ರೀನಿವಾಸ್, ಮಾಜಿ ಪುರಸಭೆ ಅಧ್ಯಕ್ಷ ವಿಷಕಂಠಯ್ಯ, ಕಾಂಗ್ರೆಸ್ ಮುಖಂಡ ಪಿ. ಮಹದೇವ್, ಕೆಡಿಪಿ ಸದಸ್ಯ ಲಕ್ಷ್ಮೀನಾರಾಯಣ, ಮಾಜಿ ಪುರಸಭೆ ಸದಸ್ಯ ರವಿ, ರೈತ ಸಂಘದ ಮುಖಂಡ ವಿಜಯರಾಜ್ ಅರಸ್ ಸೇರಿದಂತೆ ಬಿಸಿಎಂ ನಿಲಯಗಳ ವಿದ್ಯಾರ್ಥಿಗಳು, ಮೇಲ್ವಿಚಾರಕರು, ಅಡುಗೆ ಸಿಬ್ಬಂದಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಮಂಡ್ಯ ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಲು ಆಗ್ರಹ

**ಆ.28, 29ರಂದು ಜಿಲ್ಲಾಧಿಕಾರಿ ಹಾಗೂ ತಾಲೂಕು ಕಚೇರಿ ಎದುರು ಸಿಪಿಐಎಂ ಪ್ರತಿಭಟನೆ**

**ಮಂಡ್ಯ:** ಜಿಲ್ಲೆಯನ್ನು ಬರಪೀಡಿತ ಎಂದು ಘೋಷಿಸಿ, ರೈತರು–ಕೂಲಿಕಾರರಿಗೆ ಪರಿಹಾರಕ್ಕೆ ಒತ್ತಾಯಿಸಿ ಆ.28 ಮತ್ತು 29ರಂದು ಜಿಲ್ಲೆಯ ಜಿಲ್ಲಾಧಿಕಾರಿ ಹಾಗೂ ಎಲ್ಲ ತಾಲೂಕು ಕಚೇರಿಗಳ ಎದುರು ಪ್ರತಿಭಟನೆ ಮಾಡಲಾಗುವುದು ಎಂದು ಭಾರತ ಕಮ್ಯುನಿಸ್ಟ್ ಪಕ್ಷ(ಮಾರ್ಕ್ಸ್ವಾದಿ) (ಸಿಪಿಐಎಂ) ಜಿಲ್ಲಾ ಕಾರ್ಯದರ್ಶಿ ಟಿ.ಎಲ್.ಕೃಷ್ಣೇಗೌಡ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾನತಾಡಿದ ಅವರು, ಕಾವೇರಿ ಜಲಾನಯನ ಹಾಗೂ ಅಚ್ಚುಕಟ್ಟು ಪ್ರದೇಶದಲ್ಲಿ ಮಳೆಯ ತೀವ್ರ ಕೊರತೆ ಉಂಟಾಗಿದೆ. ಮಂಡ್ಯ ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಬೇಕು. ರೈತರ ಬೆಳೆಗೆ ಪರಿಹಾರ ಮತ್ತು ಕೂಲಿಕಾರರಿಗೆ ಉದ್ಯೋಗ ಒದಗಿಸಬೇಕೆಂದು ಒತ್ತಾಯಿಸಲಾಗುವುದು ಎಂದರು.

ಆಗಸ್ಟ್ 28 ಮತ್ತು 29 ರಂದು ಜಿಲ್ಲೆಯ ತಾಲೂಕು ಕಚೇರಿಗಳು ಹಾಗೂ ಜಿಲ್ಲಾಧಿಕಾರಿಗಳ ಕಚೇರಿಯ ಮುಂಭಾಗ ಪ್ರತಿಭಟನೆ ನಡೆಯಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ರೈತರು, ಕೂಲಿಕಾರರು ಸೇರಿದಂತೆ ಸಾರ್ವಜನಿಕರು ಭಾಗವಹಿಸಬೇಕೆಂದು ಸಿಪಿಐಎಂ ಮನವಿ ಮಾಡಿದೆ.

ಜಿಲ್ಲೆಯಲ್ಲಿ ಪ್ರಸಕ್ತ ವರ್ಷ ತೀವ್ರ ಮಳೆ ಅಭಾವ ಎದುರಾಗಿದೆ. ರಾಜ್ಯ ಸರಕಾರದ ನೀರಾವರಿ ಸಲಹಾ ಸಮಿತಿಯು ಬೆಳೆಗಳಿಗೆ ಕೇವಲ 4 ಕಟ್ಟು ನೀರನ್ನು ಮಾತ್ರ ನೀಡುವುದಾಗಿ ಘೋಷಿಸಿರುವುದು ರೈತರಲ್ಲಿ ಆತಂಕ ಮೂಡಿಸಿದೆ. ಜಲಾನಯನ ಪ್ರದೇಶದಲ್ಲಿ ಮಳೆ ಇಲ್ಲದೆ ಕೆಆರ್‌ಎಸ್ ಅಣೆಕಟ್ಟೆಗೆ ನೀರು ಹರಿದುಬರುತ್ತಿಲ್ಲ. ಇನ್ನೊಂದೆಡೆ ತಮಿಳುನಾಡಿಗೆ ನೀರು ಹರಿಸಲಾಗುತ್ತಿದ್ದು, ಇದರಿಂದ ರೈತರು ಮತ್ತು ಕೂಲಿಕಾರರ ಬದುಕು ಹಾಗೂ ಭಾವನೆಗಳಿಗೆ ಧಕ್ಕೆ ತಂದಿದೆ ಎಂದು ಆಕ್ರೋಶ ವ್ಯಕ್ತಪಡಸಿದರು.

ಸರಕಾರ ಈ ಕೂಡಲೇ ಮಂಡ್ಯ ಜಿಲ್ಲೆಯನ್ನು ತಕ್ಷಣವೇ ಬರಪೀಡಿತ ಪ್ರದೇಶ ಎಂದು ಘೋಷಿಸಬೇಕು. ಕಾವೇರಿ ನೀರಿನ ಕೊರತೆ ಹಾಗೂ ಬರ ನಿರ್ವಹಣೆಗಾಗಿ ಜಿಲ್ಲೆಗೆ 2000 ಕೋಟಿ ರೂಪಾಯಿ ಅನುದಾನ ನೀಡಬೇಕು. ರೈತರಿಗೆ ಸೂಕ್ತ ಬೆಳೆ ನಷ್ಟ ಪರಿಹಾರ ಹಾಗೂ ಕೂಲಿಕಾರರಿಗೆ ಉದ್ಯೋಗ ನಷ್ಟ ಪರಿಹಾರ ಒದಗಿಸಬೇಕು. ಉದ್ಯೋಗ ಖಾತ್ರಿ ಯೋಜನೆಯಡಿಯ ಕೆಲಸದ ದಿನಗಳನ್ನು 200 ದಿನಗಳಿಗೆ ಹೆಚ್ಚಿಸಬೇಕು. ಮಂಡ್ಯ ಜಿಲ್ಲೆಯ ಎಲ್ಲಾ ರೈತರ ಸಾಲ ಮತ್ತು ಕೂಲಿಕಾರರ ಮೈಕ್ರೋಫೈನಾನ್ಸ್ ಸಾಲಗಳನ್ನು ಸಂಪೂರ್ಣ ಮನ್ನಾ ಮಾಡಬೇಕು. ಕಾವೇರಿ ನೀರಿನ ಕೊರತೆಯ ಸನ್ನಿವೇಶ ನಿರ್ವಹಣೆಗೆ 5000 ಕೋಟಿ ರೂಪಾಯಿಗಳ 'ಶಾಶ್ವತ ಪರಿಹಾರ ನಿಧಿ' ಸ್ಥಾಪಿಸಬೇಕು. ಈ ಸಂಬಂಧ ಕೇಂದ್ರ ಸರಕಾರವೂ ಜವಾಬ್ದಾರಿ ವಹಿಸಿಕೊಳ್ಳಬೇಕು ಎಂದು ಆಗ್ರಹಿಸಿದರು.

ಗೋಷ್ಠಿಯಲ್ಲಿ ಜಿಲ್ಲಾ ಕಾರ್ಯಕಾರಣಿ ಸದಸ್ಯರಾದ ಎನ್.ಎಲ್.ಭರತ್‌ರಾಜ್, ಸಿ.ಕುಮಾರಿ, ಬಿ.ಹನುಮಂತು ಇದ್ದರು.



## 22 ತೀವ್ರತರ ದೈಹಿಕ ವಿಕಲಚೇತನ ಮಕ್ಕಳಿಗೆ ಸಹಾಯಕ ಸಾಧನ ಸಲಕರಣೆ ವಿತರಣೆ

**ಹುಳಿಯಾರು:** ಹುಳಿಯಾರು ಹೋಬಳಿ ವ್ಯಾಪ್ತಿಯಲ್ಲಿ ಬರುವ 22 ತೀವ್ರತರ ದೈಹಿಕ ವಿಕಲಚೇತನ ಮಕ್ಕಳಿಗೆ ಮೊಬಿಲಿಟಿ ಇಂಡಿಯಾ ಸಂಸ್ಥೆಯ ಸಮುದಾಯಧಾರಿತ ಸಮನ್ವಯ ಅಭಿವೃದ್ಧಿ ಕಾರ್ಯಕ್ರಮದಡಿ ಅಗತ್ಯ ಸಹಾಯಕ ಸಾಧನ ಸಲಕರಣೆಗಳನ್ನು ತಜ್ಞರ ತಂಡದವರು ವಿತರಿಸಿ, ಪೋಷಕರಿಗೆ ಸೂಕ್ತ ಮಾರ್ಗದರ್ಶನ ನೀಡಿದರು.




ಈ ಕಾರ್ಯಕ್ರಮದಲ್ಲಿ ಮಕ್ಕಳ ದೈಹಿಕ ಅಗತ್ಯತೆಗೆ ತಕ್ಕಂತೆ ರಿವರ್ಸ್ ವಾಕರ್, ಕ್ಯಾಲಿಪರ್ ಹಾಗೂ ಬೆಳವಣಿಗೆ ಹಂತದ ಸಲಕರಣೆಗಳು ಸೇರಿದಂತೆ ಪುನಶ್ಚೇತನ ವ್ಯಾಯಾಮಕ್ಕೆ ಸಂಬಂಧಿಸಿದ ಒಟ್ಟು 46 ವಿವಿಧ ರೀತಿಯ ಸಹಾಯಕ ಸಲಕರಣೆಗಳನ್ನು ಒದಗಿಸಲಾಯಿತು. ಅಲ್ಲದೆ, ಪೋಷಕರು ಹಾಗೂ ಆರೈಕೆದಾರರಿಗೆ ಈ ಸಾಧನಗಳ ಸರಿಯಾದ ಬಳಕೆ ಮತ್ತು ವ್ಯಾಯಾಮದ ಕುರಿತು ತಜ್ಞರ ತಂಡವು ಪ್ರಾಯೋಗಿಕ ಮಾಹಿತಿ ಮತ್ತು ಮಾರ್ಗದರ್ಶನ ನೀಡಿತು.

ಕಾರ್ಯಕ್ರಮದಲ್ಲಿ ಮೊಬಿಲಿಟಿ ಇಂಡಿಯಾ ಸಂಸ್ಥೆಯ ವ್ಯವಸ್ಥಾಪಕರಾದ ಆನಂದ್ ಎಸ್.ಎನ್., ಕೃತಕ ಮತ್ತು ಕೃತ್ಯಾಂಗ ತಜ್ಞರಾದ ಹೇಮನಾತನ್ ರುಮಾನ, ಫಿಸಿಯೋಥೆರಪಿಸ್ಟ್‌ಗಳಾದ ಕೃಷ್ಣಮೂರ್ತಿ, ಸಂಕೇತ್, ಸುಧಾ, ಮಹದೇವಸ್ವಾಮಿ ಹಾಗೂ ಸ್ವಯಂ ಸೇವಕಿ ಪ್ರೇಮ ಉಪಸ್ಥಿತರಿದ್ದರು.

## ಭಾರತ್ ಜೋಡೋ ಯುವ ಸಂಘ ಸ್ಥಾಪನೆ : ನೋಂದಣಿಗೆ ಮನವಿ

**ತುಮಕೂರು:** ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 10000 ಜನಸಂಖ್ಯೆಗೆ ಒಂದರಂತೆ 16 ರಿಂದ 35 ವರ್ಷದೊಳಗಿನ ಕನಿಷ್ಠ 100 ಯುವ ಸದಸ್ಯರು ಇರುವಂತೆ ಒಟ್ಟು 35 ಭಾರತ್ ಜೋಡೋ ಯುವ ಸಂಘಗಳನ್ನು ರಚಿಸಿ ಸ್ಥಾಪಿಸಲು ಉದ್ದೇಶಿಸಲಾಗಿದ್ದು, ಆಸಕ್ತಿಯುಳ್ಳ ಅರ್ಹ ಯುವಕ/ಯುವತಿಯರು ಆಧಾರ್ ಕಾರ್ಡ್‌ನೊಂದಿಗೆ ಭಾರತ್ ಜೋಡೋ ಯುವ ಸಂಘ *(BJYS)* ದ ಲಿಂಕ್ *bjys.karnataka.gov.in* ಮೂಲಕ ನೋಂದಣಿ ಮಾಡಿಕೊಳ್ಳಬಹುದಾಗಿದೆ ಎಂದು ಪಾಲಿಕೆ ಆಯುಕ್ತೆ ಬಿ. ಶುಭ ತಿಳಿಸಿದ್ದಾರೆ.

*BJYS* ಸಂಘಗಳಲ್ಲಿ ವಿಕಾಸಶೀಲ ಮತ್ತು ಸೌಹಾರ್ದ ಶೀಲ ಕರ್ನಾಟಕ ನಿರ್ಮಾಣಕ್ಕೆ ಯುವ ವೇದಿಕೆಯನ್ನು ಸ್ಥಾಪಿಸುವುದು, ಯುವ ಜನರಲ್ಲಿ ನಾಯಕತ್ವದ ಗುಣ, ಸಾಮಾಜಿಕ ಹೊಣೆಗಾರಿಕೆ ಮತ್ತು ನಾಗರಿಕ ಪ್ರಜ್ಞೆಯನ್ನು *(Responsible citizenship)* ಮೂಡಿಸುವುದು, ಸ್ಥಳೀಯ ಸಮುದಾಯದ ಅಭಿವೃದ್ಧಿ, ಸಾಮಾಜಿಕ ಸಾಮರಸ್ಯ ಮತ್ತು ಪರಿಸರ ಸಂರಕ್ಷಣೆಯಲ್ಲಿ ಯುವಕರನ್ನು ನೇರ ಪಾಲುದಾರರನ್ನಾಗಿ ಮಾಡುವುದು, ಕ್ರೀಡೆ, ಫಿಟ್‌ನೆಸ್ ಮತ್ತು ಕೌಶಲ್ಯಾಭಿವೃದ್ಧಿ ಮೂಲಕ ಯುವ ಜನರ ಆರ್ಥಿಕ ಮತ್ತು ಸಾಮಾಜಿಕ ಸಬಲೀಕರಣ ಸ್ಥಾಪಿಸುವುದು ಯುವ ಸಂಘಗಳು ರಚಿಸುವ ದೂರದೃಷ್ಟಿ ಹೊಂದಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಪಾಲಿಕೆಯ ಡೇ–ನಲ್ಮ್ ಶಾಖೆಯನ್ನು ಸಂಪರ್ಕಿಸಬೇಕೆಂದು ಅವರು ಮನವಿ ಮಾಡಿದ್ದಾರೆ.

# 5ಕೋಟಿರೂ ರಿಫಂಡ್: ಆರ್ಟ್ ಆಫ್ ಲಿವಿಂಗ್ ಫೌಂಡೇಶನ್‌ಗೆ ಸುಪ್ರೀಂಕೋರ್ಟ್ ಬಿಗ್ ರಿಲೀಫ್

**ನವದೆಹಲಿ:** ರವಿಶಂಕರ್ ನೇತೃತ್ವದ 'ಆರ್ಟ್ ಆಫ್ ಲಿವಿಂಗ್' ಫೌಂಡೇಶನ್‌ಗೆ ಸುಪ್ರೀಂಕೋರ್ಟ್ ಶನಿವಾರ ಬಿಗ್ ರಿಲೀಫ್ ನೀಡಿದೆ. ದೆಹಲಿಯ ಪರಿಸರ ಸೂಕ್ಷ್ಮ ಯಮುನಾ ನದಿ ಪಾತ್ರದ ಪ್ರದೇಶಕ್ಕೆ (ಜಿಟಠಿಜಊಠಿಟಚಿಟಿಛಿ) ಹಾನಿ ಉಂಟುಮಾಡಿದ ಆರೋಪದ ಮೇರೆಗೆ 2016ರಲ್ಲಿ ನಡೆದ ವಿವಾದಾತ್ಮಕ ವಿಶ್ವ ಸಂಸ್ಕೃತಿ ಉತ್ಸವ ಕಾರ್ಯಕ್ರಮಕ್ಕೆ ಪಾವತಿಸಿದ್ದ 5 ಕೋಟಿ ರೂ. ದಂಡದ ಮೊತ್ತವನ್ನು ದೆಹಲಿ ಅಭಿವೃದ್ಧಿ ಪ್ರಾಧಿಕಾರ ಮರುಪಾವತಿಸುವಂತೆ ಮಹತ್ವದ ಆದೇಶ ಪ್ರಕಟಿಸಿದೆ.



ವಿಶ್ವ ಸಂಸ್ಕೃತಿ ಉತ್ಸವ ಯಮುನಾ ನದಿಯ ಸೂಕ್ಷ್ಮ ಪರಿಸರ ವ್ಯವಸ್ಥೆಗೆ ಹಾನಿ ಉಂಟುಮಾಡಿದೆ ಎಂಬುದಕ್ಕೆ ಯಾವುದೇ ನೇರ ಸಾಕ್ಷ್ಯವಿಲ್ಲ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ. 'ಆರ್ಟ್ ಆಫ್ ಲಿವಿಂಗ್'ನ ಆಶ್ರಯದಲ್ಲಿರುವ ನೋಂದಾಯಿತ ಸಾರ್ವಜನಿಕ ಧರ್ಮದತ್ತಿ ಸಂಸ್ಥೆಯಾದ 'ವ್ಯಕ್ತಿ ವಿಕಾಸ್ ಕೇಂದ್ರ'ವು ಪಾವತಿಸಿದ್ದ ದಂಡದ ಹಣವನ್ನು ದೆಹಲಿ ಅಭಿವೃದ್ಧಿ ಪ್ರಾಧಿಕಾರವು (ಆಆಂ) ಮರುಪಾವತಿಸಬೇಕು ಎಂದು ನ್ಯಾಯಾಲಯ ಆದೇಶಿಸಿದೆ.

2016ರ ಮಾರ್ಚ್‌ನಲ್ಲಿ ನಡೆದಿದ್ದ "ವಿಶ್ವ ಸಂಸ್ಕೃತಿ ಉತ್ಸವ"ದ (ಘಂಡಿಟಜ ಅಣಟಣಾಡಿಜ ಈಢಣುತಿಚಿಟ) ಸಿದ್ಧತೆಗಳ ಸಂದರ್ಭದಲ್ಲಿ ಯಮುನಾ ನದಿ ಪಾತ್ರದ ಪ್ರದೇಶಕ್ಕೆ ಹಾನಿ ಉಂಟುಮಾಡಿದ್ದಕ್ಕಾಗಿ 'ಆರ್ಟ್ ಆಫ್ ಲಿವಿಂಗ್' ಸಂಸ್ಥೆಯನ್ನು ಹೊಣೆಗಾರರನ್ನಾಗಿಸಿ, ನ್ಯಾಷನಲ್ ಗ್ರೀನ್ ಟ್ರಿಬ್ಯೂನಲ್ (ಓಉಖ) ಡಿಸೆಂಬರ್ 2017ರಲ್ಲಿ ಈ ದಂಡವನ್ನು ವಿಧಿಸಿತ್ತು.

ಆರ್ಟ್ ಆಫ್ ಲಿವಿಂಗ್'ಗೆ ಬಿಗ್ ರಿಲೀಫ್ ನೀಡುವ ಸಂದರ್ಭದಲ್ಲಿ, ಯಮುನಾ ನದಿ ಪಾತ್ರದ ಪ್ರದೇಶವನ್ನು ರಕ್ಷಿಸುವ ತನ್ನ ಕರ್ತವ್ಯವನ್ನು ನಿರ್ವಹಿಸುವಲ್ಲಿ ಡಿಡಿಎ (ಆಆಂ) ವಿಫಲವಾಗಿದೆ ಎಂದೂ ಸುಪ್ರೀಂ ಕೋರ್ಟ್ ಹೇಳಿತು. ಅಲ್ಲದೆ, ಎನ್‌ಜಿಟಿ (ಓಉಖ) ನಿರ್ದೇಶಿಸಿದಂತೆ ಯಮುನಾ ನದಿ ಪಾತ್ರದ ಪ್ರದೇಶದ ಪುನಶ್ಚೇತನ ಕಾರ್ಯವನ್ನು ಮುಂದುವರಿಸುವಂತೆಯೂ ನಗರ ಯೋಜನೆ ಮತ್ತು ಅಭಿವೃದ್ಧಿ ಸಂಸ್ಥೆಗೆ ನ್ಯಾಯಾಲಯ ಸೂಚನೆ ನೀಡಿದೆ.

ಪೂರ್ಣ ದಂಡದ ಮೊತ್ತವನ್ನು ಪಾವತಿಸಲು ಒಪ್ಪಿಕೊಂಡ ನಂತರ, ಯಮುನಾ ನದಿಯ ದಡದಲ್ಲಿ ತಮ್ಮ ಬೃಹತ್ ಕಾರ್ಯಕ್ರಮವನ್ನು ನಡೆಸಲು 'ಆರ್ಟ್ ಆಫ್ ಲಿವಿಂಗ್'ಗೆ ಪರಿಸರ ಸಮಿತಿಯು ಅನುಮತಿ ನೀಡಿತ್ತು. 2016ರ ಮಾರ್ಚ್ 11 ರಿಂದ–13ರವರೆಗೂ ಈ ಕಾರ್ಯಕ್ರಮ ನಡೆದಿತ್ತು. ವಿಶ್ವ ಸಂಸ್ಕೃತಿ ಉತ್ಸವ"ದ (ಘಂಡಿಟಜ ಅಣಟಣಾಡಿಜ ಈಢಣುತಿಚಿಟ) ಉದ್ಘಾಟನಾ ದಿನವಾದ 2016ರ ಮಾರ್ಚ್ 11ರಂದು, ಒಟ್ಟು ಮೊತ್ತ ಪಾವತಿಸಲು ನಾಲ್ಕು ವಾರಗಳ ಕಾಲಾವಕಾಶ ಕೋರಿ ಆಯೋಜಕರು ರಾಷ್ಟ್ರೀಯ ಹಸಿರು ನ್ಯಾಯಮಂಡಳಿಯನ್ನು (ಓಉಖ) ಸಂಪರ್ಕಿಸಿದ್ದರು.

ಆರ್ಟ್ ಆಫ್ ಲಿವಿಂಗ್ ನ ಭೂ ಅತಿಕ್ರಮಣ ತನಿಖೆಗೆ ಕರ್ನಾಟಕ ಸರ್ಕಾರ ಖಐಖ ರಚನೆ

ಆ ದಿನವೇ 25 ಲಕ್ಷ ರೂಪಾಯಿಗಳನ್ನು ಪಾವತಿಸಲು ಸಂಸ್ಥೆಗೆ ಅನುಮತಿ ನೀಡಿದ ನ್ಯಾಯಮಂಡಳಿಯು, ಉಳಿದ ಮೊತ್ತವನ್ನು ಪಾವತಿಸಲು ಮೂರು ವಾರಗಳ ಕಾಲಾವಕಾಶವನ್ನು ನೀಡಿತ್ತು. ಆ ಸಮಯದಲ್ಲಿ 25 ಲಕ್ಷ ರೂಪಾಯಿಗಳನ್ನು ಪಾವತಿಸಲಾಯಿತಾದರೂ, ನಂತರ 'ಆರ್ಟ್ ಆಫ್ ಲಿವಿಂಗ್' ಸಂಸ್ಥೆಯು ತಾವು ಪಾವತಿಸಬೇಕಿದ್ದ 4.75 ಕೋಟಿ ರೂಪಾಯಿಗಳನ್ನು "ಬಾಕಿ ಮೊತ್ತದ ಪಾವತಿ"ಯ ಬದಲಾಗಿ "ಬ್ಯಾಂಕ್ ಗ್ಯಾರಂಟಿ"ಯಾಗಿ ಪರಿಗಣಿಸಬೇಕು ಮತ್ತು ಆ ಹಣವನ್ನು ಆ ಪ್ರದೇಶದಲ್ಲಿ ಜೀವವೈವಿಧ್ಯ ಉದ್ಯಾನವನವನ್ನು ಸ್ಥಾಪಿಸಲು ಬಳಸಬೇಕು ಎಂದು ಕೋರಿತು.

ಅಂತಿಮವಾಗಿ ದಂಡದ ಮೊತ್ತವನ್ನು ಪೂರ್ಣವಾಗಿ ಪಾವತಿಸಲಾಯಿತಾದರೂ, ನಂತರ 'ಆರ್ಟ್ ಆಫ್ ಲಿವಿಂಗ್' ಸಂಸ್ಥೆಯು ಸುಪ್ರೀಂ ಕೋರ್ಟ್‌ನಲ್ಲಿ ಎನ್‌ಜಿಟಿ (ಓಉಖ) ತೀರ್ಪನ್ನು ಪ್ರಶ್ನಿಸಿತು. ಇದು ದೀರ್ಘಕಾಲದ ಕಾನೂನು ಹೋರಾಟಕ್ಕೆ ನಾಂದಿ ಹಾಡಿತು. ಈಗ ಮಹತ್ವದ ಆದೇಶ ಹೊರಬಿದ್ದಿದ್ದು, ಆರ್ಟ್ ಆಫ್ ಲಿವಿಂಗ್ ಸಂಸ್ಥೆಗೆ ಬಿಗ್ ರಿಲೀಫ್ ಸಿಕ್ಕಿದೆ.

## ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ದಿಢೀರ್ ನಾಪತ್ತೆ

**ಬೆಂಗಳೂರು:** ಈ ಹಿಂದೆ ಕೆಪಿಎಸ್‌ಸಿಯಲ್ಲಿ ಕಾರ್ಯನಿರ್ವಹಿಸಿದ್ದ ರಾಜ್ಯದ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಅವರು ನಗರದಿಂದ ದಿಢೀರ್ ನಾಪತ್ತೆಯಾಗಿರುವುದು ಅನುಮಾನಕ್ಕೆ ಎಡೆಮಾಡಿ ಕೊಟ್ಟಿದೆ.



ದೇವನಹಳ್ಳಿಯ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಕಳೆದ ಆ.20ರಂದು ತೆರಳಿದ್ದ ಅವರು ಬೆಳಗ್ಗೆ ಮೊಬೈಲ್ ಸ್ವಿಚ್ ಆಫ್ ಮಾಡಿಕೊಂಡಿದ್ದು, ಬಳಿಕ ಅವರ ಬಗ್ಗೆ ಯಾವುದೇ ಮಾಹಿತಿ ಲಭ್ಯವಾಗಿಲ್ಲ.

ಜ್ಞಾನೇಂದ್ರ ಕುಮಾರ್ ನವದೆಹಲಿಗೆ ತೆರಳಲು ವಿಮಾನದ ಟಿಕೆಟ್ ಬುಕ್ ಮಾಡಿದ್ದರು ಎನ್ನಲಾಗಿದೆ. ದೆಹಲಿಗೆ ತೆರಳುವುದಾಗಿ ತಿಳಿಸಿ ವಿಮಾನ ನಿಲ್ದಾಣಕ್ಕೆ ಹೋಗಿದ್ದರೂ, ಅಲ್ಲಿಂದ ಅವರು ವಿಮಾನ ಏರಿರುವ ಬಗ್ಗೆ ಮಾಹಿತಿ ಲಭ್ಯವಾಗಿಲ್ಲ. ವಿಮಾನ ನಿಲ್ದಾಣದವರೆಗೆ ಅವರ ಚಲನವಲನವನ್ನು ಪೊಲೀಸರು ಟ್ರ್ಯಾಕ್ ಮಾಡಿದ್ದು, ಬಳಿಕ ಮೊಬೈಲ್ ಸಂಪರ್ಕ ಕಡಿತಗೊಂಡಿದೆ. ಜ್ಞಾನೇಂದ್ರ ಕುಮಾರ್ ಅವರ ಮೊಬೈಲ್ ಫೋನ್ ಸ್ವಿಚ್ ಆಫ್ ಆಗಿರುವ ಹಿನ್ನೆಲೆಯಲ್ಲಿ ನವದೆಹಲಿ ಕಡೆಗೆ ತೆರಳಿರುವ ಸಾಧ್ಯತೆಯನ್ನೂ ಪೊಲೀಸರು ಪರಿಶೀಲಿಸುತ್ತಿದ್ದಾರೆ. ಆದರೆ, ಅವರ ಕುಟುಂಬದವರ ಸಂಪರ್ಕಕ್ಕೂ ಅಧಿಕಾರಿ ಸಿಗದಿರುವುದು ಆತಂಕಕ್ಕೆ ಕಾರಣವಾಗಿದೆ. ಜ್ಞಾನೇಂದ್ರ ಕುಮಾರ್ ಅವರಿಗೆ ಈ ಹಿಂದೆ ಆರೋಗ್ಯ ಸಮಸ್ಯೆ ಇತ್ತು ಎಂಬ ಮಾಹಿತಿಯೂ ಲಭ್ಯವಾಗಿದೆ. ಸದ್ಯ ಅವರು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ (ಎಂಎಸ್ ಎಂಇ) ವ್ಯವಸ್ಥಾಪಕ ನಿರ್ದೇಶಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಈ ಹಿಂದೆ ಕರ್ನಾಟಕ ಲೋಕಸೇವಾ ಆಯೋಗದಲ್ಲಿ (ಕೆಪಿಎಸ್ ಸಿ) ಸೇವೆ ಸಲ್ಲಿಸಿದ್ದರು.

ಪೊಲೀಸರಿಂದ ಶೋಧ:ಜ್ಞಾನೇಂದ್ರ ಕುಮಾರ್ ನಾಪತ್ತೆಯಾಗಿರುವ ಬಗ್ಗೆ ಹಿರಿಯ ಐಎಎಸ್ ಅಧಿಕಾರಿಯೊಬ್ಬರು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರಿಗೆ ಮಾಹಿತಿ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಪೊಲೀಸರು ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಅಧಿಕಾರಿಯ ಚಲನವಲನದ ಕುರಿತು ಮಾಹಿತಿ ಕಲೆಹಾಕುತ್ತಿದ್ದಾರೆ. ವಿಮಾನ ನಿಲ್ದಾಣದದಿಂದ ಅವರು ಎಲ್ಲಿಗೆ ತೆರಳಿದ್ದಾರೆ ಎಂಬುದನ್ನು ಪತ್ತೆಹಚ್ಚಲು ಪೊಲೀಸರು ಮುಂದಾಗಿದ್ದಾರೆ. ವಿಮಾನ ನಿಲ್ದಾಣದ ಸುತ್ತಮುತ್ತಲಿನ ಸಿಸಿಟಿವಿ ದೃಶ್ಯಗಳು ಸೇರಿದಂತೆ ಲಭ್ಯವಿರುವ ಮಾಹಿತಿಯನ್ನು ಪರಿಶೀಲಿಸಲಾಗುತ್ತಿದೆ.

ಅಕ್ರಮದ ಬೆನ್ನಲ್ಲೇ ನಾಪತ್ತೆ: ಜ್ಞಾನೇಂದ್ರ ಕುಮಾರ್ ಅವರ ನಾಪತ್ತೆ ಪ್ರಕರಣವು ಇತ್ತೀಚೆಗೆ ಬೆಳಕಿಗೆ ಬಂದಿರುವ ಕೆಪಿಎಸ್ ಸಿ ಪಶುವೈದ್ಯಾಧಿಕಾರಿ ನೇಮಕಾತಿ ಪರೀಕ್ಷಾ ಅಕ್ರಮದ ಹಿನ್ನೆಲೆಯಲ್ಲಿ ಮತ್ತಷ್ಟು ಮಹತ್ವ ಪಡೆದುಕೊಂಡಿದೆ. ಪಶುವೈದ್ಯಾಧಿಕಾರಿ ನೇಮಕಾತಿ ಪರೀಕ್ಷೆಗೆ ಸಂಬಂಧಿಸಿದ ಅಕ್ರಮದ ತನಿಖೆಯ ಭಾಗವಾಗಿ ಜಾರಿ ನಿರ್ದೇಶನಾಲಯ (ಇಡಿ) ಅಧಿಕಾರಿಗಳು ಬುಧವಾರ ದಾಳಿ ನಡೆಸಿದ್ದರು. ಈ ಪ್ರಕರಣದಲ್ಲಿ ಜ್ಞಾನೇಂದ್ರ ಕುಮಾರ್ ಅವರು ಹಿಂದೆ ಕೆಪಿಎಸ್ ಸಿಯಲ್ಲಿ ಕಾರ್ಯನಿರ್ವಹಿಸಿದ್ದ ಅವಧಿಯಲ್ಲಿನ ಪಾತ್ರ ಸೇರಿದಂತೆ ಹಲವು ಅಂಶಗಳನ್ನು ತನಿಖಾ ಸಂಸ್ಥೆಗಳು ಪರಿಶೀಲಿಸುತ್ತಿವೆ ಎಂಬ ಮಾಹಿತಿ ಇದೆ. ಇಡಿ ದಾಳಿ ನಡೆದ ಮರುದಿನವೇ ಅವರು ನಾಪತ್ತೆಯಾಗಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ.

## ಜಿಕೆವಿಕೆ ರೈತಸಂತೆಯಲ್ಲಿ ಗಮನ ಸೆಳೆದ ಮೊಹಬ್ಬತ್ ಶರ್ಬತ್

**ಬೆಂಗಳೂರು:** ಉದ್ದು, ಹುರಳಿ ಹಪ್ಪಳ, ಗಿರ್ ತಳಿಯ ಗಿಣ್ಣು, ಸಿರಿಧಾನ್ಯಗಳ ಅಂಬಲಿ, ಮೊಹಬ್ಬತ್ ಶರ್ಬತ್ (ಕಲ್ಲಂಗಡಿ), ಸಾವಯವ ತರಕಾರಿ ಹಾಗೂ ಹಣ್ಣುಗಳನ್ನು ಸವಿದು ನಗರದ ಜನತೆ ಸಂಭ್ರಮಿಸಿದರು. ಜಿಕೆವಿಕೆ ಆವರಣದ ಗಣಪತಿ ದೇವಸ್ಥಾನದ ಸಮೀಪದ ಗುಂಡುತೋಪಿನಲ್ಲಿ ಆಯೋಜಿಸಿದ್ದ ರೈತಸಂತೆಯಲ್ಲಿ ಜೈವಿಕ ಗೊಬ್ಬರದ ಕ್ಯಾಪ್ಸೂಲ್‌ಗಳು, ಅವಕಾಡೊ ಟೋಸ್ಟ್, ಸ್ವರ್ಣಧಾರ ಕೋಳಿ, ನಾಟಿ ಮೊಟ್ಟೆ ಹಾಗೂ ಇತರ ಉತ್ಪನ್ನಗಳು ಗ್ರಾಹಕರನ್ನು ಆಕರ್ಷಿಸಿದವು. ಇತ್ತೀಚಿನ ದಿನಗಳಲ್ಲಿ ಕೈತೋಟಗಳ ಪ್ರವೃತ್ತಿ ಹೆಚ್ಚಾಗಿದ್ದು, ದೊಡ್ಡ ಚೀಲಗಳಲ್ಲಿ ಗೊಬ್ಬರವನ್ನು ಕೊಂಡೊಯ್ಯುವುದು ಕಷ್ಟಸಾಧ್ಯವಾಗಿದೆ. ಈ ಹಿನ್ನೆಲೆಯಲ್ಲಿ ರೈತರು ಹಾಗೂ ನಗರ ತೋಟಗಾರಿಕೆ ಮಾಡುವವರ ಅನುಕೂಲಕ್ಕಾಗಿ ಜೈವಿಕ ಗೊಬ್ಬರದ ಕ್ಯಾಪ್ಸೂಲ್‌ಗಳು ರೈತಸಂತೆಯಲ್ಲಿ ಆಕರ್ಷಣೀಯವಾಗಿದ್ದವು.



ಸೂಕ್ಷ್ಮ ಜೀವಿಗಳ ಸಮೂಹವನ್ನು ಒಳಗೊಂಡಿರುವ ಈ ಕ್ಯಾಪ್ಸೂಲ್‌ಗಳು ಮಣ್ಣಿನ ಫಲವತ್ತತೆಯನ್ನು ಕಾಪಾಡಿಕೊಂಡು ಉತ್ತಮ ಇಳುವರಿ ನೀಡಲು ಸಹಕಾರಿಯಾಗುತ್ತವೆ. ಉದ್ದು ಹಾಗೂ ಹುರಳಿಯಿಂದ ತಯಾರಿಸಿದ ಹಪ್ಪಳಗಳು ವಿಶೇಷ ಉತ್ಪನ್ನವಾಗಿದ್ದು, ಸಾಂಪ್ರದಾಯಿಕ ಆಹಾರ ಪದ್ಧತಿಯನ್ನು ಉಳಿಸಿಕೊಂಡು ತಯಾರಿಸಲಾದ ಈ ಹಪ್ಪಳಗಳಿಗೆ ಬೇಡಿಕೆ ಹೆಚ್ಚಾಗಿತ್ತು. ಹಾಲಿನೊಂದಿಗೆ ತಾಜಾ ಕಲ್ಲಂಗಡಿ ಹಣ್ಣಿನಿಂದ ತಯಾರಿಸಲಾದ ಮೊಹಬ್ಬತ್ ಶರ್ಬತ್ ರೈತಸಂತೆಯಲ್ಲಿ ಜನಪ್ರಿಯ ಆಕರ್ಷಣೆಯಾಗಿತ್ತು. ಪೌಷ್ಟಿಕಾಂಶಭರಿತ ಜೋಳದಿಂದ ತಯಾರಿಸಿದ ಅಂಬಳಿ, ಸಾಂಪ್ರದಾಯಿಕ ಪಾನೀಯಗಳು ಹಾಗೂ ಸಿರಿಧಾನ್ಯಗಳಿಂದ ತಯಾರಿಸಲಾದ ಪಾನೀಯಗಳು ದೇಹಕ್ಕೆ ತಂಪು ಹಾಗೂ ಶಕ್ತಿ ನೀಡುವ ಪೌಷ್ಟಿಕ ಪಾನೀಯಗಳಾಗಿದ್ದು, ಈ ಕುರಿತು ರೈತರು ಹಾಗೂ ಗ್ರಾಹಕರಲ್ಲಿ ಅರಿವು ಮೂಡಿಸಲಾಯಿತು.

ತಾಜಾ ಅವಕಾಡೊ ಬಳಸಿ ತಯಾರಿಸಲಾದ ಟೋಸ್ಟ್ ರೈತಸಂತೆಯಲ್ಲಿ ಆರೋಗ್ಯಕರ ಆಹಾರದ ವಿಶೇಷ ಆಕರ್ಷಣೆಯಾಗಿತ್ತು.

# ಕೇಂದ್ರ ತನಿಖಾ ಸಂಸ್ಥೆಗಳ ಕಿರುಕುಳದಿಂದ 12 ಲಕ್ಷ ಉದ್ಯಮಿಗಳು ಭಾರತ ತೊರೆದಿದ್ದಾರೆ: ಸಿಎಂ ಡಿಕೆ.ಶಿವಕುಮಾರ್

**ಬೆಂಗಳೂರು:** ಆದಾಯ ತೆರಿಗೆ ಇಲಾಖೆ, ಜಾರಿ ನಿರ್ದೇಶನಾಲಯ (ಇಡಿ) ಮತ್ತು ಸಿಬಿಐನಂತಹ ಕೇಂದ್ರ ತನಿಖಾ ಸಂಸ್ಥೆಗಳ ಕಿರುಕುಳದಿಂದಾಗಿ 12 ಲಕ್ಷ ಉದ್ಯಮಿಗಳು ದೇಶ ತೊರೆದಿದ್ದಾರೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಶುಕ್ರವಾರ ಹೇಳಿದ್ದಾರೆ.

ಇನ್‌ಸ್ಟಿಟ್ಯೂಟ್ ಆಫ್ ಚಾರ್ಟರ್ಡ್ ಅಕೌಂಟೆಂಟ್ಸ್ ಆಫ್ ಇಂಡಿಯಾ (ICAI) ಆಯೋಜಿಸಿದ್ದ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರಾಮಾಣಿಕವಾಗಿ ತೆರಿಗೆ ಪಾವತಿಸುವ ಉದ್ಯಮಿಗಳು ಮಾನಸಿಕ ಕಿರುಕುಳಕ್ಕೆ ಒಳಗಾಗುತ್ತಿದ್ದಾರೆ. ಆದರೆ, ಅಕ್ರಮಗಳಲ್ಲಿ ತೊಡಗಿರುವವರನ್ನು ಸಮರ್ಪಕವಾಗಿ ಪ್ರಶ್ನಿಸಲಾಗುತ್ತಿಲ್ಲ ಎಂದು ಆರೋಪಿಸಿದರು.



ಐಟಿ, ಇಡಿ ಮತ್ತು ಸಿಬಿಐ ಅವರ ಪಾಲಿಗೆ ಅತಿಯಾಗಿವೆ. ಹೀಗಾಗಿ ಅವರು ದೇಶವನ್ನೇ ತೊರೆಯುತ್ತಿದ್ದಾರೆಂದು ಅಗತ್ಯವಿಲ್ಲದ ಕಿರುಕುಳವಿಲ್ಲದೆ ಸ ಂ ಗ ಂ ವ ಂ ವ ಾ ಗಿ ಕಾರ್ಯನಿರ್ವಹಿಸಲು ಉದ್ಯಮಗಳಿಗೆ ಅನುಕೂಲಕರ ವಾತಾವರಣವನ್ನುಸರ್ಕಾರನಿರ್ಮಿಸಬೇಕು. ರಾಜ್ಯದ ಆದಾಯ ಹೆಚ್ಚಿಸುವುದು, ಸೋರಿಕೆಯನ್ನು ತಡೆಗಟ್ಟುವುದು ಹಾಗೂ ಹಣಕಾಸು ನಿರ್ವಹಣೆಯಲ್ಲಿನ ಲೋಪಗಳನ್ನು ಸರಿಪಡಿಸುವ ಕುರಿತು ಚಾರ್ಟರ್ಡ್ ಅಕೌಂಟೆಂಟ್‌ಗಳು ಸರ್ಕಾರಕ್ಕೆ ಸಲಹೆ ನೀಡಬೇಕು ಎಂದು ಮನವಿ ಮಾಡಿದರು.

ಹೊಸ ಆಲೋಚನೆಗಳು ಮತ್ತು ಪರಿಹಾರಗಳನ್ನು ಸ್ವಾಗತಿಸಲುನಾವುಸಿದ್ಧರಿದ್ದೇವೆ. ನಮ್ಮ ತಪ್ಪುಗಳನ್ನು ಸರಿಪಡಿಸಲು ನಿಮ್ಮ ಸಲಹೆಗಳನ್ನು ನೀಡಿ ಎಂದು ಹೇಳಿದರು. ನಾಗೇಂದ್ರ ರಾಜೀನಾಮೆಗೆ ಪ್ರತಿಪಕ್ಷಗಳ ಪಟ್ಟು: ?ಸಾಕ್ಷ್ಯವಿದ್ದರೆ ಸದನದ ಮುಂದಿಡಿ, ಚರ್ಚಿಸೋಣ; ಸಿಎಂ ಡಿಕೆ.ಶಿವಕುಮಾರ್ಕರ್ನಾಟಕ ಆರ್ಥಿಕ ಶಕ್ತಿಕೇಂದ್ರವಾಗಿ ಹೊರಹೊಮ್ಮುತ್ತಿದ್ದು, ರಾಜ್ಯದ ಆರ್ಥಿಕ ಬೆಳವಣಿಗೆಯಲ್ಲಿ ಚಾರ್ಟರ್ಡ್ ಅಕೌಂಟೆಂಟ್‌ಗಳ ಪಾತ್ರ ಮಹತ್ವದ್ದಾಗಿದೆ ಎಂದು ತಿಳಿಸಿದರು.

ಇದೇ ವೇಳೆ ದೇಶದ ಆರ್ಥಿಕತೆಗೆ ಕರ್ನಾಟಕದ ಕೊಡುಗೆಯನ್ನು ಪ್ರಸ್ತಾಪಿಸಿದ ಶಿವಕುಮಾರ್ ಅವರು,

ದಕ್ಷಿಣ ಭಾರತವು ಭಾರತದ ಪ್ರಗತಿಯನ್ನು ಮುನ್ನಡೆಸುವ ?ಇಂಧನ? ಎಂದು ಬಣ್ಣಿಸಿದರು.

ದೇಶದಲ್ಲಿ ಎರಡನೇ ಅತಿ ಹೆಚ್ಚು ತೆರಿಗೆ ಪಾವತಿಸುವ ರಾಜ್ಯ ಕರ್ನಾಟಕವಾಗಿದ್ದು, ತನ್ನ ಕೊಡುಗೆಗೆ ಅನುಗುಣವಾಗಿ ರಾಜ್ಯಕ್ಕೆ ಸಂಪನ್ಮೂಲಗಳ ನ್ಯಾಯಯುತ ಪಾಲು ದೊರೆಯಬೇಕು ಎಂದು ಪ್ರತಿಪಾದಿಸಿದರು. ಇತರ ಹಲವು ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕದಲ್ಲಿ ಔಪಚಾರಿಕ ವಹಿವಾಟಿನ ಪ್ರಮಾಣ ಹೆಚ್ಚಾಗಿದೆ ಎಂದರು.

## ಮುಂಗಾರು ಕೊರತೆ: ಮೋಡ ಬಿತ್ತನೆಗೆ ಮುಂದಾದ ರಾಜ್ಯ ಸರ್ಕಾರ

**ಬೆಂಗಳೂರು:** ರಾಜ್ಯದಲ್ಲಿ ಮುಂಗಾರು ಮಳೆಯ ತೀವ್ರ ಕೊರತೆ ಹಾಗೂ ಬರದ ಆತಂಕದ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರ 2026–27ನೇ ಸಾಲಿನಲ್ಲಿ ಮೋಡ ಬಿತ್ತನೆ ಕಾರ್ಯಕ್ರಮ ಜಾರಿಗೆ ಮುಂದಾಗಿದೆ. ಮುಖ್ಯಮಂತ್ರಿ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಮಳೆ ಕೊರತೆ ಕುರಿತು ಚರ್ಚಿಸಿ, ವೈಜ್ಞಾನಿಕ ಹಾಗೂ ತಾಂತ್ರಿಕ ವಿಧಾನಗಳ ಮೂಲಕ ಮಳೆ ಕೊರತೆ ನೀಗಿಸಲು ಕ್ರಮ ಕೈಗೊಳ್ಳುವಂತೆ ಜನಪ್ರತಿನಿಧಿಗಳು ಒತ್ತಾಯಿಸಿದ್ದರು.

ಈ ಹಿನ್ನೆಲೆಯಲ್ಲಿ M/s. Kyathi Climate Modification Consultants LLP ಸಂಸ್ಥೆ ಆ.13ರಂದು ಸಲ್ಲಿಸಿದ್ದ ಪ್ರಸ್ತಾವನೆಗೆ ಸರ್ಕಾರ ಅನುಮೋದನೆ ನೀಡಿದೆ. 60 ದಿನಗಳ ಅವಧಿಯಲ್ಲಿ ಒಂದು ವಿಮಾನದ ಮೂಲಕ ಒಟ್ಟು 200 ಗಂಟೆಗಳ ವೈಮಾನಿಕ ಹಾರಾಟ ನಡೆಸಲು 28.52 ಕೋಟಿ ರೂ. ವೆಚ್ಚವಾಗಲಿದೆ. ಇದರಲ್ಲಿ 27.52 ಕೋಟಿ ರೂ. ಸ್ಥಿರ ವೆಚ್ಚ ಹಾಗೂ 1 ಕೋಟಿ ರೂ. ವೇರಿಯಬಲ್ ವೆಚ್ಚವಾಗಿದ್ದು, ಜಿಎಸ್‌ಟಿ ಹೆಚ್ಚುವರಿಯಾಗಿರಲಿದೆ.

ಸರ್ಕಾರದ ಆ.19ರ ಆದೇಶದಂತೆ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಮೋಡ ಬಿತ್ತನೆ ಕಾರ್ಯಾಚರಣೆಯ ತಾಂತ್ರಿಕ ಮತ್ತು ವೈಜ್ಞಾನಿಕ ಉಸ್ತುವಾರಿಯನ್ನು ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ವಹಿಸಲಿದೆ.

ಅಂದಾಜು ತಯಾರಿ, ತಾಂತ್ರಿಕ ಮಾನದಂಡ, ಹವಾಮಾನ ಮೌಲ್ಯಮಾಪನ, ಮೇಲ್ವಿಚಾರಣೆ, ಕಾರ್ಯಾಚರಣೆ ಮೌಲ್ಯಮಾಪನ ಹಾಗೂ ಪೂರ್ಣಗೊಳಿಸುವಿಕೆ ಪ್ರಮಾಣೀಕರಣದ ಜವಾಬ್ದಾರಿ ಕೇಂದ್ರದ್ದಾಗಿದೆ. ಹಣಕಾಸು ಹಾಗೂ ಬಿಲ್ ಪಾವತಿ ಸೇರಿದಂತೆ ಆಡಳಿತಾತ್ಮಕ ವಿಚಾರಗಳನ್ನು ಕರ್ನಾಟಕ ನೀರಾವರಿ ನಿಗಮ ನಿರ್ವಹಿಸಲಿದೆ.

ಜಲಸಂಪನೂಲ ಸಚಿವ ಎನ್.ಚಲುವರಾಯಸ್ವಾಮಿ ಅವರ ಮಾರ್ಗದರ್ಶನದಲ್ಲಿ ಯೋಜನೆ ಜಾರಿಯಾಗಲಿದ್ದು, ರೈತರು ಹಾಗೂ ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿರುವ ಪ್ರದೇಶಗಳಿಗೆ ಪರಿಹಾರ ಒದಗಿಸುವುದು ಸರ್ಕಾರದ ಉದ್ದೇಶವಾಗಿದೆ.

# ಎಲ್ಲಾ ಕ್ಷೇತ್ರಗಳ ಸುಧಾರಣೆಯೇ ನಮ್ಮ ಬದ್ಧತೆ: ಪ್ರಧಾನಿ ನರೇಂದ್ರ ಮೋದಿ

**ನವದೆಹಲಿ:** ಎಲ್ಲಾ ಕ್ಷೇತ್ರಗಳಲ್ಲಿನ ಸುಧಾರಣೆಗಳು ತಮ್ಮ ಸರ್ಕಾರದ ಬದ್ಧತೆಯಾಗಿದ್ದು, ದೇಶದ ನಿರಂತರ ಬೆಳವಣಿಗೆಯ ವೇಗವನ್ನು ಕಾಯ್ದುಕೊಳ್ಳಲು ಭಾರತ ಹಲವು ಕ್ರಮಗಳನ್ನು ಮುಂದುವರಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

ಎಕನಾಮಿಕ್ ಟೈಮ್ಸ್ ವರ್ಲ್ಡ್ ಲೀಡರ್ಸ್ ಫೋರಂ ಉದ್ದೇಶಿಸಿ ಮಾತನಾಡಿದ ಅವರು, ಭಾರತ ತನ್ನ ನೀತಿಗಳಲ್ಲಿ ರಾಜಕೀಯ ಸ್ಥಿರತೆ ಮತ್ತು ನಿರಂತರತೆಯನ್ನು ಹೊಂದಿದೆ. ಹೀಗಾಗಿ ಜಗತ್ತು ಭಾರತವನ್ನು ಬೆಳವಣಿಗೆ ಮತ್ತು ಭರವಸೆಯ ಉಜ್ವಲ ತಾಣವಾಗಿ ನೋಡುತ್ತಿದೆ ಎಂದರು.

ನಿರಂತರ ಬೆಳವಣಿಗೆಯ ವೇಗವನ್ನು ಖಚಿತಪಡಿಸಿಕೊಳ್ಳಲು ಭಾರತ ಹಲವು ಕ್ರಮಗಳನ್ನು ಕೈಗೊಳ್ಳುತ್ತಿದೆ. ವಿವಿಧ ಕ್ಷೇತ್ರಗಳಲ್ಲಿ ಸುಧಾರಣೆಗಳೊಂದಿಗೆ ದೇಶ ಮುನ್ನಡೆಯುತ್ತಿದ್ದು, ಸುಧಾರಣೆಗಳು ನಮ್ಮ ಬದ್ಧತೆಯಾಗಿವೆ ಎಂದು ಹೇಳಿದರು.

ಸಂಪನ್ಮೂಲಗಳಶಸ್ತ್ರೀಕರಣದಿಂದಾಗಿಜಗತ್ತು ಬೆಳವಣಿಗೆಗೆ ಸಂಬಂಧಿಸಿದ ಹಲವು ಕಳವಳಗಳನ್ನು ಎದುರಿಸುತ್ತಿದೆ. ಆದರೆ ಭಾರತವನ್ನು ಮಾತ್ರ ಬೆಳವಣಿಗೆಯ ಉಜ್ವಲ ತಾಣವಾಗಿ ನೋಡಲಾಗುತ್ತಿದೆ ಎಂದು ಪ್ರಧಾನಿ ಹೇಳಿದರು.

ಆಡಳಿ ತದ ಮೇಲೆ ಬ ಲ ವಾ ದ ಗ ವ ಂ ನ



ಕೇಂದ್ರೀಕರಿಸಿರುವ ಸುಧಾರಣೆಗಳಿಗೆ ಎನ್‌ಡಿಎ ಸರ್ಕಾರ ಸ್ಪಷ್ಟ ಮಾರ್ಗಸೂಚಿಯನ್ನು ಹೊಂದಿದೆ. ಹೆಚ್ಚಿನ ಉತ್ಪಾದನೆಗೆ ಉತ್ತೇಜನ ನೀಡುವ ಮೂಲಕ ಸರ್ಕಾರ ಪ್ರತಿಫಲ ನೀಡುತ್ತಿದೆ ಎಂದರು.

ಜನರನ್ನು ಕೊರತೆಯಲ್ಲಿಡುವುದು ಹಿಂದಿನ ಸರ್ಕಾರಗಳ ನೀತಿಯಾಗಿತ್ತು. ಇದರಿಂದ ಜನರು ತಮ್ಮ ಮೂಲಭೂತ ಅಗತ್ಯಗಳಿಗಾಗಿ ಸರ್ಕಾರದ ಮುಂದೆ ಬೇಡಿಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿತ್ತು ಎಂದು ಮೋದಿ ಆರೋಪಿಸಿದರು. ಹಿಂದಿನ ಸರ್ಕಾರಗಳ ?ಲೈಸೆನ್ಸ್ ರಾಜ್? ನಿರುದ್ಯೋಗದ ಹೊರೆಯನ್ನು ಹೆಚ್ಚಿಸಿತ್ತು. ಆದರೆ ತಮ್ಮ ಸರ್ಕಾರದ ಉತ್ಪಾದನೆ ಆಧಾರಿತ ಪ್ರೋತ್ಸಾಹಕ ಮಾದರಿ ಹೊಸ ಅವಕಾಶಗಳನ್ನು ಸೃಷ್ಟಿಸುತ್ತಿದೆ ಎಂದು ಹೇಳಿದರು.

?ನಾವು ಕೇವಲ ನಿಯಮಗಳನ್ನು ಬದಲಾಯಿಸುತ್ತಿಲ್ಲ. ಸಂಪೂರ್ಣ ನಿಯಂತ್ರಣ ವ್ಯವಸ್ಥೆಯನ್ನೇ ಬದಲಾಯಿಸುತ್ತಿದ್ದೇವೆ. ಕಾನೂನಿನ ಅಡಿಯಲ್ಲಿ ಸ್ಪಷ್ಟವಾಗಿ ನಿಷೇಧಿಸದ ಕೆಲಸವನ್ನು ಮಾಡಲು ಅನಗತ್ಯ ನಿಯಂತ್ರಣ ಇರಬಾರದು ಎಂಬುದು ನಮ್ಮ ಸರ್ಕಾರದ ನಂಬಿಕೆ? ಎಂದು ಪ್ರಧಾನಿ ಹೇಳಿದರು.

ತಮ್ಮ ಸರ್ಕಾರ ನೀತಿ ಮಟ್ಟದಲ್ಲಿ ಮುಂದಿನ ಪೀಳಿಗೆಯ ಸುಧಾ ರಣೆಗಳನ್ನು ಜಾರಿಗೊ ಳಿಸುತ್ತಿದ್ದು, ಆಡಳಿತದ ಮಟ್ಟದಲ್ಲಿಯೂ ಹಾಗೂ ಜೀವನ ಸುಲಭಗೊಳಿಸುವ ನಿಟ್ಟಿನಲ್ಲಿಯೂ ಸುಧಾರಣೆಗಳನ್ನು ಕೈಗೊಳ್ಳುತ್ತಿದೆ ಎಂದರು.

ನಿಷೇಧಿಸದ ಹೊರತು ಅನುಮತಿ? ಎಂಬ ಮಾದರಿಯಿಂದ ?ನಿಷೇಧಿಸಿದ ಹೊರತು ಅನುಮತಿ? ಎಂಬ ಮಾದರಿಯತ್ತ ಸಾಗುತ್ತಿದ್ದೇವೆ ಎಂದು ಹೇಳಿದರು.

ಭಾರತೀಯ ರೈಲ್ವೆ, ದೆಹಲಿ ಮೆಟ್ರೋ ಮತ್ತು ನಮೋ ರ?ಯಾಪಿಡ್ ರೈಲಿನಂತಹ ಕ್ಷೇತ್ರಗಳಲ್ಲಿನ ಸಣ್ಣ ಸುಧಾರಣೆಗಳೂ ದೇಶವು ಕಾಲಕ್ಕೆ ತಕ್ಕಂತೆ ಬದಲಾಗುತ್ತಿದೆ ಎಂಬುದನ್ನು ತೋರಿಸುತ್ತವೆ ಎಂದು ಪ್ರಧಾನಿ ಹೇಳಿದರು.

ವಿದೇಶಿ ಉಪಗ್ರಹಗಳು ಭಾರತದ ನಕ್ಷೆಯನ್ನು ರಚಿಸಬಹುದಾದರೂ, ಅನುಮತಿಯಿಲ್ಲದೆ ಯಾರೂ ಭಾರತದ ನಕ್ಷೆಯನ್ನು ತಯಾರಿಸಲು ಸಾಧ್ಯವಿಲ್ಲ ಎಂಬಂತಹ ನಿಯಮಗಳು ಈ ಹಿಂದೆ ಇದ್ದವು. ಆದರೆ ತಮ್ಮ ಸರ್ಕಾರ ಈ ವ್ಯವಸ್ಥೆಯಲ್ಲಿ ಬದಲಾವಣೆ ತಂದಿದೆ ಎಂದು ಅವರು ಹೇಳಿದರು.

ಗಡಿ ಮೂಲಸೌಕರ್ಯವು ಭಾರತದ ಶಕ್ತಿಯಾಗಿರಬೇಕೇ ಹೊರತು ದೌರ್ಬಲ್ಯವಾಗಬಾರದು ಎಂದು ಸರ್ಕಾರ ನಿರ್ಧರಿಸಿದೆ. ಈ ಮೂಲಕ ಭಾರತದ ಗಡಿ ಮೂಲಸೌಕರ್ಯದ ಚಿತ್ರಣವನ್ನೇ ಬದಲಾಯಿಸಿದ್ದೇವೆ ಎಂದರು. ವಿಶ್ವದಲ್ಲೇ ಅತ್ಯಂತ ಅಗ್ಗದ ಡೇಟಾ ಭಾರತದಲ್ಲಿ ಲಭ್ಯವಿದೆ. ದೇಶವು ಅಗ್ಗದ ಮತ್ತು ಗುಣಮಟ್ಟದ ಮೊಬೈಲ್ ಫೋನ್‌ಗಳನ್ನು ತಯಾರಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

## ಎಫ್‌ಐಆರ್ ದಾಖಲಿಸಿದರೂ ಹೆದರಬೇಡಿ, ನೈಸ್ ರಸ್ತೆ ಟೋಲ್ ಕಟ್ಟಬೇಡಿ?: ಹೆಚ್.ಡಿ. ಕುಮಾರಸ್ವಾಮಿ



**ಬೆಂಗಳೂರು:** ನೈಸ್ ರಸ್ತೆ ವಿಚಾರವಾಗಿ ತಮ್ಮ ಸಮರ ಮುಂದುವರೆಸಿರುವ ಕೇಂದ್ರ ಸಚಿವ ಊಆ ಕುಮಾರಸ್ವಾಮಿ, ಯಾವುದೇ ಕಾರಣಕ್ಕೂ NICE ರಸ್ತೆಯಲ್ಲಿ ಟೋಲ್ ಪಾವತಿಸಬೇಡಿ ಎಂದು ಮತ್ತೊಮ್ಮೆ ವಾಹನ ಸವಾರರಿಗೆ ಕರೆ ನೀಡಿದ್ದಾರೆ.

ಟೋಲ್ ಸಂಗ್ರಹದ ವಿಚಾರದಲ್ಲಿ NICE ಕಂಪನಿ ಹಾಗೂ ರಾಜ್ಯ ಸರ್ಕಾರದ ವಿರುದ್ಧ ಮತ್ತೆ ಎಚ್ ಡಿ ಕುಮಾರಸ್ವಾಮಿ ತೀವ್ರ ಆರೋಪ ಮಾಡಿದ್ದು, NICE ರಸ್ತೆ ಟೋಲ್ ಸಂಗ್ರಹದ ಹೆಸರಿನಲ್ಲಿ ?ಹಗಲು ದರೋಡೆ? ನಡೆಯುತ್ತಿದೆ ಎಂದು ಆರೋಪಿಸಿದರು.

ಬೆಂಗಳೂರಿನಲ್ಲಿ ಮಾತನಾಡಿದ ಕುಮಾರಸ್ವಾಮಿ, 'ಟೋಲ್ ಪಾವತಿಸದಿದ್ದರೆ ಈಖಖ ದಾಖಲಿಸುವುದಾಗಿ ಅಧಿಕಾರಿಗಳು ಬೆದರಿಸಿದರೂ ವಾಹನ ಸವಾರರು ಹೆದರಬಾರದು. FIR ದಾಖಲಿಸಿದರೂ ಹೆದರಬೇಡಿ. ಕೈಮುಗಿದು ಮನವಿ ಮಾಡುತ್ತೇನೆ, ಯಾವುದೇ ಕಾರಣಕ್ಕೂ ಟೋಲ್ ಪಾವತಿಸಬೇಡಿ? ಎಂದು ಕುಮಾರಸ್ವಾಮಿ ಮನವಿ ಮಾಡಿದರು.

ತೀರ್ಪಿನ ದಿನವೇ ಸರ್ಕಾರ ಕ್ರಮ ಕೈಗೊಳ್ಳಬೇಕಿತ್ತು?: NICE ಕಂಪನಿಯ ವಿರುದ್ಧ ಸಿಂಗಲ್ ಬೆಂಚ್ ತೀರ್ಪು ನೀಡಿದ ದಿನವೇ ರಾಜ್ಯ ಸರ್ಕಾರ ಕಠಿಣ ಕ್ರಮ ಕೈಗೊಳ್ಳಬೇಕಿತ್ತು ಎಂದು ಕುಮಾರಸ್ವಾಮಿ ಹೇಳಿದರು. ನ್ಯಾಯಾಲಯದ ತೀರ್ಪು ಹಾಗೂ ಫ್ರೇಮ್‌ವರ್ಕ್ ಒಪ್ಪಂದದ ನಿಯಮಗಳನ್ನು NICE ಉಲ್ಲಂಘಿಸಿದೆ ಎಂದು ಅವರು ಆರೋಪಿಸಿದರು. ರಾಜ್ಯ ಸರ್ಕಾರದ ಅನುಮತಿ ಪಡೆಯದೇ ಟೋಲ್ ದರಗಳನ್ನು ಸುಮಾರು 7 ರಿಂದ 8 ಪಟ್ಟು ಹೆಚ್ಚಿಸಲಾಗಿದೆ ಎಂದು ದೂರಿದರು.

ಅಕ್ರಮ ಟೋಲ್ ದರ ಏರಿಕೆಯ ವಿಚಾರವನ್ನು ಸಿಂಗಲ್ ಬೆಂಚ್ ಹಾಗೂ ಡಿವಿಷನ್ ಬೆಂಚ್ ಎರಡೂ ಗಮನಿಸಿವೆ. ಆದರೂ ತೀರ್ಪು ಬಂದ ಒಂದು ತಿಂಗಳಾದರೂ ಸರ್ಕಾರ ಮೌನ ವಹಿಸಿರುವುದು ಏಕೆ ಎಂದು ಪ್ರಶ್ನಿಸಿದರು. ?ಸರ್ಕಾರ ಮತ್ತು NICE ಕಂಪನಿ ನಡುವೆ ಏನು ಸಂಬಂಧ?? ಎಂದು ಕುಮಾರಸ್ವಾಮಿ ಕಿಡಿಕಾರಿದರು. ಅಕ್ರಮವಾಗಿ 2,000 ಕೋಟಿ ಸಂಗ್ರಹ: NICE ರಸ್ತೆಯಲ್ಲಿ ಟೋಲ್ ಹೆಸರಿನಲ್ಲಿ ಸುಮಾರು ?2,000 ಕೋಟಿ ಅಕ್ರಮವಾಗಿ ಸಂಗ್ರಹಿಸಲಾಗಿದೆ. ಫ್ರೇಮ್‌ವರ್ಕ್ ಒಪ್ಪಂದದ ಪ್ರಕಾರ, 111 ಕಿಲೋಮೀಟರ್ ರಸ್ತೆ ಅಭಿವೃದ್ಧಿಪಡಿಸಿ ಐದು ಟೌನ್‌ಶಿಪ್‌ಗಳನ್ನು ನಿರ್ಮಿಸುವವರೆಗೆ ಟೋಲ್ ಸಂಗ್ರಹಿಸಲು ಅವಕಾಶವಿಲ್ಲ. ಹಾಗಿದ್ದರೂ ಈ ಷರತ್ತುಗಳನ್ನು ಪೂರೈಸದೆ ಓಖಅಇ ಕಂಪನಿ ಟೋಲ್ ಸಂಗ್ರಹ ಮುಂದುವರಿಸುವುದು ಹೇಗೆ? ಟೋಲ್ ದರಗಳನ್ನು ಹೆಚ್ಚಿಸಲು ಯಾವ ಆಧಾರವಿದೆ? ಎಂದು ಅವರು ಪ್ರಶ್ನಿಸಿದರು. ಅಕ್ರಮ ಟೋಲ್ ವಿರುದ್ಧ ಧ್ವನಿ ಎತ್ತಿ?: ಸಾರ್ವಜನಿಕರು ಅಕ್ರಮ ಟೋಲ್ ಸಂಗ್ರಹದ ವಿರುದ್ಧ ಧ್ವನಿ ಎತ್ತಬೇಕು ಎಂದು ಕುಮಾರಸ್ವಾಮಿ ಕರೆ ನೀಡಿದರು. ಈ ಹಿಂದೆ ಕೂಡ ಓಖಅಇ ರಸ್ತೆ ಟೋಲ್ ಪಾವತಿಸದಂತೆ ಕುಮಾರಸ್ವಾಮಿ ಕರೆ ನೀಡಿದ್ದರು. ಇದಾದ ಬಳಿಕ ಹಲವು ಟೋಲ್ ಪ್ಲಾಜಾಗಳಲ್ಲಿ ವಾಹನ ಸವಾರರು ಮತ್ತು ಸಿಬ್ಬಂದಿ ನಡುವೆ ವಾಗ್ವಾದ ನಡೆದಿತ್ತು.

# ಎಫ್‌ಐಆರ್ ದಾಖಲಿಸಿದರೂ ಹೆದರಬೇಡಿ, ನೈಸ್ ರಸ್ತೆ ಟೋಲ್ ಕಟ್ಟಬೇಡಿ?: ಹೆಚ್.ಡಿ. ಕುಮಾರಸ್ವಾಮಿ

**ಬೆಂಗಳೂರು:** ನೈಸ್ ರಸ್ತೆ ವಿಚಾರವಾಗಿ ತಮ್ಮ ಸಮರ ಮುಂದುವರೆಸಿರುವ ಕೇಂದ್ರ ಸಚಿವ ಊಆ ಕುಮಾರಸ್ವಾಮಿ, ಯಾವುದೇ ಕಾರಣಕ್ಕೂ NICE ರಸ್ತೆಯಲ್ಲಿ ಟೋಲ್ ಪಾವತಿಸಬೇಡಿ ಎಂದು ಮತ್ತೊಮ್ಮೆ ವಾಹನ ಸವಾರರಿಗೆ ಕರೆ ನೀಡಿದ್ದಾರೆ.

ಟೋಲ್ ಸಂಗ್ರಹದ ವಿಚಾರದಲ್ಲಿ NICE ಕಂಪನಿ ಹಾಗೂ ರಾಜ್ಯ ಸರ್ಕಾರದ ವಿರುದ್ಧ ಮತ್ತೆ ಎಚ್ ಡಿ ಕುಮಾರಸ್ವಾಮಿ ತೀವ್ರ ಆರೋಪ ಮಾಡಿದ್ದು, NICE ರಸ್ತೆ ಟೋಲ್ ಸಂಗ್ರಹದ ಹೆಸರಿನಲ್ಲಿ ?ಹಗಲು ದರೋಡೆ? ನಡೆಯುತ್ತಿದೆ ಎಂದು ಆರೋಪಿಸಿದರು.

ಬೆಂಗಳೂರಿನಲ್ಲಿ ಮಾತನಾಡಿದ ಕುಮಾರಸ್ವಾಮಿ, 'ಟೋಲ್ ಪಾವತಿಸದಿದ್ದರೆ ಈಖಖ ದಾಖಲಿಸುವುದಾಗಿ ಅಧಿಕಾರಿಗಳು ಬೆದರಿಸಿದರೂ ವಾಹನ ಸವಾರರು ಹೆದರಬಾರದು. FIR ದಾಖಲಿಸಿದರೂ ಹೆದರಬೇಡಿ. ಕೈಮುಗಿದು ಮನವಿ ಮಾಡುತ್ತೇನೆ, ಯಾವುದೇ ಕಾರಣಕ್ಕೂ ಟೋಲ್ ಪಾವತಿಸಬೇಡಿ? ಎಂದು ಕುಮಾರಸ್ವಾಮಿ ಮನವಿ ಮಾಡಿದರು.

ತೀರ್ಪಿನ ದಿನವೇ ಸರ್ಕಾರ ಕ್ರಮ ಕೈಗೊಳ್ಳಬೇಕಿತ್ತು?: NICE ಕಂಪನಿಯ ವಿರುದ್ಧ ಸಿಂಗಲ್ ಬೆಂಚ್ ತೀರ್ಪು ನೀಡಿದ ದಿನವೇ ರಾಜ್ಯ ಸರ್ಕಾರ ಕಠಿಣ ಕ್ರಮ ಕೈಗೊಳ್ಳಬೇಕಿತ್ತು ಎಂದು ಕುಮಾರಸ್ವಾಮಿ ಹೇಳಿದರು. ನ್ಯಾಯಾಲಯದ ತೀರ್ಪು ಹಾಗೂ ಫ್ರೇಮ್‌ವರ್ಕ್



ಒಪ್ಪಂದದ ನಿಯಮಗಳನ್ನು NICE ಉಲ್ಲಂಘಿಸಿದೆ ಎಂದು ಅವರು ಆರೋಪಿಸಿದರು. ರಾಜ್ಯ ಸರ್ಕಾರದ ಅನುಮತಿ ಪಡೆಯದೇ ಟೋಲ್ ದರಗಳನ್ನು ಸುಮಾರು 7 ರಿಂದ 8 ಪಟ್ಟು ಹೆಚ್ಚಿಸಲಾಗಿದೆ ಎಂದು ದೂರಿದರು.

ಅಕ್ರಮ ಟೋಲ್ ದರ ಏರಿಕೆಯ ವಿಚಾರವನ್ನು ಸಿಂಗಲ್ ಬೆಂಚ್ ಹಾಗೂ ಡಿವಿಷನ್ ಬೆಂಚ್ ಎರಡೂ ಗಮನಿಸಿವೆ. ಆದರೂ ತೀರ್ಪು ಬಂದ ಒಂದು ತಿಂಗಳಾದರೂ ಸರ್ಕಾರ ಮೌನ ವಹಿಸಿರುವುದು ಏಕೆ ಎಂದು ಪ್ರಶ್ನಿಸಿದರು. ?ಸರ್ಕಾರ ಮತ್ತು NICE ಕಂಪನಿ ನಡುವೆ ಏನು ಸಂಬಂಧ?? ಎಂದು ಕುಮಾರಸ್ವಾಮಿ ಕಿಡಿಕಾರಿದರು. ಅಕ್ರಮವಾಗಿ 2,000 ಕೋಟಿ ಸಂಗ್ರಹ: NICE ರಸ್ತೆಯಲ್ಲಿ ಟೋಲ್ ಹೆಸರಿನಲ್ಲಿ ಸುಮಾರು ?2,000 ಕೋಟಿ ಅಕ್ರಮವಾಗಿ ಸಂಗ್ರಹಿಸಲಾಗಿದೆ.

ಫ್ರೇಮ್‌ವರ್ಕ್ ಒಪ್ಪಂದದ ಪ್ರಕಾರ, 111 ಕಿಲೋಮೀಟರ್ ರಸ್ತೆ ಅಭಿವೃದ್ಧಿಪಡಿಸಿ ಐದು ಟೌನ್‌ಶಿಪ್‌ಗಳನ್ನು ನಿರ್ಮಿಸುವವರೆಗೆ ಟೋಲ್ ಸಂಗ್ರಹಿಸಲು ಅವಕಾಶವಿಲ್ಲ. ಹಾಗಿದ್ದರೂ ಈ ಷರತ್ತುಗಳನ್ನು ಪೂರೈಸದೆ ಓಖಅಇ ಕಂಪನಿ ಟೋಲ್ ಸಂಗ್ರಹ ಮುಂದುವರಿಸುವುದು ಹೇಗೆ? ಟೋಲ್ ದರಗಳನ್ನು ಹೆಚ್ಚಿಸಲು ಯಾವ ಆಧಾರವಿದೆ? ಎಂದು ಅವರು ಪ್ರಶ್ನಿಸಿದರು. ಅಕ್ರಮ ಟೋಲ್ ವಿರುದ್ಧ ಧ್ವನಿ ಎತ್ತಿ?: ಸಾರ್ವಜನಿಕರು ಅಕ್ರಮ ಟೋಲ್ ಸಂಗ್ರಹದ ವಿರುದ್ಧ ಧ್ವನಿ ಎತ್ತಬೇಕು ಎಂದು ಕುಮಾರಸ್ವಾಮಿ ಕರೆ ನೀಡಿದರು. ಈ ಹಿಂದೆ ಕೂಡ ಓಖಅಇ ರಸ್ತೆ ಟೋಲ್ ಪಾವತಿಸದಂತೆ ಕುಮಾರಸ್ವಾಮಿ ಕರೆ ನೀಡಿದ್ದರು. ಇದಾದ ಬಳಿಕ ಹಲವು ಟೋಲ್ ಪ್ಲಾಜಾಗಳಲ್ಲಿ ವಾಹನ ಸವಾರರು ಮತ್ತು ಸಿಬ್ಬಂದಿ ನಡುವೆ ವಾಗ್ವಾದ ನಡೆದಿತ್ತು. ಟೋಲ್ ಸಂಗ್ರಹದ ಕಾನೂನುಬದ್ಧತೆಯನ್ನೇ ಕೆಲ ಪ್ರಯಾಣಿಕರು ಪ್ರಶ್ನಿಸಿದ್ದರು.

ಇದೀಗ ಕುಮಾರಸ್ವಾಮಿ ಮತ್ತೆ ?ಟೋಲ್ ಪಾವತಿಸಬೇಡಿ? ಎಂದು ಕರೆ ನೀಡಿರುವುದು ಓಖಅಇ ರಸ್ತೆ ಟೋಲ್ ವಿವಾದವನ್ನು ಮತ್ತೊಮ್ಮೆ ಮುನ್ನೆಲೆಗೆ ತಂದಿದೆ.

# ನಾಗೇಂದ್ರ ರಾಜೀನಾಮೆಗೆ ಪ್ರತಿಪಕ್ಷಗಳ ಪಟ್ಟು: ಸಾಕ್ಷ್ಯವಿದ್ದರೆ ಸದನದ ಮುಂದಿಡಿ, ಚರ್ಚಿಸೋಣ; ಸಿಎಂ ಡಿಕೆ.ಶಿವಕುಮಾರ್

**ಬೆಂಗಳೂರು:** ವಾಲ್ಮೀಕಿ ನಿಗಮದ ಬಹುಕೋಟಿ ಹಗರಣದ ವಿಚಾರವಾಗಿ ವಿಧಾನ ಪರಿಷತ್‌ನಲ್ಲಿ ಆಡಳಿತ ಮತ್ತು ಪ್ರತಿಪಕ್ಷದ ನಡುವೆ ಮತ್ತೆ ವಾಕ್ಸಮರ ತೀವ್ರಗೊಂಡಿದೆ.

ಸಚಿವ ಬಿ. ನಾಗೇಂದ್ರ ಅವರನ್ನು ಸಂಪುಟದಿಂದ ಕೈಬಿಡುವಂತೆ ಪ್ರತಿಪಕ್ಷ ಸದಸ್ಯರು ಪಟ್ಟು ಹಿಡಿದು ಪ್ರತಿಭಟನೆ ನಡೆಸಿದ ಬೆನ್ನಲ್ಲೇ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆರೋಪಗಳಿಗೆ ಸದನದಲ್ಲೇ ಚರ್ಚೆಯ ಮೂಲಕ ಉತ್ತರ ಪಡೆಯುವಂತೆ ಪ್ರತಿಪಕ್ಷಕ್ಕೆ ಆಹ್ವಾನ ನೀಡಿದ್ದಾರೆ.

ನಾಗೇಂದ್ರ ವಿರುದ್ಧ ನಿಮ್ಮ ಬಳಿ ಇರುವ ಸಾಕ್ಷ್ಯವೇನು ಎಂಬುದನ್ನು ಸದನದ ಮುಂದೆ ಮಂಡಿಸಿ? ಎಂದು ಡಿಕೆಶಿ ಸವಾಲು ಹಾಕಿದ್ದಾರೆ.

ಪ್ರಜಾಪ್ರಭುತ್ವದಲ್ಲಿ ಪ್ರತಿಭಟನೆ ನಡೆಸುವ ಹಕ್ಕು ಎಲ್ಲರಿಗೂ ಇದೆ. ಸರ್ಕಾರಕ್ಕೂ ಅದರಲ್ಲಿ ಯಾವುದೇ ತಕರಾರಿಲ್ಲ. ಪ್ರತಿಭಟನೆಗೂ ಮುನ್ನ ಸಭಾಪತಿಗೆ ನೋಟಿಸ್ ನೀಡಿ, ನಾಗೇಂದ್ರ ಅವರ ವಿಚಾರವನ್ನು ಸದನದಲ್ಲಿ ಚರ್ಚಿಸಿ, ವಿಷಯವನ್ನು ಜನರ ಮುಂದಿಡುವಂತೆ ಪ್ರತಿಪಕ್ಷಕ್ಕೆ ಮನವಿ ಮಾಡಿದರು.

ಸಭಾಪತಿಗೆ ನೋಟಿಸ್ ನೀಡಿ. ನಾಗೇಂದ್ರ ಅವರ ಬಗ್ಗೆ ಚರ್ಚೆ ನಡೆಸಿ. ಈ ವಿಚಾರವನ್ನು ಜನರ ಮುಂದಿಡಿ. ನೀವು ಯಾವುದೇ ನೋಟಿಸ್ ನೀಡುತ್ತಿಲ್ಲ. ಸದನದ ಬಾವಿಗೆ ಬಂದು ಪ್ರತಿಭಟನೆಯನ್ನೂ ಮಾಡುತ್ತಿಲ್ಲ, ಚರ್ಚೆಯನ್ನೂ ನಡೆಸುತ್ತಿಲ್ಲ ಎಂದು ಹೇಳಿದರು. ಇದೇ ವೇಳೆ ನಾಗೇಂದ್ರ ವಿರುದ್ಧ ಪ್ರತಿಪಕ್ಷದ ಬಳಿ ಇರುವ ಸಾಕ್ಷ್ಯ ಹಾಗೂ ಮಾಹಿತಿಗಳೇನು ಎಂದು ಪ್ರಶ್ನಿಸಿದ ಅವರು, ನಾಗೇಂದ್ರ ಏಕೆ ರಾಜೀನಾಮೆ ನೀಡಬೇಕು? ನೀವು ಏನು ಬಯಲಿಗೆಳೆದಿದ್ದೀರಿ? ಸಿಬಿಐ, ಇಡಿ ಹಾಗೂ ಎಸ್‌ಐಟಿ ತನಿಖೆಯಲ್ಲಿ ಏನು ಪತ್ತೆಯಾಗಿದೆ ಎಂಬುದನ್ನು ಸದನಕ್ಕೂ ಜನರಿಗೂ ತಿಳಿಸಿ? ಎಂದು ಸವಾಲು ಹಾಕಿದರು.

ಬಳಿಕ ಆರೋಪಗಳಿಗೆ ಸರ್ಕಾರ ಉತ್ತರಿಸಲಿದೆ ಎಂದು ಭರವಸೆ ನೀಡಿದ ಡಿಕೆ.ಶಿವಕುಮಾರ್ ಅವರು, ನಾಗೇಂದ್ರ ಅವರನ್ನು ತಮ್ಮ ಸಂಪುಟಕ್ಕೆ ಏಕೆ ಸೇರ್ಪಡೆ ಮಾಡಿಕೊಂಡೆ ಎಂಬುದನ್ನೂ ವಿವರಿಸಬಹುದು ಎಂದು ಹೇಳಿದರು.

ಯಾವುದೇ ಚರ್ಚೆಯನ್ನೇ ನಡೆಸದೆ ನಾಗೇಂದ್ರ ಅವರನ್ನು ಭ್ರಷ್ಟರು ಎಂದು ಕರೆಯುವುದು, ಹಣ ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿಗೆ ಹೋಗಿದೆ ಎಂದು ಆರೋಪಿಸುವುದು ಹಾಗೂ ಸರ್ಕಾರವನ್ನೇ ಭ್ರಷ್ಟ ಎಂದು ಬಿಂಬಿಸುವುದು ಸರಿಯಲ್ಲ. ಕೇಂದ್ರ ಸಚಿವರು ಹಾಗೂ ಮಾಜಿ ಸಚಿವರ ವಿರುದ್ಧವೂ ಪ್ರಕರಣಗಳು ದಾಖಲಾಗಿರುವುದನ್ನು ತಾನು ಹೇಳಬಹುದು. ಆದರೆ ಆ ವಿಚಾರ ಪ್ರಸ್ತಾಪಿಸಿದರೆ ಪ್ರತಿಪಕ್ಷಕ್ಕೆ ಬೇಸರವಾಗಬಹುದು ಎಂಬ ಕಾರಣಕ್ಕೆ ಹೆಸರುಗಳನ್ನು ಹೇಳುವುದಿಲ್ಲ ಎಂದರು.



ಇದಕ್ಕೆ ಪ್ರತಿಕ್ರಿಯಿಸಿದ ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು, ನಾಗೇಂದ್ರ ವಿರುದ್ಧ ಪ್ರತಿಪಕ್ಷಕ್ಕೆ ಯಾವುದೇ ವೈಯಕ್ತಿಕ ದ್ವೇಷವಿಲ್ಲ ಎಂದು ಸ್ಪಷ್ಟಪಡಿಸಿದರು.

ನಾಗೇಂದ್ರ ಜಾಮೀನಿನ ಮೇಲೆ ಹೊರಗಿದ್ದಾರೆ, ಅವರ ವಿರುದ್ಧದ ಆರೋಪಗಳಿಂದ ನ್ಯಾಯಾಲಯ ಅವರನ್ನು ಖುಲಾಸೆಗೊಳಿಸಿಲ್ಲ ಎಂದರು.

ವಾಲ್ಮೀಕಿ ಸಮುದಾಯದ ಇತರ ನಾಯಕರನ್ನು ನಾಗೇಂದ್ರ ಬದಲಿಗೆ ಸಚಿವರನ್ನಾಗಿ ನೇಮಿಸಬಹುದು ಎಂದು ಹೇಳಿದ ನಾರಾಯಣಸ್ವಾಮಿ ಅವರು, ನಾಗೇಂದ್ರ ಅವರನ್ನು ಸಂಪುಟದಿಂದ ಕೈಬಿಟ್ಟ ಬಳಿಕ ಚರ್ಚೆಗೆ ಪ್ರತಿಪಕ್ಷ ಸಿದ್ಧವಿದೆ ಎಂದು ತಿಳಿಸಿದರು.

ಸದನದ ಕಲಾಪ ಆರಂಭವಾಗುತ್ತಿದ್ದಂತೆ ಪ್ರತಿಪಕ್ಷ ಸದಸ್ಯರು ರಾಜ್ಯ ಸರ್ಕಾರ ಹಾಗೂ ಸಚಿವ ನಾಗೇಂದ್ರ ವಿರುದ್ಧ ಘೋಷಣೆಗಳನ್ನು ಕೂಗಿದರು.

ಸದನದ ಕಲಾಪ ಸುಗಮವಾಗಿ ನಡೆಯಲು ಸಹಕರಿಸುವಂತೆ ಸಭಾಪತಿ ಸಲೀಂ ಅಹ್ಮದ್ ಮನವಿ ಮಾಡಿದರೂ ಪ್ರತಿಪಕ್ಷದ ಪ್ರತಿಭಟನೆ ಮುಂದುವರಿಯಿತು.ಇದಕ್ಕೂ ಮುನ್ನ, ಪ್ರಧಾನಿ ಮೋದಿ ಅವರನ್ನು ಟೀಕಿಸುವ ಸಂದರ್ಭದಲ್ಲಿ ದಲಿತ ಸಮುದಾಯದ ವಿರುದ್ಧ ಆಕ್ಷೇಪಾರ್ಹ ಪದಗಳನ್ನು ಬಳಸಿದ್ದಾರೆ ಎಂದು ಆರೋಪಿಸಿ ಸಚಿವ ವಿಜಯಾನಂದ ಕಾಶಪ್ಪನವರ್ ವಿರುದ್ಧ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೇಲಿನ ದೌರ್ಜನ್ಯ ತಡೆ ಕಾಯ್ದೆಯಡಿ ಪ್ರಕರಣ ದಾಖಲಿಸುವಂತೆ ನಾರಾಯಣಸ್ವಾಮಿ ಮುಖ್ಯಮಂತ್ರಿಗಳನ್ನು ಒತ್ತಾಯಿಸಿದರು.

## ತಮಿಳುನಾಡಿನಲ್ಲಿ ಸೆ.15ರಂದು ಸೋದರಮಾವನ ಚಿನ್ನದ ಉಂಗುರ ಯೋಜನೆಗೆ ಚಾಲನೆ



**ಚೆನ್ನೈ:** ನವಜಾತ ಶಿಶುಗಳಿಗೆ ಸೋದರಮಾವ ಚಿನ್ನದ ಉಂಗುರ ಯೋಜನೆಯಡಿ ಚಿನ್ನದ ಉಂಗುರಗಳನ್ನು ಖರೀದಿಸಲು ತಮಿಳುನಾಡು ಸರ್ಕಾರ ಇಬ್ಬರು ಆಭರಣ ವ್ಯಾಪಾರಿಗಳಿಗೆ ಕೆಲಸದ ಆದೇಶ ನೀಡಿದೆ ಎಂದು ತಿಳಿಸಿದೆ.

ಮಾಜಿ ಮುಖ್ಯಮಂತ್ರಿ ಸಿ.ಎನ್. ಅಣ್ಣಾದೊರೈ ಅವರ ಜನ್ಮದಿನವಾದ ಸೆ.15ರಂದು ಈ ಯೋಜನೆಗೆ ಚಾಲನೆ ನೀಡಲು ನಿರ್ಧರಿಸಲಾಗಿದೆ. ಜೂನ್‌ನಿಂದ ಸೆಪ್ಟೆಂಬರ್‌ವರೆಗೆ ಫಲಾನುಭವಿಗಳಿಗೆ ಅಗತ್ಯವಿರುವ 1,28,499 ಚಿನ್ನದ ಉಂಗುರಗಳನ್ನು ಪೂರೈಸಲು ತಮಿಳುನಾಡು ವೈದ್ಯಕೀಯ ಸೇವೆಗಳ ನಿಗಮವು ಜಾಯ್ ಅಲುಕ್ಕಾಸ್ ಮತ್ತು ಕಲ್ಯಾಣ್ ಜ್ಯುವೆಲ್ಲರ್ಸ್‌ಗೆ 70:30 ಅನುಪಾತದಲ್ಲಿ ಕೆಲಸದ ಆದೇಶ ನೀಡಿದೆ ಎಂದು ಸರ್ಕಾರ ತಡರಾತ್ರಿ ತಿಳಿಸಿದೆ.

ಏಪ್ರಿಲ್ ವಿಧಾನಸಭಾ ಚುನಾವಣೆಗೆ ಮುನ್ನ ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಘೋಷಿಸಿದ್ದ ಈ ಯೋಜನೆಯು ಸರ್ಕಾರಿ ಆಸ್ಪತ್ರೆಗಳಲ್ಲಿ ಮಕ್ಕಳಿಗೆ ಜನ್ಮ ನೀಡುವಂತೆ ಜನರನ್ನು ಪ್ರೋತ್ಸಾಹಿಸುವ ಉದ್ದೇಶ ಹೊಂದಿದೆ.

ಒಂದು ಗ್ರಾಂ ತೂಕದ 4,41,667 ಚಿನ್ನದ ಉಂಗುರಗಳನ್ನು ಪೂರೈಸಲು ಸರ್ಕಾರ ಟೆಂಡರ್ ಕರೆದಿತ್ತು. ಅದರಂತೆ ಜುಲೈ 14ರಂದು ತಮಿಳುನಾಡು ವೈದ್ಯಕೀಯ ಸೇವೆಗಳ ನಿಗಮದ ಟೆಂಡರ್‌ನಲ್ಲಿ 11 ಕಂಪನಿಗಳು ಭಾಗವಹಿಸಿ, ತಮ್ಮ ಬೆಲೆ ವಿವರಗಳನ್ನು ಟಿಎನ್ ಟೆಂಡರ್ಸ್ ಪೋರ್ಟಲ್ ಮೂಲಕ ಸಲ್ಲಿಸಿದ್ದವು ಎಂದು ಪ್ರಕಟಣೆ ತಿಳಿಸಿದೆ.

ಇದರಲ್ಲಿ ಜಾಯ್ ಅಲುಕ್ಕಾಸ್, ಒಂದು ಗ್ರಾಂ ಚಿನ್ನದ ಬೆಲೆಯನ್ನು ಹೊರತುಪಡಿಸಿ, ಸಂಸ್ಕರಣಾ ಶುಲ್ಕ, ವಿಮೆ, ಸಾರಿಗೆ ಹಾಗೂ ಬಿಐಎಸ್ ಸ್ಟ್ಯಾಂಪಿಂಗ್ ಸೇರಿದಂತೆ ಎಲ್ಲ ಹೆಚ್ಚುವರಿ ಶುಲ್ಕಗಳನ್ನು ಒಳಗೊಂಡಂತೆ ?0.01ರ ಕಡಿಮೆ ಬಿಡ್ ಸಲ್ಲಿಸಿತ್ತು. ತಮಿಳುನಾಡು ಬಹಿರಂಗಪಡಿಸದಿರುವಿಕೆ ಒಪ್ಪಂದ ಕಾಯ್ದೆ ಮತ್ತು ನಿಯಮಗಳ ಪ್ರಕಾರ ಕಲ್ಯಾಣ್ ಜ್ಯುವೆಲ್ಲರ್ಸ್ ಕೂಡ ಕಡಿಮೆ ಬಿಡ್ ಸಲ್ಲಿಸಿತ್ತು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಯೋಜನೆಯನ್ನು ಸೆ.15, 2026ರಂದು ಆರಂಭಿಸಬೇಕಿರುವ ಹಿನ್ನೆಲೆಯಲ್ಲಿ, ಜೂನ್‌ನಿಂದ ನಾಲ್ಕು ತಿಂಗಳ ಅವಧಿಯಲ್ಲಿ ಫಲಾನುಭವಿಗಳಿಗೆ 1,28,499 ಚಿನ್ನದ ಉಂಗುರಗಳನ್ನು ಒದಗಿಸಲು ಜಾಯ್ ಅಲುಕ್ಕಾಸ್ ಮತ್ತು ಕಲ್ಯಾಣ್ ಜ್ಯುವೆಲ್ಲರ್ಸ್‌ಗೆ 70:30 ಅನುಪಾತದಲ್ಲಿ ಕೆಲಸದ ಆದೇಶ ನೀಡಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# 'ಟೆಲಿಪ್ರಾಂಪ್ಟರ್ ಇಲ್ಲದೆ ಸಂಪೂರ್ಣ 'ವಂದೇ ಮಾತರಂ' ಹಾಡಿದರೆ ನಾನು ರಾಜೀನಾಮೆ ನೀಡುತ್ತೇನೆ': ಪ್ರಿಯಾಂಕ್ ಖರ್ಗೆ ಸವಾಲು

**ಬೆಂಗಳೂರು:** ಪ್ರತಿಭಟನಾಕಾರರ ವಿರುದ್ಧ ಪೆಲೆಟ್ ಗನ್ ಬಳಕೆ ಕುರಿತು ಎಫ್‌ಐಆರ್ ದಾಖಲಿಸಲು, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ದೆಹಲಿಯ ಪೊಲೀಸ್ ಠಾಣೆಯೊಂದರಲ್ಲಿ ಎಂಟು ಗಂಟೆಗಳ ಕಾಲ ಧರಣಿ ನಡೆಸಬೇಕಾದ ಪರಿಸ್ಥಿತಿ ಎದುರಾದ ಬಗ್ಗೆ ಸಚಿವ ಪ್ರಿಯಾಂಕ್ ಖರ್ಗೆ ಶನಿವಾರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಬೆಂಗಳೂರಿನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಖರ್ಗೆ, 'ಪೆಲೆಟ್ ಗನ್ ಮೂಲಕ ಗುಂಡು ಹಾರಿಸಿದ್ದು ಯಾರು ಎಂಬುದು ಎಲ್ಲರಿಗೂ ತಿಳಿದಿದ್ದರೂ, ಅಪರಿಚಿತ ವ್ಯಕ್ತಿಗಳ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಮಾಡಲು ವಿರೋಧ ಪಕ್ಷದ ನಾಯಕರು ಸತತ ಎಂಟು ಗಂಟೆಗಳ ಕಾಲ ಕುಳಿತುಕೊಳ್ಳಬೇಕಾದ ಪರಿಸ್ಥಿತಿ ಎದುರಾಗಿದ್ದು ಅತ್ಯಂತ ದುರದೃಷ್ಟಕರ. ದೆಹಲಿ ಪೊಲೀಸ್ ಠಾಣೆಯಲ್ಲಿ ಸಾಮಾನ್ಯ ಮನುಷ್ಯನಿಗೆ ನ್ಯಾಯ ಪಡೆಯಲು ಅವಕಾಶವಿಲ್ಲದಿರುವುದು ವಿಷಾದನೀಯ. ಕೇವಲ ದೂರು ದಾಖಲಿಸಲು ರಾಹುಲ್ ಗಾಂಧಿಯವರ ಮಧ್ಯಪ್ರವೇಶದ ಅಗತ್ಯವಿದ್ದರೆ, ಅಶ್ರುವಾಯು ಮತ್ತು ಪೆಲೆಟ್ ಗನ್ ದಾಳಿಗೆ ಒಳಗಾದ ಸಾಮಾನ್ಯ ನಾಗರಿಕರ ಪರಿಸ್ಥಿತಿ ಹೇಗಿರಬಹುದು ಎಂಬುದನ್ನು ಊಹಿಸಿಕೊಳ್ಳಿ' ಎಂದು ಹೇಳಿದರು.

'ಬಿಜೆಪಿಗೆ ಸ್ವಲ್ಪವಾದರೂ ನಾಚಿಕೆಯಿದ್ದಿದ್ದರೆ, ಅವರು ಆಗಲೇ ಸ್ವತಂತ್ರ ತನಿಖೆಗೆ ಆದೇಶಿಸುತ್ತಿದ್ದರು; ಆದರೆ ಅವರು ತಪ್ಪು ಮಾಡಿದವರಾಗಿರುವುದರಿಂದ ಅವರಿಗೆ ಅದರ ಬಗ್ಗೆ ಕಿಂಚಿತ್ತೂ ಕಾಳಜಿಯಿಲ್ಲ. ಸದ್ಯಕ್ಕೆ ಅಮಿತ್ ಶಾ ಮತ್ತು ಮೋದಿ ಅವರು ಎಷ್ಟು ವಿಚಲಿತರಾಗಿದ್ದಾರೆಂದರೆ, ಸಂಸತ್ತಿಗೆ ಬಂದು ಉತ್ತರಿಸುವ ಧೈರ್ಯವನ್ನೂ ಅವರು ತೋರಲಿಲ್ಲ. ಇನ್ನು ಎಫ್‌ಐಆರ್ ದಾಖಲಿಸುವ ಮಾತೆಲ್ಲಿ ಬಂತು?' ಎಂದು ಅವರು ಹೇಳಿದರು.

ಲೋಚಬ್ ಅವರ ದೂರಿನ ಮೇರೆಗೆ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಸಂಸತ್ ರಸ್ತೆ ಪೊಲೀಸ್ ಠಾಣೆಯಲ್ಲಿ ರಾಹುಲ್ ಗಾಂಧಿ ನಡೆಸಿದ ಧರಣಿ ನಡೆಸಿದ ನಂತರ, ಶುಕ್ರವಾರ ಸಂಜೆ ದೆಹಲಿ ಪೊಲೀಸರು ಅಂತಿಮವಾಗಿ ಭಾರತೀಯ ನ್ಯಾಯ ಸಂಹಿತೆಯ (ಃಓಖ) ಸೆಕ್ಷನ್ 118 ಮತ್ತು 125 ರ ಅಡಿಯಲ್ಲಿ ಎಫ್‌ಐಆರ್ ದಾಖಲಿಸಿದರು.

ಜುಲೈ 20 ರಂದು ಕನ್ನಾಟ್ ಪ್ಲೇಸ್‌ನಲ್ಲಿ ಪೆಲೆಟ್ ಗನ್ ದಾಳಿಯಿಂದಾಗಿ ಗಾಯಗೊಂಡಿದ್ದರೂ, ತನ್ನ ದೂರು ದಾಖಲಿಸಿಕೊಳ್ಳುತ್ತಿಲ್ಲ ಎಂದು ಸಂತ್ರಸ್ತರು ಆರೋಪಿಸಿದ್ದರು. ತಾವು ಏಮ್ಸ್‌ನಲ್ಲಿ ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದರೂ, ತಮ್ಮ ದೃಷ್ಟಿಶಕ್ತಿಯ ಮೇಲೆ ಪರಿಣಾಮ ಬೀರಿದೆ ಎಂದು ಅವರು ಹೇಳಿಕೊಂಡಿದ್ದರು.



ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ಖರ್ಗೆ, 'ವಂದೇ ಮಾತರಂ' ಕುರಿತಾದ ವಿವಾದವು ತುರ್ತು ಆರ್ಥಿಕ ಸಮಸ್ಯೆಗಳು, ನಿರುದ್ಯೋಗ ಮತ್ತು ಪ್ರತಿಭಟನಾನಿರತ ವಿದ್ಯಾರ್ಥಿಗಳ ವಿರುದ್ಧದ ಪೊಲೀಸ್ ಕ್ರಮದಿಂದ ಸಾರ್ವಜನಿಕರ ಗಮನವನ್ನು ಬೇರೆಡೆಗೆ ಸೆಳೆಯಲು ಸೃಷ್ಟಿಸಲಾದ ಉದ್ದೇಶಪೂರ್ವಕ ತಂತ್ರವಾಗಿದೆ' ಎಂದರು.

'ಜಂತರ್ ಮಂತರ್ ಪ್ರತಿಭಟನೆ, ಆರ್‌ಎಸ್‌ಎಸ್ ಕುರಿತಾದ ಅನುಮಾನಗಳು, ನಿರುದ್ಯೋಗ ಮತ್ತು ಆರ್ಥಿಕ ಸಂಕಷ್ಟದಂತಹ ವಿಷಯಗಳಿಂದ ಜನರ ಗಮನವನ್ನು ಬೇರೆಡೆಗೆ ಸೆಳೆಯುವ ತಂತ್ರವೇ 'ವಂದೇ ಮಾತರಂ' ವಿವಾದವಾಗಿದೆ.

ಇಂದು ಡಾಲರ್ ಎದುರು ರೂಪಾಯಿಯ ಮೌಲ್ಯ ಎಷ್ಟಿದೆ? 98 ರೂಪಾಯಿ. ಅವರು ಮಾಡುತ್ತಿರುವುದು ಇದನ್ನೇ. ಅಮೆರಿಕದಿಂದ 500 ಶತಕೋಟಿ ಡಾಲರ್ ಮೌಲ್ಯದ ಸರಕುಗಳನ್ನು ಖರೀದಿಸಬೇಕಾದ ಅಮೆರಿಕದೊಂದಿಗಿನ ವ್ಯಾಪಾರ ಒಪ್ಪಂದದ ವಿಷಯದಿಂದ ಗಮನವನ್ನು ಬೇರೆಡೆಗೆ ಸೆಳೆಯಲು ಇವೆಲ್ಲವನ್ನೂ ಮಾಡಲಾಗುತ್ತಿದೆ. ಒಂದು ಎಫ್‌ಐಆರ್ ದಾಖಲಿಸುವುದು 'ವಂದೇ ಮಾತರಂ' ವಿಷಯದಿಂದ ಗಮನವನ್ನು ಬೇರೆಡೆಗೆ ಸೆಳೆಯುವ ಪ್ರಯತ್ನವೇ? ಮತ್ತು ನಮಗೆ 'ವಂದೇ ಮಾತರಂ' ಬಗ್ಗೆ ಪಾಠ ಮಾಡಲು ಇವರು ಯಾರು? ಸ್ವಾತಂತ್ರ್ಯ ಹೋರಾಟದ ಸಮಯದಲ್ಲಿ ಬಿಜೆಪಿ ಮತ್ತು ಆರ್‌ಎಸ್‌ಎಸ್ ಎಲ್ಲಿ ಇದ್ದವು? 1937ರಲ್ಲಿ ಪಂಡಿತ್ ನೆಹರು, ನೇತಾಜಿ ಬೋಸ್, ರವೀಂದ್ರನಾಥ ಟ್ಯಾಗೋರ್ ಮತ್ತು ಸರ್ದಾರ್ ವಲ್ಲಭಭಾಯ್ ಪಟೇಲ್ ಅವರು ಈ ಬಗ್ಗೆ ಚರ್ಚಿಸಿದಾಗ, ಸಂವಿಧಾನ ರಚನಾ ಸಭೆಯಲ್ಲೂ ಇದರ ಬಗ್ಗೆ ಚರ್ಚೆ ನಡೆದಿತ್ತು. ಹಾಗಾದರೆ, ಇವರೆಲ್ಲರೂ ದೇಶವಿರೋಧಿಗಳೇ?' ಎಂದು ಪ್ರಶ್ನಿಸಿದರು.

'ಅವರು ನಿಜವಾಗಿಯೂ ದೇಶಭಕ್ತರಾಗಿದ್ದರೆ, ಅಮಿತ್ ಶಾ ಮತ್ತು ಪ್ರಧಾನಿ ಮೋದಿ ನಾಗಪುರಕ್ಕೆ ಹೋಗಿ, ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರಿಗೆ 'ನಮಸ್ತೆ ಸದಾ ವತ್ಸಲೆ' ಕೈಬಿಡುವಂತೆ ಹಾಗೂ ಎಲ್ಲ ಆರ್‌ಎಸ್‌ಎಸ್ ಶಾಖೆಗಳಲ್ಲಿ ತ್ರಿವರ್ಣ ಧ್ವಜದ ಮುಂದೆ ಕೈಮುಗಿದು 'ವಂದೇ ಮಾತರಂ' ಹಾಡುವುದನ್ನು ಖಚಿತಪಡಿಸುವಂತೆಯೂ ಹೇಳಲಿ. ಟೆಲಿಪ್ರಾಂಪ್ಟರ್ ಸಹಾಯವಿಲ್ಲದೆ ನಮ್ಮ ರಾಷ್ಟ್ರಗೀತೆಯನ್ನು – ಅದರ ಕೊನೆಯ ಎರಡು ಚರಣಗಳನ್ನೂ ಒಳಗೊಂಡಂತೆ – ಪೂರ್ತಿಯಾಗಿ ಹಾಡುವಂತೆ ನಾನು ಪ್ರಧಾನಿ ಮೋದಿ, ಅಮಿತ್ ಶಾ ಮತ್ತು ಇಡೀ ಬಿಜೆಪಿ ಸಂಪುಟಕ್ಕೆ ಸವಾಲು ಹಾಕುತ್ತೇನೆ; ಅವರು ಹಾಗೆ ಮಾಡಲು ಸಾಧ್ಯವಾದರೆ ನಾನು ರಾಜೀನಾಮೆ ನೀಡುತ್ತೇನೆ' ಎಂದು ಹೇಳಿದರು.

ಮಾಜಿ ಸಚಿವ ಬಿ ನಾಗೇಂದ್ರ ಅವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಸಿಬಿಐ ಅನುಮತಿ ಕೋರಿದೆ ಎಂಬ ವರದಿಗಳ ಕುರಿತಾದ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಖರ್ಗೆ, 'ಸಿಬಿಐ ಯಾವ ಆಧಾರದ ಮೇಲೆ ಈ ಕ್ರಮಕ್ಕೆ ಮುಂದಾಗಿದೆ ಎಂಬುದು ನಮಗೆ ತಿಳಿದಿಲ್ಲ. ಅವರು ಮೊದಲು ರಾಜ್ಯ ಸರ್ಕಾರವನ್ನು ಸಂಪರ್ಕಿಸಬೇಕಿತ್ತು. ಕಾನೂನು ಕ್ರಮಕ್ಕೆ ಅನುಮತಿ ಕೋರುವ ಯಾವುದೇ ಮನವಿ ನಮಗೆ ಬಂದಿಲ್ಲ. ತನಿಖೆಗಾಗಿ ಸಿಬ್ಬಂದಿಯನ್ನು ಒದಗಿಸುವಂತೆ ಅವರು ಈ ಹಿಂದೆ ಪತ್ರ ಬರೆದಿದ್ದರು ಅಷ್ಟೇ' ಎಂದು ಅವರು ಹೇಳಿದರು.

ಕರ್ನಾಟಕದಲ್ಲಿ ಬಿಜೆಪಿ ಹಮ್ಮಿಕೊಂಡಿರುವ ಪಾದಯಾತ್ರೆಯನ್ನು ಟೀಕಿಸಿದ ಸಚಿವರು, ರಾಜ್ಯ ವಿಧಾನಸಭೆಯಲ್ಲಿ ಅರ್ಥಪೂರ್ಣ ಚರ್ಚೆಗಳಿಂದ ದೂರ ಉಳಿಯುವ ಉದ್ದೇಶದಿಂದ ಹಾಗೂ ಪಕ್ಷದೊಳಗಿನ ಭಿನ್ನಾಭಿಪ್ರಾಯ ಮತ್ತು ರಾಜ್ಯ ಬಿಜೆಪಿ ಅಧ್ಯಕ್ಷ ಬಿವೈ ವಿಜಯೇಂದ್ರ ಹಾಗೂ ವಿರೋಧ ಪಕ್ಷದ ನಾಯಕ ಆರ್ ಅಶೋಕ್ ನಡುವಿನ ನಾಯಕತ್ವದ ಸಂಘರ್ಷವನ್ನು ಮುಚ್ಚಿಹಾಕಲು ವಿರೋಧ ಪಕ್ಷವು ಈ ಪಾದಯಾತ್ರೆಯನ್ನು ಬಳಸಿಕೊಳ್ಳುತ್ತಿದೆ ಎಂದು ಆರೋಪಿಸಿದರು.

ಕಾಣೆಯಾಗಿರುವ ಐಎಎಸ್ ಅಧಿಕಾರಿ ಕುರಿತಾದ ವರದಿಗಳ ಬಗ್ಗೆ ಮಾತನಾಡಿದ ಖರ್ಗೆ, 'ಅವರ ಕುಟುಂಬದಿಂದ ಯಾವುದೇ ದೂರು ಬಂದಿಲ್ಲ. ಅವರನ್ನು ಕೊನೆಯದಾಗಿ ವಿಮಾನ ನಿಲ್ದಾಣದಲ್ಲಿ ನೋಡಲಾಗಿತ್ತು. ಸದ್ಯ ಅವರ ಇರುವಿಕೆ ಬಗ್ಗೆ ಮಾಹಿತಿ ಇಲ್ಲ ಮತ್ತು ಶೋಧ ಕಾರ್ಯ ನಡೆಯುತ್ತಿದೆ' ಎಂದು ತಿಳಿಸಿದರು.

Printed By: DEVANAHALLI TQ, BANGALORE RURAL DIST. PRINTER: J AMBRISH, PRINTED AT: KALYANI PRINTERS, GROUND FLOOR, FLAT NO. 12/1, 1ST CROSS ROAD, MYSURE ROAD, OLD TOLLGATE, NEAR BY GOPALAN MALL, BENGALURU, KARNATAKA-560026. Published & owned by RADHIKA A. R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI TALUK, TUMAKURU DIST. KARNATAKA PIN-572132, and published at TUMAKURU. BEHAIND AC OFFICE, SWEET WATER BORE WELL ROAD, MADHUGIRI, MADHUGIRI TALUK, TUMAKURU. DIST. KARNATAKA PIN-572132 Editor: RADHIKA A.R. "KARNATAKA SUCCESS NO 1 " KANNADA Daily News Paper